ಸಂಪುಟ: 13 Volume ಸಂಚಿಕೆ: 277 Issue ಪುಟಗಳು 08 Pages ಸೋಮವಾರ 22 ಡಿಸೆಂಬರ್ 2025 ₹6 PRGINO.120927 (RNINO:KARKAN/2011/48371) BDR/054/2026-2027 mallammanudi@gmail.com www.mallammanudi.in 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**

ಪ್ರೀತಿ ಇದ್ದಲ್ಲಿ ನಂಬಿಕೆ ಇರಲೇ ಬೇಕೆಂದಿಲ್ಲ ಆದರೆ ನಂಬಿಕೆ ಇದ್ದಲ್ಲ ಪ್ರೀತಿ ಇದ್ದೇ ಇರುವುದು.
–ಸಂತ ಕಬೀರ

ತಂಬಾಕು ಮುಕ್ತ ಯುವ ಅಭಿಯಾನ 6

ಪಟ್ಟದಕಲ್ಲು ಸ್ಮಾರಕಗಳಿಗೆ ಲೈಟಿಂಗ್ ಮೆರಗು 7

ಹೊರಗಡೆ ಉರ್ದು ಬೋರ್ಡ್, ಒಳಗಡೆ ಕನ್ನಡ 8



ಮಾನ್ಯ ಕೇಂದ್ರ ಸಚಿವರಾದ ಶ್ರೀ ಹೆಚ್.ಡಿ. ಕುಮಾರಸ್ವಾಮಿ ಅವರು ಶ್ರೀ ಆದಿಚುಂಚನಗಿರಿ ಕ್ಷೇತ್ರಕ್ಕೆ ತೆರಳಿ ಶ್ರೀ ಕಾಲಭೈರವೇಶ್ವರ ದೇವರಿಗೆ ಪೂಜೆ ಸಲ್ಲಿಸಿದರು. ನಂತರ ಪರಮಪೂಜ್ಯ ಜಗದ್ಗುರುಗಳಾದ ಶ್ರೀ ಶ್ರೀ ಶ್ರೀ ಡಾ. ಬಾಲಗಂಗಾಧರ ನಾಥ ಮಹಾಸ್ವಾಮಿಗಳ ಗದ್ದುಗೆ ಪೂಜೆ ಸಲ್ಲಿಸಿ, ಬಳಿಕ ಪರಮಪೂಜ್ಯ ಜಗದ್ಗುರುಗಳಾದ ಶ್ರೀಶ್ರೀಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರ ಆಶೀರ್ವಾದ ಪಡೆದರು.

## ಭಾರತೀಯ ರೈಲು ಪ್ರಯಾಣ ದರ ಹೆಚ್ಚಳ

**ಹೊಸದಿಲ್ಲಿ:** 26. 12. 2025 ರಿಂದ ಭಾರತೀಯ ರೈಲ್ವೆ ತನ್ನ ಪ್ರಯಾಣ ದರಗಳಲ್ಲಿ ಬದಲಾವಣೆ ತರಲು ಉದ್ದೇಶಿಸಿದೆ. ಈ ಹೊಸ ನಿಯಮಗಳು ಸಾಮಾನ್ಯ, ಮೇಲ್ ಮತ್ತು ಎಕ್ಸ್‌ಪ್ರೆಸ್ ರೈಲುಗಳ ಪ್ರಯಾಣಿಕರ ಮೇಲೆ ಪರಿಣಾಮ ಬೀರಲಿವೆ. 215 ಕಿ.ಮೀ. ವರೆಗಿನ ಸಾಮಾನ್ಯ ವರ್ಗದ ಪ್ರಯಾಣಿಕರಿಗೆ ಟಿಕೆಟ್ ದರದಲ್ಲಿ ಯಾವುದೇ ಹೆಚ್ಚಳ ಇರುವುದಿಲ್ಲ. ಆದರೆ, 215 ಕಿಲೋಮೀಟರ್‌ಗಿಂತ ಹೆಚ್ಚು ದೂರ ಪ್ರಯಾಣಿಸುವವರಿಗೆ ಸಾಮಾನ್ಯ ವರ್ಗದಲ್ಲಿ ಪ್ರತಿ ಕಿಲೋಮೀಟರ್‌ಗೆ 1 ಪೈಸೆ ಮತ್ತು ಮೇಲ್/ಎಕ್ಸ್‌ಪ್ರೆಸ್ ಸೇವೆಗಳಲ್ಲಿ ಪ್ರತಿ ಕಿ.ಮೀ. 2 ಪೈಸೆ ದರ ಏರಿಕೆಯಾಗಲಿದೆ. ಈ ಬದಲಾವಣೆಯು ನಾನ್–ಎಸಿ ಮತ್ತು ಎಸಿ ಎರಡೂ ವಿಭಾಗಗಳಿಗೆ ಅನ್ವಯಿಸುತ್ತದೆ. ಈ ದರ ಪರಿಷ್ಕರಣೆಯಿಂದ 600 ಕೋಟಿ ರೂಪಾಯಿಗಳಷ್ಟುಹೆಚ್ಚುವರಿಆದಾಯವನ್ನು ರೈಲ್ವೆ ನಿರೀಕ್ಷಿಸಿದೆ.





## ತೀವ್ರ ಚಳಿ: ಆರೆಂಜ್ ಅಲರ್ಟ್ ಘೋಷಣೆ

**ಬೆಂಗಳೂರು:** ಅತೀವ್ರ ಚಳಿಗೆ ರಾಜ್ಯದ ಜನರು ತತ್ತರಿಸಿದ್ದಾರೆ. ಮುಂದಿನ ಎರಡು ದಿನಗಳ ಕಾಲ ಉತ್ತರ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ತೀವ್ರ ಚಳಿ ಪರಿಸ್ಥಿತಿ ಮುಂದುವರಿಯುವ ಸಾಧ್ಯತೆ ಇದ್ದುದರಿಂದ ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಆರೆಂಜ್ ಅಲರ್ಟ್ ಘೋಷಿಸಿದೆ.

ಬೀದರ್, ಕಲಬುರಗಿ, ವಿಜಯನಗರ, ಯಾದಗಿರಿ, ಬೆಳಗಾವಿ, ಬಾಗಲಕೋಟೆ ಹಾಗೂ ರಾಯಚೂರು ಜಿಲ್ಲೆಗಳಿಗೆ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಣೆ ಮಾಡಿದೆ. ಇದೇ ವೇಳೆ ದಕ್ಷಿಣ ಒಳನಾಡಿನ ಬಹುತೇಕ ಭಾಗಗಳಿಗೂ ಶೀತಗಾಳಿ ಎಚ್ಚರಿಕೆ ನೀಡಲಾಗಿದೆ.

ಡಿಸೆಂಬರ್ 20ರಂದು ರಾಜ್ಯದ ಒಂಬತ್ತು ಜಿಲ್ಲೆಗಳಲ್ಲಿ ಕನಿಷ್ಠ ತಾಪಮಾನ 10 ಡಿಗ್ರಿ ಸೆಲ್ಸಿಯಸ್ಗಿಂತ ಕಡಿಮೆ



ದಾಖಲಾಗಿದೆ. ಐಎಂಡಿ ಅಂಕಿ ಪ್ರಕಾರ, ವಿಜಯಪುರದಲ್ಲಿ ಅತೀ ಕಡಿಮೆ 6.9 ಡಿಗ್ರಿ ಸೆಲ್ಸಿಯಸ್ ಕನಿಷ್ಠ ತಾಪಮಾನ ಇದ್ದು, ಹಾಸನದಲ್ಲಿ 7ಡಿಗ್ರಿ, ಬೀದರ್‌ನಲ್ಲಿ 7.4 ಡಿಗ್ರಿ, ರಾಯಚೂರಿನಲ್ಲಿ 8.8 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

## ಮಹಿಳೆಯರಿಗೆ ಗೃಹಲಕ್ಷ್ಮಿ ಹಣ ಶೀಘ್ರ

**ಬೆಳಗಾವಿ:** ಫೆಬ್ರವರಿ–ಮಾರ್ಚ್ ತಿಂಗಳ ಗೃಹಲಕ್ಷ್ಮಿ ಖಾತೆ ಹಣವನ್ನು ಫಲಾನುಭವಿಗಳ ಖಾತೆಗೆ ಸರ್ಕಾರ ಹಾಕಿಲ್ಲ ಎಂದು ಬೆಳಗಾವಿ ಅಧಿವೇಶನದಲ್ಲಿ ಆಡಳಿತ ಮತ್ತು ವಿಪಕ್ಷಗಳ ಮಧ್ಯೆ ತೀವ್ರ ಚರ್ಚೆಯಾಗಿತ್ತು. ವರ್ಷಾಂತ್ಯದಲ್ಲಿ ಅದಕ್ಕೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸಿಹಿಸುದ್ದಿ ಕೊಟ್ಟಿದ್ದಾರೆ.



ಸೋಮವಾರದಿಂದ ಶನಿವಾರದ ಒಳಗಡೆ 24ನೇ ಕಂತು ಬಿಡುಗಡೆ ಆಗುತ್ತದೆ ಎಂದು ತಿಳಿಸಿದ್ದಾರೆ.



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಜಯನಗರ ಜಿಲ್ಲೆ ಕೂಡ್ಲಿಗಿ ಪಟ್ಟಣದ ಹನ್ನೊಂದನೇವಾರ್ಡ ಊರಮ್ಮನ ಗುಡಿ ಹತ್ತಿರ ಆಶಾ ಕಾರ್ಯಕರ್ತೆ ಮಂಗಳಮ್ಮ ಮತ್ತು ಅಂಗನವಾಡಿ ಸಹಾಯಕರಾದಾ ಸೊಲ್ಲಮ್ಮ ಸರ್ಕಾರಿ ಆಸ್ಪತ್ರೆಯ ನರ್ಸ್ ಪೋಲಿಯೋ ಎರಡು ಹನಿ ಲಸಿಕೆಯನ್ನು ಜೂಗಲ್‌ರ ಸೊಲ್ಲೇಶ್ ಇವರ ಮಗಳದ ಜೆ ಮಂಗಳ ಇವರಿಗೆ ಹಾಕಿದರು.

## ಅಕ್ರಮ ಕೋಳಿ ಪಂದ್ಯ: FIR

**ಮಂಗಳೂರು:** ಬಂಟ್ವಾಳ ತಾಲೂಕಿನ ಕೇಪು ಗ್ರಾಮದಲ್ಲಿ ಪೊಲೀಸರ ವಿರೋಧದ ನಡುವೆ ಅಕ್ರಮವಾಗಿ ಕೋಳಿ ಪಂದ್ಯ ನಡೆಯುತ್ತಿದ್ದ ಅಡ್ಡೆ ಮೇಲೆ ದಾಳಿ ನಡೆಸಿದ ವಿಟ್ಲ ಪೊಲೀಸರು, ಪುತ್ತೂರು ಶಾಸಕ ಅಶೋಕ್ ಕುಮಾರ್ ರೈ ಮತ್ತಿತರ 16 ಮಂದಿ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.



ಶನಿವಾರ ಕೇಪುವಿನಲ್ಲಿ ಅಕ್ರಮವಾಗಿ ಕೋಳಿ ಜಗಳ ನಡೆಯುತ್ತಿರುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ವಿಟ್ಲ ಸಬ್ ಇನ್ಸ್ಪೆಕ್ಟರ್ ಮತ್ತು ತಂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದಾಗ ಹಲವು ಹುಂಜಗಳು ಪತ್ತೆಯಾಗಿವೆ. ಪೊಲೀಸರು ಅಲ್ಲಿದ್ದ ಸ್ಥಳೀಯರಿಗೆ ಕೋಳಿ ಜಗಳ ನಿಷೇಧದ ಬಗ್ಗೆ ಅರಿವು ಮೂಡಿಸಿದ್ದರು.

# ಕುರ್ಚಿ ಕದನಕ್ಕೆ ಹೈ ಉತ್ತರ

## ಎಲ್ಲದಕ್ಕೂ ವರಿಷ್ಠರ ಕಡೆ ಬೊಟ್ಟು ಬೇಡ: ಖರ್ಗೆ | ವರಸೆ ಬದಲಿಸಿದ ಡಿಕೆಶಿ | ದಿಲ್ಲಿಗೆ ಗಣ್ಯರು

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ/ಬೆಂಗಳೂರು

ನನಗೆ ಯಾವ ಶಾಸಕರ ಬೆಂಬಲವೂ ಬೇಡ. ನನ್ನ ಪರವಾಗಿ ಯಾರೂ ಮಾತನಾಡುವುದು ಬೇಡ ಎನ್ನುತ್ತಿದ್ದ ಡಿ.ಕೆ.ಶಿವಕುಮಾರ್ ತಮ್ಮ ಕಾರ್ಯತಂತ್ರಗಳನ್ನು ಬದಲಾಯಿಸಿದ್ದಾರೆ. ಒಂದೆಡೆ ತೆರೆಮರೆಯ ಸಂಘರ್ಷದ ನಡುವೆಯೂ ರಾಜಮಾರ್ಗದಲ್ಲಿ ಸಂಧಾನ ಚಟುವಟಿಕೆಗಳಿಗೆ ಅಣಿಯಾಗಿರುವುದು ಹೊಸ ಬೆಳವಣಿಗೆ ಆಗಿದೆ.

**ಎಲ್ಲದಕ್ಕೂ ಹೈ ಬೇಡ:** ಪ್ರತಿಯೊಂದಕ್ಕೂ ಹೈಕಮಾಂಡ್ ಕಡೆ ಬೊಟ್ಟು ಮಾಡುವುದು ಸರಿಯಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸ್ಪಷ್ಟಪಡಿಸಿದ್ದಾರೆ. ವರದಿಗಾರರ ಜೊತೆ ಕಲಬುರಗಿಯಲ್ಲಿ ಮಾತನಾಡಿದ ಅವರು, ನನ್ನಿಂದ ಮಾತ್ರ ಪಕ್ಷ ಅಧಿಕಾರಕ್ಕೆ ಬಂದಿದೆ ಅನ್ನುವುದು ಸರಿಯಾದ ಕ್ರಮವಲ್ಲ. ಕಾಂಗ್ರೆಸ್ ಇಮದು ಅಧಿಕಾರದಲ್ಲಿದೆ ಅಂ–ದ್ರೆ ಅದಕ್ಕೆ ನಮ್ಮ ಕಾರ್ಯಕರ್ತರಿಂದ ಹಿಡಿದು ಎಲ್ಲರೂ ಕಾರಣಕರ್ತರು ಎಂದು ಪುನರುಚ್ಚರಿಸಿದ್ದಾರೆ.

**ಯಾವ ಗೊಂದಲವೂ ಇಲ್ಲ:** ಬಿ.ಆರ್. ಸುದರ್ಶನ ಅವರು ಎಲ್ಲಾ ಗೊಂದಲಗಳನ್ನು ಬಗೆಹರಿಸಿ ಎಂದು ಮಲ್ಲಿಕಾರ್ಜುನ ಖರ್ಗೆ ಅವರಿಗೆ ಪತ್ರ ಬರೆದಿರುವ ಬಗ್ಗೆ ಡಿಕೆಶಿವಕುಮಾರ್ ಅವರನ್ನು ಬೆಂಗಳುರಿನಲ್ಲಿ ವರದಿಗಾರರು ಕೇಳಿದ ಪ್ರಶ್ನೆಗೆಸಿ, ನನ್ನ ಪ್ರಕಾರ, ಯಾವ ಗೊಂದಲವೂ ಇಲ್ಲ. ಗೊಂದಲ ಎಲ್ಲಿದೆ? ಗೊಂದಲ ಮಾಧ್ಯಮ, ಬಿಜೆಪಿ ಸೃಷ್ಟಿ ಎಂದಿದ್ದಾರೆ.







### ಜನರ ಆಶೀರ್ವಾದವೇ ಆತ್ಮ ವಿಶ್ವಾಸ

ಹೆಚ್ಚು ಆತ್ಮವಿಶ್ವಾಸ ಇರುವಂತೆ ಕಾಣುತ್ತಿದ್ದೀರಿ ಎಂಬ ಪತ್ರಕರ್ತರ ಪ್ರಕಶ್ನೆಗೆ ಡಿಕೆಶಿ ಉತ್ತರಿಸಿ, ನೀವೇ ನನಗೆ ಆತ್ಮವಿಶ್ವಾಸ. ಅನಗತ್ಯ ಪ್ರಚಾರ ನೀಡುತ್ತಿದ್ದೀರಿ. ಜನರ ಆಶೀರ್ವಾದವೇ ನನಗೆ ಆತ್ಮವಿಶ್ವಾಸ. ಈಗ ತಾನೇ ಹೈಕಮಾಂಡ್ ನಾಯಕರ ಜತೆ ಮಾತನಾಡಿದೆ. ಪರಿಷತ್ ಚುನಾವಣೆ ವಿಚಾರವಾಗಿ ನಾಲ್ಕು ಜನಕ್ಕೆ ಬಿ ಫಾರಂ ನೀಡುವ ವಿಚಾರ ಚರ್ಚೆ ನಡೆಸಿದೆ. ಹೆಸರನ್ನು ಘೋಷಿಸಿ ಎಂದು ಚರ್ಚೆ ನಡೆಸಿದೆ ಎಂದಿದ್ದಾರೆ.

### ಇಬ್ಬರ ನಡುವೆ ಸಂಧಾನದ ಮಾತುಕತೆ ?

ಸಿದ್ದರಾಮಯ್ಯ ಬಣದ ಪ್ರಮುಖರ ಪೈಕಿ ಇಂಧನ ಸಚಿವ ಕೆ.ಜೆ.ಜಾರ್ಜ್ ಅವರನ್ನು ಮೊಟ್ಟಮೊದಲು ಭೇಟಿ ಮಾಡಿ ಬೆಂಬಲ ಯಾಚಿಸಿದರು. ಅದೇ ರೀತಿ ಸತೀಶ್ ಜಾರಕಿಹೊಳಿ, ದಿನೇಶ್ ಗುಂಡೂರಾವ್, ಎಂ.ಬಿ.ಪಾಟೀಲ್ ಅವರನ್ನು ಮನೆಗೆ ಕರೆಸಿ ಚರ್ಚಿಸಿದ್ದಾರೆ. ಡಿ. 27ರಂದು ಡಿ.ಕೆ.ಶಿ ಮತ್ತು ಸಿಎಂ ದೆಹಲಿಗೆ ತೆರಳಲಿದ್ದಾರೆ. ಹೈಕಮಾಂಡ್ ನಾಯಕರ ಜತೆ ಸಂಧಾನ ಮಾತುಕತೆ ಸಾಧ್ಯತೆ ಇದೆ.

### ಡಿಕೆಶಿ–ರಾಜಣ್ಣ ಭೇಟಿ, ಅಚ್ಚರಿಗೆ ಕಾರಣ

ಸಿದ್ದು ಅತ್ಯಾಪ್ತ ಕೆ.ಎನ್.ರಾಜಣ್ಣ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿರುವುದು ಕುತೂಹಲ ಮೂಡಿಸಿದೆ. ಈ ಚರ್ಚೆ ಶುರುವಾದ ಆರಂಭದಿಂದಲೂ ಸಿದ್ದರಾಮಯ್ಯ ಅವರೇ ಸಿಎಂ ಆಗಿ ಮುಂದುವರೆಯುತ್ತಾರೆ ಎನ್ನುತ್ತಿದ್ದ ರಾಜಣ್ಣ ಇದ್ದಕ್ಕಿದ್ದಂತೆ ಡಿಕೆಶಿ ಅವರನ್ನು ಭೇಟಿ ಮಾಡಿರುವುದು ಅಚ್ಚರಿಗೆ ಕಾರಣವಾಗಿದೆ.


### ಸಿಎಂ ಸಿದ್ದು ಪರ ಬ್ಯಾಟ್ ಮಾಡುವ ಬಣ

ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ, ಕೆ.ಜೆ.ಜಾರ್ಜ್, ಡಾ.ಜಿ.ಪರಮೇಶ್ವರ್, ಎಂ.ಬಿ. ಪಾಟೀಲ್, ದಿನೇಶ್ ಗುಂಡೂರಾವ್, ಶಾಸಕ ಬಸವರಾಜ ರಾಯರೆಡ್ಡಿ ಮಾಜಿಸಚಿವ ಕೆ.ಎನ್.ರಾಜಣ್ಣ ಬಲವಾದ ಪ್ರತಿಪಾದಕರಾಗಿದ್ದಾರೆ. ಯಾವುದೇ ಕಾರಣಕ್ಕೂ ಅಧಿಕಾರ ಕೊಡಬೇಡಿ ಎನ್ನುವುದು ಇವರ ವಾದ ಎನ್ನಲಾಗಿದೆ.

## ಬಣ್ಣ ಹಚ್ಚಲು ಸರ್ಕಾರದ ಬಳಿ ಹಣವಿಲ್ಲ: ಸಂಸದ

• ಮಲ್ಲಮ್ಮ ನುಡಿ ವಾರ್ತೆ ಹಾವೇರಿ(ಶಿಗ್ಗಾವಿ)

ಶಹರ ಮತ್ತು ಗ್ರಾಮೀಣ ಶಿಕ್ಷಣದಲ್ಲಿ ಬಹಳಷ್ಟು ಅಂತರ ಇದೆ. ಗ್ರಾಮೀಣ ಮಕ್ಕಳು ನಗರ ಮಕ್ಕಳ ಜೊತೆ ಸ್ಪರ್ಧೆ ಮಾಡುವುದು ಬಹಳ ಕಷ್ಟವಿದೆ. ಗ್ರಾಮೀಣ ಮಕ್ಕಳಿಗೆ ಪ್ರತಿಭೆಗೆ ಕೊರತೆ ಇಲ್ಲ. ತಂತ್ರಜ್ಞಾನ ವೇಗವಾಗಿ ಬೆಳೆಯುತ್ತಿದೆ ಅದಕ್ಕೆ ತಕ್ಕಂತೆ ಬದಲಾಗಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.



ಇಂದು ಹಾವೇರಿ ಜಿಲ್ಲೆಯ ಶಿಗ್ಗಾಂವ ಪಟ್ಟಣದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ರಾಜ್ಯ ಮಟ್ಟಕ್ಕೆ ಪ್ರಥಮ ಸ್ಥಾನ ಪಡೆದ ಶಿಗ್ಗಾಂವ–ಸವಣೂರ ತಾಲೂಕಿನ ವಿದ್ಯಾರ್ಥಿಗಳಿಗೆ ಡಾ.ಎಫ್.ಜಿ ಪಾಟೀಲ್ ಇವರಿಂದ ಏರ್ಪಡಿಸಿದ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಎಫ್ ಜಿ ಪಾಟೀಲರು ಕಲಿಯುವ ಸಂದರ್ಭದಲ್ಲಿ ಶಿಕ್ಷಣಕ್ಕೆ ಇಷ್ಟು ಮಹತ್ವ ಇರಲಿಲ್ಲ ಎಂದರು. ಈ ಸಂಧರ್ಭದಲ್ಲಿ ಮಾಜಿ ಸಂಸದ ಮಂಜುನಾಥ ಕುನ್ನೂರ, ಎಫ್.ಜಿ ಪಾಟೀಲ್, ಶಿವಾನಂದ ಮ್ಯಾಗೇರಿ ಇನ್ನಿತರರಿದ್ದರು.

## ಚಿನ್ನ ಗೆದ್ದರೆ 6 ಕೋಟಿ ರೂ. ಘೋಷಣೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಚಿನ್ನದ ಪದಕ ಗೆದ್ದ ರಾಜ್ಯದ ಕ್ರೀಡಾಪಟುಗಳಿಗೆ ಸರ್ಕಾರದಿಂದ 6 ಕೋಟಿ ರೂಪಾಯಿ ನಗದು ಬಹುಮಾನ ನೀಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಘೋಷಿಸಿದ್ದಾರೆ.



ಕರ್ನಾಟಕ ಒಲಂಪಿಕ್ಸ್ ಸಂಸ್ಥೆ ವತಿಯಿಂದ ನೀಡಲಾಗುತ್ತಿರುವ ಕರ್ನಾಟಕ ಒಲಂಪಿಕ್ 2025 ಪ್ರಶಸ್ತಿಗೆ ಭಾಜನರಾಗಿರುವ ಕ್ರೀಡಾ ಸಾಧಕರಿಗೆ ಪ್ರಶಸ್ತಿ ವಿತರಿಸಿ ಅವರು ಮಾತನಾಡಿ, 1958 ರಲ್ಲಿ ಪ್ರಾರಂಭವಾದ ಒಲಂಪಿಕ್ಸ್ ಸಂಸ್ಥೆ ಇಲ್ಲಿಯವರೆಗೆ ಕ್ರೀಡಾ ಕ್ಷೇತ್ರದ ಅಭಿವೃದ್ಧಿಗೆ ಕೊಡುಗೆ ನೀಡುತ್ತಾ ಬಂದಿದೆ. ವಿಧಾನ ಪರಿಷತ್ ಸದಸ್ಯರಾದ ಗೋವಿಂದರಾಜ್ ಅವರು ಸಂಸ್ಥೆಯ ಅಧ್ಯಕ್ಷತೆ ವಹಿಸಿಕೊಂಡ ನಂತರ ಸಂಸ್ಥೆಯು ಹೆಚ್ಚು ಕ್ರಿಯಾಶೀಲವಾಗಿದೆ ಎಂದು ವಿವರಿಸಿದ್ದಾರೆ.

## ಬುದ್ಧಿಮಾಂದ್ಯರ ಮೇಲೆ ಹಲ್ಲೆ..!

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಬಾಗಲಕೋಟೆಯ ಅನಧಿಕೃತ ದಿವ್ಯಜ್ಯೋತಿ ಬುದ್ಧಿಮಾಂದ್ಯ ಶಾಲೆಯಲ್ಲಿ ಶಿಕ್ಷಕ ದಂಪತಿ ಬುದ್ಧಿಮಾಂದ್ಯನ ಮೇಲೆ ಅಮಾನವೀಯವಾಗಿ ಹಲ್ಲೆ ನಡೆಸಿರಿವ ವೀಡಿಯೊ ವೈರಲ್ ಆಗಿದೆ. ಈ ಘಟನೆಗೆ ಎಲ್ಲೆಡೆ ಆಕ್ರೋಶ ವ್ಯಕ್ತವಾಗಿದೆ.

ಮುಧೋಳ ತಾಲೂಕಿನ ಮಂಟೂರು ಗ್ರಾಮದ 16 ವರ್ಷದ ಬಾಲಕ ಹಲ್ಲೆಗೊಳಗಾದ ಬುದ್ಧಿಮಾಂದ್ಯ. ಅನಧಿಕೃತ ಶಾಲೆಯ ಮುಖ್ಯಶಿಕ್ಷಕ ಅಕ್ಷಯ ಇಂದುಲ್ಕರ್, ಶಿಕ್ಷಕಿ ಮಾಲಿನಿ ದಂಪತಿ ಬಾಲಕನ ಕಣ್ಣಿಗೆ ಕಾರದಪುಡಿ ಎರಚಿ, ಬೆಲ್ಟ್ ಮತ್ತು ಪ್ಲಾಸ್ಟಿಕ್ ಪೈಪ್ನಿಂದ ಮನಬಂದಂತೆ ಹಲ್ಲೆ ನಡೆಸಿದ್ದು, ಆತ ನೆಲಕ್ಕೆ ಬಿದ್ದು ಹೊರಳಾಡುವ ವಿಡಿಯೋ



ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಘಟನೆ ಬೆನ್ನಲ್ಲೇ ಶಿಕ್ಷಕರ ವಿರುದ್ಧ ಪಾಲಕರು ತೀವ್ರ ಆಕ್ರೋಶ ಹೊರಹಾಕಿದ್ದು, ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಎಫ್ಐಆರ್ ದಾಖಲಿಸಿಕೊಂಡ ನವನಗರ ಪೋಲಿಸರು ಸ್ಥಳಕ್ಕೆ ಭೇಟಿ ನೀಡಿ ತನಿಖೆ ಆರಂಭಿಸಿದ್ದು, ಹಲ್ಲೆಕೋರ ಪತಿ–ಪತ್ನಿಯನ್ನು ಪೋಲಿಸರು ವಶಕ್ಕೆ ಪಡೆದಿದ್ದಾರೆ.

### ಶಾಲೆ ಬಂದ್‌ಗೆ ತಾಯಿ ಆಗ್ರಹ

ಶಿಕ್ಷಕರು ನನ್ನ ಮಗನ ಮೇಲೆ ಹಲ್ಲೆ ನಡೆಸುವುದನ್ನು ನೋಡಿ ಆಘಾತವಾಯಿತು. ಮಕ್ಕಳ ಸುರಕ್ಷತೆಗಾಗಿ ಸರ್ಕಾರ ಕೂಡಲೇ ಶಾಲೆಯನ್ನು ಬಂದ್ ಮಾಡಬೇಕೆಂದು ಬಾಲಕನ ತಾಯಿ ಪಾರ್ವತಿ ರಾಥೋಡ್ ಅವರು ಹೇಳಿದ್ದಾರೆ. ಇದಕ್ಕೆ ಸಚಿವೆ ಲಕ್ಷ್ಮಿಹೆಬ್ಬಾಳ್ಕರ್ ಪ್ರತಿಕ್ರಿಯಿಸಿ, ಶೀಘ್ರ ಕ್ರಮ ಕೈಗೊಳ್ಳಲಾಗುವುದು ಎಂದಿದ್ದಾರೆ.

## 5,800 ಹೊಸ ಬಸ್ ಖರೀದಿ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಎರಡೂವರೆ ವರ್ಷಗಳಲ್ಲಿ ರಾಜ್ಯ ಸರ್ಕಾರ ಸಾರಿಗೆ ಇಲಾಖೆಯಲ್ಲಿ 10,000 ಸಿಬ್ಬಂದಿಯನ್ನು ನೇಮಕ ಮಾಡಿದ್ದು, 5,800 ಹೊಸ ಬಸ್‌ಗಳನ್ನು ಖರೀದಿ ಮಾಡಿದೆ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿದ್ದಾರೆ. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ ಸೇರಿದ 142 ಹೊಸ ಬಸ್‌ಗಳಿಗೆ ಚಾಲನೆ ನೀಡಿದ ಬಳಿಕ ಸಚಿವರು ಮಾತನಾಡಿ, 10,000 ನೇಮಕಾತಿಗಳಲ್ಲಿ 9,000 ನೇರ ನೇಮಕಾತಿಗಳು ಆಗಿದ್ದು, ಉಳಿದ 1,000 ನೇಮಕಾತಿಗಳು ಅನುಕಂಪದ ಆಧಾರದ ನೇಮಕ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಪರಿಸರ ಮಾಲಿನ್ಯ ನಿಯಂತ್ರಣದ ಉದ್ದೇಶದಿಂದ ರಾಜ್ಯ ಸರ್ಕಾರವು 225 ಎಲೆಕ್ಟ್ರಿಕ್ ಬಸ್‌ಗಳನ್ನು ಪರಿಚಯಿಸಲು ನಿರ್ಧರಿಸಿದ್ದು, ಇದರಲ್ಲಿ ಕಲಬುರಗಿಗೆ 100, ವಿಜಯಪುರಕ್ಕೆ 25 ಮತ್ತು ಬಳ್ಳಾರಿಗೆ 50 ಬಸ್‌ಗಳನ್ನು ಒದಗಿಸಲಾಗುವುದು. ಬಳಿಕ ಕೆಎಸ್‌ಆರ್ಟಿಸಿ ಸಿಬ್ಬಂದಿಯ ವೇತನ ಹೆಚ್ಚಳ ಕುರಿತು ಮಾತನಾಡಿದ ಸಚಿವರು, ಅಂತಿಮ ತೀರ್ಮಾನಕ್ಕೂ ಮೊದಲು ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಲಾಗುವುದು ಎಂದು ವಿವರಿಸಿದ್ದಾರೆ.



## ಮಹಿಳೆ ಸ್ವಾವಲಂಬನೆಯಿಂದ ಪ್ರಗತಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಮಹಿಳೆಯರು ಸ್ವಾವಲಂಬಿಗಳಾದಾಗ ಮಾತ್ರ ದೇಶದ ಸಮಗ್ರ ಅಭಿವೃದ್ಧಿ ಸಾಧ್ಯ ಎಂದು ಶಿವಶರಣಪ್ಪಾ ಹುಗ್ಗಿ ಪಾಟೀಲ ತಿಳಿಸಿದರು.

ಬೀದರ್ ಹೇಮರೆಡ್ಡಿ ಮಲ್ಲಮ್ಮ ತಾಯಿಯ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ ಮಹಿಳಾ ಸಮಾವೇಶ ಹಾಗೂ ಮಹಿಳಾ ರೆಡ್ಡಿ ಸಮಾಜದ ದಶಮಾನೋತ್ಸವ ಉದ್ಘಟಿಸಿ ಮಾತನಾಡಿದರು.

ಮಹಿಳೆಯರಿಗೆ ಶಿಕ್ಷಣ, ಉದ್ಯೋಗ ಹಾಗೂ ಆರ್ಥಿಕ ಸ್ವಾತಂತ್ರ್ಯ ದೊರಕಿದರೆ ಕುಟುಂಬದ ಸ್ಥಿತಿ ಸುಧಾರಿಸುವುದರ ಜೊತೆಗೆ ಸಮಾಜ ಮತ್ತು ರಾಷ್ಟ್ರವೂ ಬಲಿಷ್ಠವಾಗುತ್ತದೆ ಎಂದು ಅವರು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಮಹಿಳೆಯರು ಕೃಷಿ, ಶಿಕ್ಷಣ, ಆರೋಗ್ಯ, ಕೈಗಾರಿಕೆ, ವಿಜ್ಞಾನ–ತಂತ್ರ ಜ್ಞಾನ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡು ತ್ತಿದ್ದಾರೆ. ಸ್ವಸಹಾಯ ಸಂಘಗಳು, ಸ್ವ ಉದ್ಯೋಗ ಯೋಜನೆಗಳು ಹಾಗೂ ಸರ್ಕಾರದ ಸಬಲೀಕರಣ ಕಾರ್ಯಕ್ರಮಗಳಿಂದ ಮಹಿಳೆಯರು ಸ್ವಂತ ಆದಾಯ ಗಳಿಸಿ ಆತ್ಮವಿಶ್ವಾಸದಿಂದ ಬದುಕುತ್ತಿದ್ದಾರೆ. ಮಹಿಳೆಯರ ಆರ್ಥಿಕ ಸಬಲೀಕರಣದಿಂದ



ಮಕ್ಕಳ ಶಿಕ್ಷಣ, ಕುಟುಂಬದ ಆರೋಗ್ಯ ಹಾಗೂ ಸಾಮಾಜಿಕ ಮೌಲ್ಯಗಳು ಉತ್ತಮಗೊಳ್ಳುತ್ತಿವೆ. ಮಹಿಳೆಯರು ನಿರ್ಧಾರ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದಾಗ ಸಮಾನತೆ ಮತ್ತು ನ್ಯಾಯಯುತ ಸಮಾಜ ನಿರ್ಮಾಣವಾಗುತ್ತದೆ. ಆದ್ದರಿಂದ ಮಹಿಳೆಯರಿಗೆ ಸಮಾನ ಅವಕಾಶ, ಸುರಕ್ಷತೆ, ಶಿಕ್ಷಣ ಹಾಗೂ ಉದ್ಯೋಗ ಸೌಲಭ್ಯಗಳನ್ನು ಒದಗಿಸುವುದು ಅತ್ಯವಶ್ಯಕವಾಗಿದೆ. ಮಹಿಳೆಯರು ಸ್ವಾವಲಂಬಿಗಳಾದರೆ ದೇಶದ ಅಭಿವೃದ್ಧಿ ವೇಗಗೊಳ್ಳುವುದರಲ್ಲಿ ಯಾವುದೇ ಸಂದೇಹವಿಲ್ಲ ಎಂದು ಶಿವಶರಣಪ್ಪಾ ಹುಗ್ಗಿ ಪಾಟೀಲ ತಿಳಿಸಿದರು. ವಿಶಾಲಾಕ್ಷೀರೆಡ್ಡಿ, ಶಂಕರರೆಡ್ಡಿ ಚಿಟ್ಟಾ, ಡಾ ಜೋತಿ ರೆಡ್ಡಿ, ಸಂಗ್ರಾಮರೆಡ್ಡಿ, ಶಿಲ್ಪಾರೆಡ್ಡಿ, ಬಬಿತಾರಡ್ಡಿ, ಮಲ್ಲಮ್ಮ ರೆಡ್ಡಿ, ಮಲ್ಲಪ್ಪ ಬೋತಗಿ ರಡ್ಡಿ ಸೇರಿದಂತೆ ಇತರರಿದ್ದರು.

## ಕೇಂದ್ರದಲ್ಲಿ ಕಾಂಗ್ರೆಸ್ ಹೈಕಮಾಂಡ್ ತುಂಬಾ ಬಲಹೀನವಾಗಿದೆ. ಇದರಿಂದಾಗಿ ಇಲ್ಲಿ ಕಿತ್ತಾಟ: ಪ್ರಹ್ಲಾದ್ ಜೋಶಿ

# ಶಿಕ್ಷಕರ ವೃತ್ತಿ ಸಾಮರ್ಥ್ಯ ವೃದ್ಧಿಗೆ ಸಂಘಟನೆಗಳು ಪ್ರಮುಖ ಪಾತ್ರ ವಹಿಸಬೇಕು: ಹಳ್ಳದ

**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ಶಿಕ್ಷಕರ ವೃತ್ತಿಪರ ಸಾಮರ್ಥ್ಯವನ್ನು ಹೆಚ್ಚಿಸುವುದು, ಶೈಕ್ಷಣಿಕ ಗುಣಮಟ್ಟವನ್ನು ಬಲಪಡಿಸುವುದು ಹಾಗೂ ನೌಕರರ ಹಿತ ರಕ್ಷಣೆಗೆ ಸಂಘಟನೆಗಳು ಸದಾ ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ. ಹಳ್ಳದ ಅವರು ಹೇಳಿದರು.

ನಗರದ ಪದವಿ ಪೂರ್ವ ಕಾಲೇಜಿನಲ್ಲಿ ಕರ್ನಾಟಕ ರಾಜ್ಯ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ ತಾಲೂಕು ಘಟಕ ಭಾಲ್ಕಿ, ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಧಾರವಾಡ ತಾಲೂಕು ಘಟಕ ಭಾಲ್ಕಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕರು ತಾಲೂಕು ಘಟಕ ಭಾಲ್ಕಿ (ಪ್ರಾಥಮಿಕ ಶಾಲಾ ವಿಭಾಗ) ಹಾಗೂ ಕರ್ನಾಟಕ ರಾಜ್ಯ ಖಅ/ಖಖ ಪ್ರಾಥಮಿಕ ಹಾಗೂ ಮಾಧ್ಯಮಿಕ ಕ್ಷೇಮಾಭಿವೃದ್ಧಿ ಶಿಕ್ಷಕರ ಸಂಘ ತಾಲೂಕು ಘಟಕ ಭಾಲ್ಕಿ ಇವರ ಸಂಯುಕ್ತಾಶ್ರಯದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ



ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯದಲ್ಲಿ ನೂತನವಾಗಿ ಸೇವೆಗೆ ಹಾಜರಾದ ಹಾಗೂ ಬಿಡುಗಡೆ ಹೊಂದಿರುವ ಕ್ಷೇತ್ರ ಸಮನ್ವಯಾಧಿಕಾರಿ/ಇಸಿಓ/ಬಿಆರ್‌ಪಿ ಹಾಗೂ ಸಿಆರ್‌ಪಿ ಗಳ ಸನ್ಮಾನ ಸಮಾರಂಭದಲ್ಲಿ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಕರು ಮತ್ತು ಅಧಿಕಾರಿಗಳ ನಡುವಿನ ಉತ್ತಮ ಸಂವಹನ ಹಾಗೂ ಸಹಕಾರವೇ ಶಿಕ್ಷಣ ವ್ಯವಸ್ಥೆಯ ಯಶಸ್ಸಿನ ಮೂಲವಾಗಿದ್ದು, ಸಂಘಟನೆಗಳು ಈ ಸಂಬಂಧ ಸೇತುವೆಯಾಗಿ ಕಾರ್ಯನಿರ್ವಹಿಸಬೇಕು. ಕೇವಲ ಬೇಡಿಕೆಗಳಿಗಾಗಿ ಮಾತ್ರವಲ್ಲದೆ, ಶಿಕ್ಷಕರ ವೃತ್ತಿಪರ ಬೆಳವಣಿಗೆ, ತರಬೇತಿ, ನವೀನ ಬೋಧನಾ ವಿಧಾನಗಳ ಅಳವಡಿಕೆ ಹಾಗೂ ವಿದ್ಯಾರ್ಥಿ ಹಿತವನ್ನು ಕೇಂದ್ರವಾಗಿಟ್ಟುಕೊಂಡು ಸಂಘಟನೆಗಳು ಕೆಲಸ ಮಾಡಬೇಕೆಂದು ಅವರು ಕರೆ ನೀಡಿದರು.

ಶಿಕ್ಷಕರ ಸಮಸ್ಯೆಗಳ ಕುರಿತು ಮಾತನಾಡಿದ ನಿರಂಜಪ್ಪ ಪಾತ್ರೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ನೌಕರರ ಬೇಡಿಕೆಗಳು, ಹಕ್ಕುಗಳು ಹಾಗೂ ಸೇವಾ ಸಂಬಂಧಿತ ಸಮಸ್ಯೆಗಳನ್ನು ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ಪರಿಹರಿಸುವ ಮೂಲಕ ನೌಕರರಲ್ಲಿ ಆತ್ಮಸ್ಥೈರ್ಯ ಹೆಚ್ಚಿಸಬೇಕು ಎಂದರು. ಶಿಕ್ಷಕರ ಶಾಂತ ಮನಸ್ಥಿತಿಯೇ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ದಾರಿ ಮಾಡಿಕೊಡುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಪ್ರೌಢ ಶಾಲಾ ಶಿಕ್ಷಕರ ಸಂಘ ಭಾಲ್ಕಿಯ ಅಧ್ಯಕ್ಷ ದತ್ತಾತ್ರಿ ಕಾಟಕರ, ಶಿವಕುಮಾರ ಫುಲಾರೆ, ಸುಧಾಕರ ಗಾಯಕವಾಡ ಸೇರಿದಂತೆ ಇತರ ವಕ್ತಾರರು ಮಾತನಾಡಿ, ಸಂಘಟನೆಗಳ ಏಕತೆ, ಶೈಕ್ಷಣಿಕ ಕ್ಷೇತ್ರದ ಸವಾಲುಗಳು ಹಾಗೂ ಮುಂದಿನ ಕಾರ್ಯಯೋಜನೆಗಳ ಬಗ್ಗೆ ಅಭಿಪ್ರಾಯ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಧಾರವಾಡ ಘಟಕದ ನೂತನ ಅಧ್ಯಕ್ಷ ಸ್ಥಾನವನ್ನು ಸ್ವೀಕರಿಸಿದ ಸತ್ಯವಾನ ಕಾಂಬಳೆ ಅವರು ಮಾತನಾಡಿ, ನೌಕರರ ಪರವಾಗಿ ನನ್ನ ಪ್ರಯತ್ನ ಮೀರಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ. ಸಂಘದ ಮೇಲೆ ಶಿಕ್ಷಕರು ಇಟ್ಟಿರುವ ನಂಬಿಕೆಯನ್ನು ಉಳಿಸಿಕೊಂಡು, ಅವರ ಸಮಸ್ಯೆಗಳಿಗೆ ಸ್ಪಂದಿಸುವ ಜವಾಬ್ದಾರಿಯುತ ನಾಯಕತ್ವ ನೀಡುವೆ ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಮನೋಹರ ಹೊಳ್ಕರ, ಅಶೋಕ ಬಿರಾದಾರ, ಮಲ್ಲಿನಾಥ ಸಜ್ಜನ ಸುಖದೇವ ಬಿರಾದಾರ, ರೋಹಿದಾಸ ರಾಠೋಡ,

ಅರವಿಂದ ಪಾಟೀಲ, ಗೋವಿಂದರಾವ ಬಿರಾದಾರ, ದತ್ತು ಮುದ್ದಾಳೆ, ಸೂರ್ಯಕಾಂತ ಖುಳೆ, ಉಲ್ಲಾಸ, ಕಾಂಬಳೆ, ಶರಣಪ್ಪ ಕಲ್ಲಪ್ಪನೋರ, ಗಣಪತಿ ಭಕ್ತಾ, ಶಿವಕುಮಾರ ಪಾಟೀಲ, ಮಲ್ಲಿಕಾರ್ಜುನ ಕನ್ನಳೆ, ಮೀಲಿಂದ ಫುಲೆ , ಬಾಲಿಕಾ ಬಿರಾದಾರ್ , ಅರ್ಜುನ ಕಾಂಬಳೆ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಅನೇಕ ಶಿಕ್ಷಕರು ಉಪಸ್ಥಿತರಿದರು .ಬಸವರಾಜ ದಾನಾ ಅವರು ನಿರೂಪಿಸಿದರು. ನೀಲಕಂಠ ಕುರುಣೆ ಸ್ವಾಗತಿಸಿದರು, ನಾಗನಾಥ ಭೋಸಲೆ ವಂದಿಸಿದರು.

## ಪೌರ ಕಾರ್ಮಿಕರಿಗೆ ತರಬೇತಿ ಕಾರ್ಯಾಗಾರ

**ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ:** 2025–2026 ಖಃಒ 2.0 ಸಾಮರ್ಥ್ಯ ಅಭಿವೃದ್ಧಿ ಯೋಜನೆಅಡಿಯಲ್ಲಿ (Capacity Building) ಘನ ಮತ್ತು ದ್ರವ ತ್ಯಾಜ್ಯ ಸಮರ್ಪಕ ನಿರ್ವಹಣೆ ಕುರಿತು ಪೌರ ಕಾರ್ಮಿಕರಿಗೆ ಮತ್ತು ಸಿಬ್ಬಂದಿಗಳಿಗೆ ತರಬೇತಿ ಕಾರ್ಯಾಗಾರವನ್ನು ನಗರಸಭೆ ಕಾರ್ಯಾಲಯ ಬಸವಕಲ್ಯಾಣ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಯಿತ್ತು.

ನಗರ ಸಭೆ ಪೌರಾಯುಕ್ತರಾದ ಶ್ರೀ ರಾಜು ಡಿ ಬಣಕಾರ್ ರವರ ಅಧ್ಯಕ್ಷತೆಯಲ್ಲಿ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಸ್ವಚ್ಛ ಭಾರತ ಮಿಷನ್ ಕುರಿತು ತರಬೇತಿಯನ್ನು ಪೌರಕಾರ್ಮಿಕರಿಗೆ /ಅಧಿಕಾರಿಗಳಿಗೆ ಕಿವಿಮಾತು ಹೇಳಿ ತಮ್ಮ ಜೀವನದಲ್ಲಿ ಅಳವಡಿಸಿಕೊಂಡ ಇದರ ಸದುಪಯೋಗಪಡೆದುಕೊಳ್ಳಬೇಕು ಎಂದು ಹೇಳಿದರು.

ತರಬೇತಿಯನ್ನು ಬದುಕು ಸೇವಾ ಸಂಸ್ಥೆ(ರಿ) ರವರು ಆಯೋಜನೆ ಮಾಡಿದರು ಬದುಕು ಸೇವಾ ಸಂಸ್ಥೆಯ ಕಾರ್ಯದರ್ಶಿ ರಾಹುಲ ಗುತೆ–ೇದಾರ ಆರೋಗ್ಯದ ಕುರಿತು ಪೌರಕಾರ್ಮಿಕರಿಗೆ ತಿಳಿಹೆಳಿದರು. ಸಹಾಯಕ ಕಾರ್ಯಪಾಲಕರ ಅಭಿಯಂತರರು (ಪರಿಸರ) ಮನೋಜಕುಮಾರ ಎಸ್ ಕಾಂಬಳೆ ಮಾತನಾಡಿ ಹಸಿ ಕಸ ಒಣ ಕಸ & ಹಾನಿಕಾರಕ ರಸವನ್ನು ಬೆರೆ ಬೇರೆಯಾಗಿ ಸಂಗ್ರಹಣೆ ಮಾಡಲು & ಆರೋಗ್ಯವನ್ನು ಕಾಪಾಡಿಕೊಳ್ಳಲು ತಿಳಿಸಿದರು. ಕಂದಾಯ ಅಧಿಕಾರಿಗಳಾದ ಶ್ರೀಮತಿ ಶಿವಲಿಲಾ ಬಿರಾದರ ಪ್ರಭಾರಿ ಕಂದಾಯ ನೀರಿಕ್ಷಕರು ಶ್ರೀ ಸುನೀಲ ವಿರಶೇಟ್ಟಿ, ಕಿರಿಯ



ಆರೋಗ್ಯ ನಿರಿಕ್ಷಕರು ಶ್ರೀ ನಿತ್ಯಾನಂದ ಜಮಾದಾರ, ಕಿರಿಯ ಆರೋಗ್ಯ ನಿರಿಕ್ಷಕರು ಶ್ರೀಮತಿ ಶ್ವೇತಾ ಹೂಗಾರ, ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ಯಲ್ಲಪ್ಪ ದೊಡ್ಡಮನಿ, ಶ್ರೀ ಸಂಜುಕುಮಾರ, ಮಹಾಂತೇಶ ಎಸ್ ಗೌರಕರ , ಸಂದೀಪ ಚುಕ್ಕೆ ತರಬೇತಿ ಕಾರ್ಯಕ್ರಮವನ್ನು ನಡೆಸಿಕೊಟ್ಟರು ಶ್ವೇತಾ ಹೂಗಾರ ರವರು ನಿರೂಪಣೆ ಮಾಡಿದರು ವಂದನಾರ್ಪಣೆಯನ್ನು ರಾಹುಲ ಗುತ್ತೇದಾರರವರು ಮಾಡಿದರು

## ಭಾರತಮಾತೆಯ ಸೇವೆಯೇ ಯುವತಿಯರ ಧ್ಯೇಯವಾಗಲಿ ತಾರುಣ್ಯ ಸಿಂಧು ಸಮಾವೇಶದಲ್ಲಿ ಸ್ಪೂರ್ತಿದಾಯಕ ಕರೆ

**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ಯುವತಿಯರು ರಾಷ್ಟ್ರ ನಿರ್ಮಾಣದಲ್ಲಿ ಸಕ್ರಿಯ ಪಾತ್ರ ವಹಿಸಿ ಭಾರತಮಾತೆಯ ಸೇವೆಗೆ ತಮ್ಮ ಜೀವನವನ್ನು ಅರ್ಪಿಸಬೇಕು ಎಂದು ನಿವೃತ್ತ ಪ್ರಾಂಶುಪಾಲರಾದ ರೇಖಾ ಮಹಾಜನ ಕರೆ ನೀಡಿದರು. ಭಾನುವಾರ ನಗರದ ಖಡಕೇಶ್ವರ ವಿದ್ಯಾಮಂದಿರದಲ್ಲಿ ರಾಷ್ಟ್ರೀಯ ಸೇವಿಕಾ ಸಮಿತಿ ಬೀದರ ಜಿಲ್ಲೆ ವತಿಯಿಂದ ಯುವತಿಯರಿಗಾಗಿ ಆಯೋಜಿಸಲಾಗಿದ್ದ ತಾರುಣ್ಯ ಸಿಂಧು ಯುವತಿಯರ ಸಮಾವೇಶ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ನಾವು ಭಾರತ ದೇಶದಲ್ಲಿ ಹುಟ್ಟಿರುವುದು ನಮ್ಮ ಪೂರ್ವ ಜನ್ಮದ ಪುಣ್ಯ. ಈ ಪುಣ್ಯಭೂಮಿಯ ಸೇವೆ ಮಾಡುವುದು ನಮ್ಮೆಲ್ಲರ ಪವಿತ್ರ ಕರ್ತವ್ಯ. ಭಾರತ ದೇಶದ ಶ್ರೀಮಂತ ಸಂಸ್ಕೃತಿ, ಸಂಸ್ಕಾರ ಹಾಗೂ ಪರಂಪರೆಯನ್ನು ಉಳಿಸಿ ಮುಂದಿನ ಪೀಳಿಗೆಗೆ ತಲುಪಿಸುವ ಹೊಣೆಗಾರಿಕೆ ನಮ್ಮ ಮೇಲಿದೆ ಎಂದರು. ಇಂದಿನ ದಿನಗಳಲ್ಲಿ ಪಾಶ್ಚಾತ್ಯ ಸಂಸ್ಕೃತಿಗೆ ಮಾರು ಹೋಗಿ ನಮ್ಮದೇ ಮೌಲ್ಯಗಳನ್ನು ಮರೆತು ಬಿಡುತ್ತಿರುವುದು ಆತಂಕಕಾರಿ ಸಂಗತಿ ಎಂದು ಅವರು ವಿಷಾದ ವ್ಯಕ್ತಪಡಿಸಿದರು. ದೇಶ ನನಗೆ ಏನು ಕೊಟ್ಟಿದೆ? ಎಂಬ ಪ್ರಶ್ನೆಯ ಬದಲು, ನಾನು ದೇಶಕ್ಕಾಗಿ ಏನು ಕೊಡುಗೆ ನೀಡಿದ್ದೇನೆ? ಎಂಬ ಆತ್ಮಾವಲೋಕನ ಪ್ರತಿಯೊಬ್ಬ ಯುವತಿಯರು ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮಹಿಳೆಯರು ಇಂದು ಅಬಲೆಯಲ್ಲ, ಸಬಲೆಯರಾಗಿದ್ದಾರೆ. ಶಿಕ್ಷಣ, ವಿಜ್ಞಾನ ತಂತ್ರಜ್ಞಾನ, ಆಡಳಿತ, ಕ್ರೀಡೆ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲೂ ತಮ್ಮದೇಯಾದ ಛಾಪು ಮೂಡಿಸುತ್ತಿದ್ದಾರೆ ಎಂದರು. ಸ್ವಾಮಿ ವಿವೇಕಾನಂದರ ಪ್ರೇರಣಾದಾಯಕ ಮಾತುಗಳನ್ನು ಉಲ್ಲೇಖಿಸಿ, ದೃಢ ಮನಸ್ಸು ಮತ್ತು ಉಕ್ಕಿನಂತಹ ಆತ್ಮಸ್ಥೈರ್ಯ ಹೊಂದಿದ



ಮಹಿಳೆಯರೇ ರಾಷ್ಟ್ರದ ಭವಿಷ್ಯ ರೂಪಿಸುತ್ತಾರೆ. ಹೆತ್ತ ತಂದೆತಾಯಿಯ ಕನಸುಗಳಿಗೆ ನನಸಾಗುವ ರೀತಿಯಲ್ಲಿ ಯುವತಿಯರು ತಮ್ಮ ಜೀವನದ ಗುರಿಗಳನ್ನು ರೂಪಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದ ಮುಖ್ಯ ವಕ್ತಾರರಾಗಿ ಮಾತನಾಡಿದ ಪ್ರಾಂತ ಸಹ ಸೇವಾ ಪ್ರಮುಖರಾದ ಭಗಿನಿ ಸ್ವರ್ಣಾ ಪಿ.ಉಡುಪ ಅವರು, ಮಾತನಾಡಿ ರಾಷ್ಟ್ರೀಯ ಸೇವಿಕಾ ಸಮಿತಿ 1936ರಲ್ಲಿ ಶ್ರೀಮತಿ ಲಕ್ಷ್ಮಿಬಾಯಿ ಕೆಲ್ಕರ್ ಅವರಿಂದ ಸ್ಥಾಪನೆಯಾಗಿ ಶತಮಾನಕ್ಕೂ ಸಮೀಪಿಸುವ ಸೇವಾ ಪಯಣದಲ್ಲಿದೆ ಮಹಿಳೆಯರಲ್ಲಿ ರಾಷ್ಟ್ರಭಕ್ತಿ, ಸಂಸ್ಕೃತಿ ರಕ್ಷಣೆ, ಶಿಸ್ತಿನ ಜೀವನಶೈಲಿ ಹಾಗೂ ಸೇವಾಭಾವನೆ ಬೆಳೆಸುವ ಮಹತ್ತರ ಕಾರ್ಯ ಮಾಡುತ್ತಿದೆ. ಜೊತೆಗೆ ಭಾರತೀಯ ಸಂಸ್ಕೃತಿ, ಕುಟುಂಬ ವ್ಯವಸ್ಥೆ ಹಾಗೂ ಪರಂಪರೆಯ ರಕ್ಷಣೆ, ಆತ್ಮವಿಶ್ವಾಸ ಮತ್ತು ನಾಯಕತ್ವ ಗುಣಗಳ ಬೆಳವಣಿಗೆಯ ಮೂಲಕ ಮಹಿಳೆಯರನ್ನು ಸಮಾಜದ ಮುಂಚೂಣಿಗೆ ತರುವ ಕೆಲಸವನ್ನು ಸಂಘಟನೆ ಮಾಡುತ್ತಿದೆ ಎಂದು ವಿವರಿಸಿದರು.

ಸೇವಾಭಾವನೆಯ ಮೂಲಕ ಸಮಾಜ ನಿರ್ಮಾಣ, ದುರ್ಬಲ ವರ್ಗಗಳ ಸೇವೆ, ಶಿಸ್ತಿನ ಜೀವನಶೈಲಿ, ಸಮಯಪಾಲನೆ ಮತ್ತು ಹೊಣೆಗಾರಿಕೆಗಳಂತಹ ಮೌಲ್ಯಗಳನ್ನು ಯುವತಿಯರಲ್ಲಿ ಬೆಳೆಸುವುದೇ ಸಮಿತಿಯ ಧ್ಯೇಯವಾಗಿದೆ. ಭಾರತ ಹಿಂದೊಮ್ಮೆ ವಿಶ್ವಗುರುವಾಗಿತ್ತು. ಇಂದು ಮತ್ತೆ ವಿಶ್ವಗುರುವಾಗುವ ಎಲ್ಲಾ ಲಕ್ಷಣಗಳು ನಮ್ಮ ಮುಂದೆ ಸ್ಪಷ್ಟವಾಗಿ ಕಾಣಿಸುತ್ತಿವೆ. ಈ ಮಹತ್ವದ ಸಂದರ್ಭದಲ್ಲಿ ಯುವತಿಯರ ಪಾತ್ರ ಅತ್ಯಂತ ಮುಖ್ಯ. ನಾವು ಭಾರತಮಾತೆಯ ಸುಪುತ್ರಿಯರಾಗಿ ರಾಷ್ಟ್ರದ ಭವಿಷ್ಯವನ್ನು ರೂಪಿಸಬೇಕು ಎಂದು ಹೇಳಿದರು.

ಮಧುಮತಿ ನಾಯಕ ವೈದ್ಯರು, ಮೇಘಾ ಹಲ್ಮಡ್ಗೆ ಕಾರ್ಯದರ್ಶಿಗಳು ನಿರ್ಮಲಾ ಹಲಮಂಡಗೆ ಪದವಿ ಪೂರ್ವ ಮಹಾವಿದ್ಯಾಲಯ, ಸುನೀತಾ ದಾಡಗೆ ಜಿಲ್ಲಾ ಅಧ್ಯಕ್ಷರು ಕರ್ನಾಟಕ ವಚನ ಸಾಹಿತ್ಯ ಪರಿಷತ ಬೀದರ ಮತ್ತಿತರರು ಯುವತಿಯರಿಗೆ ಕಿವಿ ಮಾತುಗಳು ಹೇಳುವ ಮೂಲಕ ನಮ್ಮ ಸಂಸ್ಕೃತಿ, ಸಂಪ್ರದಾಯಗಳು ಬೆಳೆಸಿ ಪೋಷಿಸುವ ಮೂಲಕ ಮಾನವಿಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಮತ್ತು ದೇಶ ಭಕ್ತಿ ಬೆಳೆಸಿಕೊಳ್ಳಬೇಕು ಎಂದರು. ಸಮಾವೇಶದಲ್ಲಿ 150 ಕ್ಕಿಂತ ಹೆಚ್ಚು ಯುವತಿಯರು ಬೆಳಿಗ್ಗೆಯಿಂದ ಸಂಜೆಯವರೆಗೆ ಶಾರೀರಿಕ, ಬೌದ್ಧಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಲಾಭವನ್ನು ಪಡೆದುಕೊಂಡರು ಮತ್ತು ದೇಶಿಯ ಆಟಗಳಲ್ಲಿ ಉತ್ಸಾಹದಿಂದ, ಸಂತೋಷದಿಂದ ಭಾಗವಹಿಸಿದರು.

ಈ ಸಂದರ್ಭದಲ್ಲಿ ಮೀರಾ ಮಂತಾಳ್ಕರ, ಶಿವಲೀಲಾ ಮುದ್ದಾಳೆ, ಲತಾ ನಿಗೇವಾನೆ, ಸರೋಜನಿ ಕುಂಬಾರ, ವಿದ್ಯಾ ಬುದ್ಧನೋರ, ಸವಿತಾ ಪಂಚಬಾಯಿ, ನೀಲಾಂಬಿಕಾ ಸ್ವಾಮಿ, ದೀಪಿಕಾ ಪವಾರ ಮತ್ತಿತರರು ಅನೇಕರು ಉಪಸ್ಥಿತರಿದ್ದರು. ಮಹಾನಂದಾ ಬರಶೇಶಿ ಸ್ವಾಗತಿಸಿದರು, ಮಹೇಶ್ವರಿ ಪಾಂಚಾಳ ನಿರೂಪಿಸಿದರು. ಹೇಮಲತಾ ಜೋಷಿ ವಂದಿಸಿದರು.

## ಬ್ರಿಮ್ಸ್ ಆಸ್ಪತ್ರೆ ತನಿಖೆ ಮತ್ತೆ ಸರಕಾರಕ್ಕೇ ಹಿನ್ನಡೆ, ಡಾ.ಶೆಟಕಾರ್ ಸದ್ಯ ಬಚಾವ್

**ಮಲ್ಲಮ್ಮ ನುಡಿ ವಾರ್ತೆ ಬೀದರ್:**

ಬೀದರ್ ಮೇಡಿಕಲ್ ಕಾಲೇಜಿನ ನಿರ್ದೇಶಕ ಡಾ. ಶಿವಕುಮಾರ ಶೆಟಕಾರ್ ಅವಧಿಯಲ್ಲಿನ ಆಡಳಿತಾತ್ಮಕ ಮತ್ತು ಹಣಕಾಸು ತೀರ್ಮಾನಗಳ ಬಗ್ಗೆ ತನಿಖೆ ನಡೆಸಲು ಮುಂದಾಗಿದ್ದ ರಾಜ್ಯ ಸರಕಾರಕ್ಕೆ ಮತ್ತೆ ಹಿನ್ನಡೆಯುಂಟಾಗಿದೆ. ನಿವೃತ್ತ ನ್ಯಾಯಾಧೀಶರ ಮೂಲಕ ತನಿಖೆ ನಡೆಸುವುದಕ್ಕಾಗಿ ರಾಜ್ಯ ಸರಕಾರ ಅಕ್ಟೋಬರ್ 31 ರಂದು ಹೊರಡಿಸಿದ ಆದೇಶವನ್ನು ಕಲಬುರಗಿ ಹೈಕೋರ್ಟ್ ಪೀಠ ರದ್ದುಪಡಿಸಿದೆ. ಕರ್ನಾಟಕ ನಾಗರಿಕ ಸೇವಾ ನಿಯಮಕ್ಕೆ ಅನುಗುಣವಾಗಿಲ್ಲ ಎಂಬ ಕಾರಣಕ್ಕೆ ಈ ತನಿಖಾ ಆದೇಶವನ್ನು ರದ್ದುಪಡಿಸಲಾಗಿದೆ.

ಅವಧಿಗೆ ಮುನ್ನ ವರ್ಗಾವಣೆ ಮಾಡಿದಾಗ ಮತ್ತು ಜಿಲ್ಲಾಧಿಕಾರಿಯವರ ಮೂಲಕ ತನಿಖೆ ನಡೆಸಲು ಆದೇಶ ಹೊರಡಿಸಿದಾಗಲೂ ಡಾ. ಶಿವಕುಮಾರ ಶೆಟಕಾರ್ ಹೈಕೋರ್ಟ್ ಮೊರೆ ಹೋಗಿದ್ದರು. ರಾಜ್ಯ ಸರಕಾರದ ಕ್ರಮವನ್ನು ಪ್ರಶ್ನಿಸಿದ್ದರು. ಈ ಎರಡೂ ಪ್ರಕರಣಗಳಲ್ಲಿ ಹೈಕೋರ್ಟು ಮಧ್ಯಂತರ ತಡೆಯಾಜ್ಞೆ ನೀಡಿತ್ತು. ನಂತರದ ದಿನಗಳಲ್ಲಿ ರಾಜ್ಯ ಸರಕಾರ ಸ್ವತ: ತಾನೇ ಹೊರಡಿಸಿದ ಎರಡೂ ಆದೇಶಗಳನ್ನು ವಾಪಸ್ ಪಡೆದುಕೊಂಡಿತ್ತು.

ಇದೀಗ ಮೂರನೇ ಬಾರಿಯೂ ರಾಜ್ಯ ಸರಕಾರಕ್ಕೆ ಹಿನ್ನಡೆಯುಂಟಾಗಿದೆ. ಸರಕಾರದ ಆದೇಶದಂತೆ ನಿವೃತ್ತ ನ್ಯಾಯಾಧೀಶರು ಬೀದರ್ ಮೇಡಿಕಲ್ ಕಾಲೇಜಿಗೆ ಭೇಟಿ ನೀಡಿ, ತನಿಖೆ ಪೂರ್ಣಗೊಳಿಸಿದ್ದಾರೆ. ಆದರೆ, ತನಿಖೆ ನಡೆಸುವಂತೆ ಹೊರಡಿಸಿದ ಆದೇಶವೇ ರದ್ದಾಗಿದ್ದರಿಂದ ತನಿಖಾ ವರದಿಯ ಸ್ಥಿತಿಗತಿ ಏನಾಗಬಹುದು ಎಂಬ ಪ್ರಶ್ನೆ ಎದುರಾಗಿದೆ.

ಡಾ.ಶಿವಕುಮಾರ ಶೆಟಕಾರ್ ಅವರಿಗೆ ಸಂಬಂದಿಸಿದಂತೆ ರಾಜ್ಯ ಸರಕಾರ ಮೂರು ಬಾರಿ ಪ್ರತ್ಯೇಕ ಆದೇಶಗಳನ್ನು ಹೊರಡಿಸಿದೆ. ಆದರೆ, ಎಲ್ಲ ಮೂರೂ ಆದೇಶಗಳು ಜಾರಿಯಲ್ಲಿರುವ ನಿಯಮಗಳಿಗೆ ಅನುಗುಣವಾಗಿರಲಿಲ್ಲ. ಮೇಡಿಕಲ್ ಕಾಲೇಜಿನ ಬೈಲಾ ಪ್ರಕಾರ ನಿರ್ದೇಶಕರನ್ನು ಅವಧಿಗೆ ಮುನ್ನ ಕರ್ತವ್ಯದಿಂದ ಬಿಡುಗಡೆ ಮಾಡುವಂತಿರಲಿಲ್ಲ. ಆದರೆ, ರಾಜ್ಯ ಸರಕಾರದ ವೈದ್ಯಕೀಯ ಶಿಕ್ಷಣ ಇಲಾಖೆಯು ಅವಧಿಗೆ ಮೊದಲೇ ಡಾ. ಶೆಟಕಾರ್ ಅವರನ್ನು ನಿರ್ದೇಶಕ ಹುದ್ದೆಯಿಂದ ಬಿಡುಗಡೆ ಮಾಡಿ ಆದೇಶ ಹೊರಡಿಸಿತ್ತು. ಡಾ. ಶೆಟಕಾರ್ ಅವರು ಈ ಆದೇಶವನ್ನು ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು.

ಎರಡನೇ ಬಾರಿ ಡಾ. ಶೆಟಕಾರ್ ವಿರುದ್ಧ ಜಿಲ್ಲಾಧಿಕಾರಿಯವರ ಮೂಲಕ ತನಿಖೆ ನಡೆಸುವಂತೆ ರಾಜ್ಯ ಸರಕಾರ ಆದೇಶ ಹೊರಡಿಸಿತ್ತು. ಬ್ರಿಮ್ಸ್ ಬೈಲಾ ಪ್ರಕಾರ, ಆಡಳಿತ ಮಂಡಳಿಯಲ್ಲಿ ತೀರ್ಮಾನ ಕೈಗೊಂಡು, ನಿವೃತ್ತ ನ್ಯಾಯಾಧೀಶರ ಮೂಲಕವೇ ತನಿಖೆ ನಡೆಸಬೇಕಾಗುತ್ತದೆ. ಜಿಲ್ಲಾಧಿಕಾರಿ ಮೂಲಕ ತನಿಖೆ ನಡೆಸುವ ಆದೇಶವು ಬೈಲಾ ನಿಯಮಕ್ಕೆ ಅನುಗುಣವಾಗಿರಲಿಲ್ಲ. ಹೀಗಾಗಿ ಎರಡನೇ ಬಾರಿಯೂ ರಾಜ್ಯ ಸರಕಾರಕ್ಕೆ ಹಿನ್ನಡೆ ಆಯಿತು.

ಮೂರನೇ ಬಾರಿ ತನಿಖೆಗೆ ಆದೇಶ ಹೊರಡಿಸುವ ಮುನ್ನ ಬೈಲಾ ನಿಯಮವನ್ನು ಪಾಲಿಸಲಾಗಿತ್ತು. ಬೈಲಾ ನಿಯಮಕ್ಕೆ ಅನುಗುಣವಾಗಿ ರಾಜ್ಯ ಸರಕಾರ ಕಾಲೇಜಿನ ಆಡಳಿತ ಮಂಡಳಿ ಸಭೆಯಲ್ಲಿಯೇ ಡಾ. ಶೆಟಕಾರ್ ಅವಧಿಯಲ್ಲಿನ ತೀರ್ಮಾನಗಳ ಬಗ್ಗೆ ತನಿಖೆ ನಡೆಸುವ ತೀರ್ಮಾನ ಕೈಗೊಂಡಿತ್ತು. ಬೈಲಾ ಪ್ರಕಾರವೇ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಂದಲೇ ತನಿಖೆ ನಡೆಸಲು ಮುಂದಾಗಿತ್ತು. ಆದರೆ, ಕರ್ನಾಟಕ ನಾಗರಿಕ ಸೇವಾ ನಿಯಮಗಳ ಪಾಲನೆ ಆಗದಿರುವುದನ್ನು ಡಾ. ಶಿವಕುಮಾರ ಶೆಟಕಾರ್ ಪರ ವಕೀಲರು ಹೈಕೋರ್ಟ್ ಗಮನಕ್ಕೆ ತಂದಿದ್ದರು. ಹೀಗಾಗಿ ಮೂರನೇ ಬಾರಿಯೂ ಶೆಟಕಾರ್ ಕಾನೂನು ಕ್ರಮದಿಂದ ಪಾರಾಗುವಂತಾಯಿತು.

ಡಾ. ಶಿವಕುಮಾರ ಶೆಟಕಾರ್ ಅವರು ಬ್ರಿಮ್ಸ್ ನಿರ್ದೇಶಕರಾಗಿ ಮೂರು ವರ್ಷ ಪೂರ್ಣಗೊಂಡಿವೆ. ನಿರ್ದೇಶಕರ ಕಾರ್ಯಾವಧಿ ನಾಲ್ಕು ವರ್ಷ. ಶೆಟಕಾರ್ ಅವಧಿ ಇನ್ನೊಂದು ವರ್ಷವಷ್ಟೇ ಬಾಕಿ ಉಳಿದಿದೆ. ರಾಜ್ಯ ಸರಕಾರದ ಮುಂದಿನ ನಡೆ ಏನಾಗಬಹುದು ಎಂಬ ಕುತೂಹಲ ಇದ್ದೇ ಇದೆ.

ಬ್ರಿಮ್ಸ್ ನಿರ್ದೇಶಕ ಡಾ, ಶಿವಕುಮಾರ ಶೆಟಕಾರ್ ವಿರುದ್ಧ ಕ್ರಮ ಕೈಗೊಳ್ಳುವ ಪ್ರಕ್ರಿಯೆ ಶುರುವಾಗಿದ್ದು ವರ್ಷದ ಹಿಂದೆ.




ಕಳೆದ ಸಾಲಿನ ಅಕ್ಟೋಬರ್ 24 ರಂದು ಶೆಟಕಾರ್ ಅವರನ್ನು ಬ್ರಿಮ್ಸ್ ನಿರ್ದೇಶಕ ಸ್ಥಾನದಿಂದ ಬಿಡುಗಡೆ ಮಾಡಲಾಗಿತ್ತು. ಸಾರ್ವಜನಿಕ ದೂರುಗಳ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಈ ಕುರಿತಾದ ಆದೇಶದಲ್ಲಿ ತಿಳಿಸಲಾಗಿತ್ತು. ಶೆಟಕಾರ್ ಸ್ಥಳಕ್ಕೆ ಡಾ. ಶಾಂತಲಾ ಕೌಜಲಗಿ ಅವರನ್ನು ನೇಮಕ ಮಾಡಲಾಗಿತ್ತು.

ಆದರೆ, ತಮ್ಮನ್ನು ನಿರ್ದೇಶಕ ಹುದ್ದೆಯಿಂದ ಬಿಡುಗಡೆ ಮಾಡಿದ ಸರಕಾರದ ಕ್ರಮವನ್ನು ಪ್ರಶ್ನಿಸಿ ಡಾ. ಶಿವಕುಮಾರ ಶೆಟಕಾರ್ ಹೈಕೋರ್ಟ್ ಮೊರೆ ಹೋಗಿದ್ದರು. ಅಕ್ಟೋಬರ್ 28 ರಂದೇ ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ ನೀಡಿದ್ದರಿಂದ ಶೆಟಕಾರ್ ಪುನ: ನಿರ್ದೇಶಕ ಹುದ್ದೆಯನ್ನು ವಹಿಸಿಕೊಂಡಿದ್ದರು.

ಇದಾದ ಕೆಲವೇ ದಿನಗಳ ನಂತರ (2024 ರ ನವೆಂಬರ್ 7) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ಸರಕಾರದ ಪ್ರಧಾನ ಕಾರ್ಯದರ್ಶಿ ಮೊಹಮ್ಮದ ಮೊಹಸಿನ್ ಅವರು ಬೀದರ್ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ಪತ್ರ ಬರೆದು, ತನಿಖೆ ನಡೆಸುವಂತೆ ಸೂಚಿಸಿದ್ದರು. ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸಂಬಂಧಿಸಿದಂತೆ ಸರಕಾರದ ಹಂತದಲ್ಲಿ ಸ್ವೀಕೃತವಾಗಿರುವ ದೂರುಗಳ ಹಿನ್ನೆಲೆಯಲ್ಲಿ ಬ್ರಿಮ್ಸ್ ನಲ್ಲಿ ಮೂರು ವರ್ಷಗಳ ಅವಧಿಯಲ್ಲಿ ಕೈಗೊಳ್ಳಲಾದ ತೀರ್ಮಾನ ಹಾಗೂ ಹಣಕಾಸಿನ ವ್ಯವಹಾರಗಳ ಬಗ್ಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ, ತನಿಖೆ ನಡೆಸಿ, 15 ದಿನಗಳಲ್ಲಿ ವರದಿ ಸಲ್ಲಿಸಬೇಕು ಎಂದು ಈ ಪತ್ರದಲ್ಲಿ ತಿಳಿಸಲಾಗಿತ್ತು. ನಿಗದಿತ ಅವಧಿಗೆ ಮುನ್ನ ಹುದ್ದೆಯಿಂದ ಬಿಡುಗಡೆ ಮಾಡುವ ಮತ್ತು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ತನಿಖೆಗೆ ಸಮಿತಿ ರಚಿಸುವ ಸರಕಾರದ ತೀರ್ಮಾನಗಳು ಬ್ರಿಮ್ಸ್ ಬೈಲಾ ನಿಯಮಕ್ಕೆ ಅನುಗುಣವಾಗಿರಲಿಲ್ಲ. ಹೀಗಾಗಿ ಸ್ವತ: ರಾಜ್ಯ ಸರಕಾರವೇ ತನ್ನ ಎರಡೂ ಆದೇಶಗಳನ್ನು ವಾಪಸ್ ಪಡೆದಿತ್ತು.

ಈ ಸಾಲಿನ ಜುಲೈ 31 ರಂದು ನಡೆದ ಆಡಳಿತ ಮಂಡಳಿ ಸಭೆಯಲ್ಲಿ ತನಿಖೆ ನಡೆಸುವ ನಿರ್ಣಯ ಕೈಗೊಳ್ಳಲಾಗಿತ್ತು. ಇದಾದ ಮೂರು ತಿಂಗಳ ನಂತರ ಅಕ್ಟೋಬರ್ 31 ರಂದು ತನಿಖೆ ನಡೆಸಲು ನಿವೃತ್ತ ನ್ಯಾಯಾಧೀಶರನ್ನು ನೇಮಕ ಮಾಡಲಾಗಿತ್ತು. ಡಾ. ಶೆಟಕಾರ್ ಅವರು ನವೆಂಬರ್ 22 ರಂದು ಸರಕಾರದ ಆದೇಶವನ್ನು ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು. ಈ ಪ್ರಕರಣದಲ್ಲಿ ಹೈಕೋರ್ಟ್ ಏಕಸದಸ್ಯ ಪೀಠವು ಡಿಸೆಂಬರ್ 3 ರಂದು ತೀರ್ಪು ನೀಡಿದೆ. ಮುಂದೆ ಏನಾಗಬಹುದು ಎಂಬ ಕುತೂಹಲ ಉಳಿದುಕೊಂಡಿದೆ.

## ಶ್ರೀಮತಿ ಕವಿತಾ ಮಚ್ಚಕುರೆಗೆ ಸಮಾಜ ಸೇವಾ ರತ್ನ ಪ್ರಶಸ್ತಿ

ಭಾಲ್ಕಿ, ಡಿ. 20– ಬೀದರ ಜಿಲ್ಲೆಯ ಭಾಲ್ಕಿ ತಾಲೂಕಿನ ಸಹರಾ ರೂರಲ್ ಡೆವಲೆಪಮೆಂಟ್ ಅಂಡ್ ಏಜುಕೇಶನ್ ಸೊಸೈಟಿ (ರಿ) ಅಧ್ಯಕ್ಷರಾದ ಶ್ರೀಮತಿ ಕವಿತಾ ಮಚ್ಚಕುರೆ ಅವರಿಗೆ ಸಮಾಜ ಸೇವಾ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಬೆಂಗಳೂರಿನ ವಿಧಿ ಪ್ರಜ್ಞಾ ಕರ್ನಾಟಕ ಕಾನೂನು ಸ್ವಯಂ ಸೇವಾ ಸಂಸ್ಥೆ ಮತ್ತು ಲಯನ್ಸ್ ಇಂಟರ್ ನ್ಯಾಷನಲ್ ಕ್ಲಬ್ ಬೆಂಗಳೂರು ವತಿಯಿಂದ ಆಯೋಜಿಸಲಾದ “ಸಮಾಜಿಕ ಜ್ಯೋತಿ” ಶೀರ್ಷಿಕೆ ಅಡಿಯಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಈ ಸನ್ಮಾನ ನೀಡಲಾಯಿತು.



ಕಾನೂನು ಸ್ವಯಂ ಸೇವಾ ಸಂಸ್ಥೆ ಬೆಂಗಳೂರು ಕರ್ನಾಟಕದ ವಿವಿಧ ಭಾಗಗಳಲ್ಲಿ ಸ್ವಾರ್ಥ ಬಿಟ್ಟು ಸಮಾಜಕ್ಕಾಗಿ ದುಡಿಯುತ್ತಿರುವವರಿಗೆ, ಸಮಾಜ ಸೇವಕನ್ನೆದೆ, ಸಮಾಜ ನಾಯಕ–ರೆಂದು ಸಾಮಾಜಿಕ ವಾಗಿ ಗಣನೀಯ ಸೇವೆ ಸಲ್ಲಿಸಿದ ಸಹರಾ ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಕವಿತಾ ರವರಿಗೆ ಪ್ರತಿಷ್ಠಿತ “ ಸಮಾಜ ಸೇವಾ ರತ್ನ ಪ್ರಶಸ್ತಿ”ಯನ್ನು ನೀಡಿ ಗೌರವಿಸಲಾಯಿತು.

ಈ ಸಮಾರಂಭಕ್ಕೆ ನಿವೃತ್ತ ಪ್ರಧಾನ ಜಿಲ್ಲಾ ಹಾಗೂ ಸೆಷನ್ಸ್ ನ್ಯಾಯಾಧೀಶರಾದ ವೆಂಕಟೇಶ ವಾರ್ಸೆ ಮತ್ತು ಬೆಂಗಳೂರು ವಿಶ್ವವಿದ್ಯಾಲಯದ ಮಾಜಿ ಅಧ್ಯಕ್ಷರಾದ ಪ್ರೊ. ಡಾ. ಎನ್. ಸತೀಶ ಗೌಡ, ಹಾಗೂ ದೇವಾಂಗ ಸಂಘ ಕಾನೂನು ಕಾಲೇಜ್ ಬೆಂಗಳೂರು ಡಾ. ಶಿಲ್ಪಾ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

ಕಾರ್ಯಕ್ರಮಕ್ಕೆ ಲಯನ್ಸ್ ಇಂಟರ್‌ನ್ಯಾಷನಲ್ ಕ್ಲಬ್ ಡಾ. ಪದ್ಮಾಕ್ಷಿ ಲೋಕೇಶ ಮತ್ತು ಡಾ. ಪುರುಷೋತ್ತಮ್ ಅವರು ಆಯೋಜಿಸಿದರು.




**ಭಾಲ್ಕಿ: ಪಟ್ಟಣದ ಲಕ್ಷಿ ಬಾಯಿ ಖಂಡ್ರೆ ಪಬ್ಲಿಕ್ ಶಾಲೆಯಲ್ಲಿ ಪಟ್ಟದ್ದೇವರ ಜಯಂತಿ ನಿಮಿತ್ಯ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಮತ್ತು ರಕ್ತದಾನ ಶಿಬಿರವನ್ನು ಸಂಸದ ಸಾಗರ ಈಶ್ವರ ಖಂಡ್ರೆ ಉದ್ಘಾಟಿಸಿದರು.**



ಬೀದರ್: ತಾಲೂಕಿನ ಬಾವಗಿ ಗ್ರಾಮದಲ್ಲಿ ದೇಶದ ಮಕ್ಕಳ ಆರೋಗ್ಯದ ದೃಷ್ಟಿಯಿಂದ ಅತ್ಯಂತ ಮಹತ್ವದ ಕಾರ್ಯಕ್ರಮವಾದ ಪಲ್ಸ್ ಪೋಲಿಯೋ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಹಾಕಿದ ಗ್ರಾಮ ಪಂಚಾಯಿತಿ ಅಧ್ಯಕ್ಷ ಶಾಂತವೀರ್ ಹಜ್ಜರಗಿ, ಆರೋಗ್ಯ ಸಿಬ್ಬಂದಿ,ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತರು ಉಪಸ್ಥಿತರಿದ್ದರು.


# ವಕ್ಫ್ ದಾಖಲೆಗಳ ಅಪ್‌ಲೋಡ್: ದೇಶದ ಮೊದಲ ರಾಜ್ಯ ಕರ್ನಾಟಕ

**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ವಕ್ಫ್ ಆಡಳಿತ ಕ್ಷೇತ್ರದಲ್ಲಿ ಕರ್ನಾಟಕ ರಾಜ್ಯವು ಐತಿಹಾಸಿಕ ಹಾಗೂ ಮಾದರಿಯ ಸಾಧನೆಯನ್ನು ದಾಖಲಿಸಿದೆ. UMEED ಪೋರ್ಟಲ್‌ನಲ್ಲಿ ವಕ್ಫ್ ಬೋರ್ಡ್‌ನ ಎಲ್ಲಾ ದಾಖಲೆಗಳನ್ನು ಆನ್‌ಲೈನ್ ಮೂಲಕ ಕರ್ನಾಟಕ ಅಪ್‌ಲೋಡ್ ಮಾಡುವ ಕಾರ್ಯವನ್ನು ಸಂಪೂರ್ಣಗೊಳಿಸಿದ ಭಾರತದ ಮೊದಲ ರಾಜ್ಯವಾಗಿ ಹೊರಹೊಮ್ಮಿದೆ.

ವಕ್ಫ್ ಕಾಯ್ದೆ–2025ರ ಅಡಿಯಲ್ಲಿ ಕೇಂದ್ರ ಸರ್ಕಾರದ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯವು ದೇಶದಾದ್ಯಂತ ಇರುವ ಎಲ್ಲಾ ವಕ್ಫ್ ಆಸ್ತಿಗಳ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ಸಲ್ಲಿಸುವ ಉದ್ದೇಶದಿಂದ UMEED ಪೋರ್ಟಲ್ ಅನ್ನು ಆರಂಭಿಸಿತ್ತು. ಈ ಉಪಕ್ರಮದ ಉದ್ದೇಶ ವಕ್ಫ್ ಆಸ್ತಿಗಳ ಆಡಳಿತದಲ್ಲಿ ಪಾರದರ್ಶಕತೆ ತರುವುದು ಹಾಗೂ ಡಿಜಿಟಲ್ ದಾಖಲೆ ವ್ಯವಸ್ಥೆಯನ್ನು ಬಲಪಡಿಸುವುದಾಗಿದೆ.

ಈ ಮಹತ್ತರ ಜವಾಬ್ದಾರಿಯನ್ನು ಕರ್ನಾಟಕ



ರಾಜ್ಯ ವಕ್ಫ್ ಮಂಡಳಿ ಅತ್ಯಂತ ದಕ್ಷತೆ ಮತ್ತು ಬದ್ಧತೆಯೊಂದಿಗೆ ಯಶಸ್ವಿಯಾಗಿ ನಿರ್ವಹಿಸಿದೆ. ಮಂಡಳಿಯ ಅಧ್ಯಕ್ಷರಾದ ಹಾಫಿಜ್ ಸಯ್ಯದ್ ಮುಹಮ್ಮದ್ ಅಲಿ ಅಲ್ ಹುಸೈನಿ ಅವರ ನೇತೃತ್ವದಲ್ಲಿ ನಿರಂತರ ಪರಿಶೀಲನಾ ಸಭೆಗಳು ನಡೆಸಲಾಗಿದ್ದು, ಹಲವಾರು ಜಿಲ್ಲೆಗಳ ಭೇಟಿ ಕೈಗೊಳ್ಳಲಾಗಿದೆ. ಜೊತೆಗೆ ದಾಖಲೆಗಳ ಅಪ್‌ಲೋಡ್ ಪ್ರಕ್ರಿಯೆಯನ್ನು ಸುಗಮಗೊಳಿಸುವ ಉದ್ದೇಶದಿಂದ ವಿವಿಧ ಜಿಲ್ಲೆಗಳಲ್ಲಿ ವಿಶೇಷ ಆನ್‌ಲೈನ್ ಸಹಾಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಅಧ್ಯಕ್ಷರಾದ ಹಾಫಿಜ್ ಸಯ್ಯದ್ ಮುಹಮ್ಮದ್ ಅಲಿ ಅಲ್ ಹುಸೈನಿ ಅವರು ರಾಜ್ಯದ ಎಲ್ಲಾ ಜಿಲ್ಲಾ ವಕ್ಫ್ ಅಧಿಕಾರಿಗಳೊಂದಿಗೆ ಪ್ರತಿದಿನ ವೀಡಿಯೊ ಸಂವಾದದ ಮೂಲಕ ಪ್ರಗತಿಯನ್ನು ನೇರವಾಗಿ ಪರಿಶೀಲಿಸುತ್ತಿದ್ದರು. ಅಪ್‌ಲೋಡ್ ಪ್ರಕ್ರಿಯೆಯಲ್ಲಿ ಎದುರಾದ ತಾಂತ್ರಿಕ ಹಾಗೂ ಆಡಳಿತಾತ್ಮಕ ಸಮಸ್ಯೆಗಳಿಗೆ ತಕ್ಷಣ ಪರಿಹಾರ ಕಂಡುಕೊಳ್ಳುವಂತೆ ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯದೊಂದಿಗೆ ನೇರ ಸಂಯೋಜನೆ ನಡೆಸಿದರು.

ಈ ನಿರಂತರ ಪ್ರಯತ್ನಗಳ ಫಲವಾಗಿ, 2025ರ ಡಿಸೆಂಬರ್ 4ರಂದು ಕರ್ನಾಟಕದಲ್ಲಿನ ಒಟ್ಟು 52,917 ವಕ್ಫ್ ಆಸ್ತಿಗಳ ದಾಖಲೆಗಳನ್ನು UMEED ಪೋರ್ಟಲ್‌ನಲ್ಲಿ ಯಶಸ್ವಿಯಾಗಿ ಅಪ್‌ಲೋಡ್ ಮಾಡಿ ಅನುಮೋದನೆ ಪಡೆಯಲಾಗಿದೆ. ಈ ಮಹತ್ವದ ಸಾಧನೆಯ ಮಾಹಿತಿಯನ್ನು ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷರು ತಮ್ಮ ಅಧಿಕೃತ ಸಾಮಾಜಿಕ ಮಾಧ್ಯಮ ಖಾತೆಯ ಮೂಲಕ ಸಾರ್ವಜನಿಕರಿಗೆ ತಿಳಿಸಿದರು.

ಈ ಗಮನಾರ್ಹ ಸಾಧನೆಯ ಹಿಂದೆ ಯುವ ಹಾಗೂ ಚುರುಕು ನೇತೃತ್ವ, ಅಹೋರಾತ್ರಿ ಶ್ರಮ ಮತ್ತು ದೃಢ ಸಂಸ್ಥಾತ್ಮಕ ಸಂಯೋಜನೆಯ ಮಹತ್ವದ ಪಾತ್ರವಿದೆ. ಈ ಕಾರ್ಯದಲ್ಲಿ ಮಂಡಳಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಯ್ಯದ್ ಮಾಝುದ್ದೀನ್ ಖಾನ್ ಅವರ ಕೊಡುಗೆ–ಯೂ ಅತ್ಯಂತ ಮಹತ್ವದ್ದಾಗಿದೆ.

ಈ ನಡುವೆ ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವರಾದ ಕಿರಣ್ ರಿಜಿಜು ಅವರು ಕೂಡ ಕರ್ನಾಟಕದ ಕಾರ್ಯಕ್ಷಮತೆಯನ್ನು ಶ್ಲಾಘಿಸಿದ್ದು, ಗಬಇಇಆ ಪೋರ್ಟಲ್‌ನಲ್ಲಿ ಅತ್ಯಂತ ವೇಗವಾಗಿ ಮತ್ತು ಪರಿಣಾಮಕಾರಿಯಾಗಿ ಕೆಲಸ ಮಾಡಿದ ರಾಜ್ಯವಾಗಿ ಕರ್ನಾಟಕ ದೇಶದಲ್ಲೇ ಪ್ರಥಮ ಸ್ಥಾನದಲ್ಲಿದೆ ಎಂದು ಹೇಳಿದ್ದಾರೆ.

ಈ ಸಾಧನೆ ಕರ್ನಾಟಕಕ್ಕೆ ಮಾತ್ರವಲ್ಲದೆ, ದೇಶದ ಇತರ ರಾಜ್ಯಗಳಿಗೂ ಮಾದರಿಯಾಗಿದ್ದು, ಡಿಜಿಟಲ್ ಆಡಳಿತ ಮತ್ತು ಪಾರದರ್ಶಕತೆ ಮೂಲಕ ವಕ್ಫ್ ಆಡಳಿತವನ್ನು ಹೇಗೆ ಬಲಪಡಿಸಬಹುದು ಎಂಬುದಕ್ಕೆ ಉತ್ತಮ ಉದಾಹರಣೆಯಾಗಿದೆ ಎಂದಿದ್ದಾರೆ.

# ಶಿಕ್ಷಣದ ಜೊತೆ ಸಂಸ್ಕಾರ ಅಗತ್ಯ: ಆರೋಗ್ಯನಾಥನ್



ಮುದಗಲ್;ಪ್ರಸ್ತುತದಿನಮಾನದಲ್ಲಿ ಪ್ರತಿಯೊಬ್ಬರಿಗೂ ಜೀವನ ನಡೆಸಲು ಜ್ಞಾನಾರ್ಜನೆಗೆ ಶಿಕ್ಷಣ ಅಗತ್ಯವಾದರೆ, ಸಂಭಂಧಗಳು ನಶಿಸುವದಕ್ಕೆ ಸಂಸ್ಕಾರವು ಅತ್ಯಗತ್ಯವಾಗಿದೆ ಎಂದು ರೆಕ್ಟರ ಬಳ್ಳಾರಿ ಆರೋಗ್ಯ ಮಾತೆ ಪುಣ್ಯ ಕ್ಷೇತ್ರದ ಫಾದರ್ ಆರೋಗ್ಯನಾಥನ್ ಶನಿವಾರ ಸಂಜೆ ಹೇಳಿದರು.ಪಟ್ಟಣದ ಸೇಕ್ರೆಡ್ ಹಾರ್ಟ ಇಂಗ್ಲೀಷ್ ಮೀಡಿಯಂ ಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದ ಶಾಲಾ ವಾರ್ಷಿಕೋತ್ಸವ ಹಾಗೂ ಕ್ರಿಸ್ಮಸ್ ಜಯಂತಿ ಆಚರಣೆ ಕಾರ್ಯಕ್ರದಲ್ಲಿ ಜ್ಯೋತಿ ಬೆಳಗಿಸಿ ಮಾತನಾಡಿದ ಅವರು ಶಿಕ್ಷಣವು ಮನುಷನ ಜ್ಞಾನ ಸಂಪತ್ತಾದರೇ, ಸಂಸ್ಕಾರವು ಮನುಷ್ಯನಿಗೆ ಗೌರವ, ಪ್ರೀತಿ, ಉತ್ತಮ ನಡುವಳಿಕೆ ಕಲಿಸುತ್ತದೆ. ಇವೆರಡು ಇದ್ದಾಗ ಮಾತ್ರಶಿಸ್ತುಬದ್ಧ ಜೀವನವಾಗುತ್ತದೆ. ಸಂಸ್ಕಾರವಿಲ್ಲದ ಶಿಕ್ಷಣ ನಿರರ್ಥಕ ಮತ್ತು ಸಂಸ್ಕಾರವಿಲ್ಲದ ಶಿಕ್ಷಣ ಮನುಷ್ಯನನ್ನು ಯಾಂತ್ರಕವಾಗಿಸುತ್ತದೆ. ಸಾರ್ಥಕವಾದಂತೆ. ಇಂತಹ ಸಂದರ್ಭದಲ್ಲಿ ಶಿಕ್ಷಣ ಜೊತೆಗೆ ಸಂಸ್ಕಾರ ನೀಡುವ ಶಾಲೆಗಳ ಅಗತ್ಯ ಹೆಚ್ಚಾಗಿದೆ ಎಂದು ತಿಳಿಸಿದರು.

ವೇದಿಕೆ ಕಾರ್ಯಕ್ರಮದಲ್ಲಿ ನಿರ್ದೇಶಕ ಸೇಂಟ ತೆರೇಸ್ ಫಾರಂ, ಜವಳಗೇರಾ ಫಾದರ್ ಅಲ್ಫೋನ್ಸ ಜಾರ್ಜ ಮಾತನಾಡಿ ಪ್ರಪಂಚ ಕಾಲ ಚಕ್ರವಿದ್ದಂತೆ, ವಿದ್ಯಾರ್ಥಿಯ ಶ್ರಮ ಹಾಗೂ ಪ್ರತಿಬೆ ಅವರ ಕಾರ್ಯ ಸಾಧನೆ ಸೂಚಿಸುತ್ತದೆ. ಕ್ರಿಸ್ಮಸ್ ಜಯಂತಿ ಸಾಕ್ಷಾತ ದೇವರೇ ಮಾನವರಾಗಿ ಮೌಲ್ಯಾಧರಿತ ಜೀವನವನ್ನು ಜೀವಿಸುವುದರ ಮೂಲಕ ಅವರ ಪರಿಶುದ್ಧತೆ ಸಾರಿದ ಐತಿಹಾಸಿಕ ಸನ್ನಿವೇಶವಾಗಿದೆ ಎಂದು ತಿಳಿಸಿದರು. ಜಿಲ್ಲಾ ಮಹಿಳಾ ಘಟಕ ಅಧ್ಯಕ್ಷೇ ಶಶಿಕಲಾ ಬೋವಿ. ಶಿಕ್ಷಕಿ ಪಾರ್ವತಿ, ಮಾತನಾಡಿದರು. ವ್ಯವಸ್ಥಾಪಕ ಇನ್ಫಂಟ ಜೀಸಸ್ ಇಂಗ್ಲೀಷ ಮೀಡಿಯಂ ಶಾಲೆ ಗಂಗಾವತಿ ಫಾದರ ಅನಿಲ್ ಕುಮಾರ, ಸೇಕ್ರಡ್ ಹಾರ್ಟ ಚರ್ಚ ಮುದಗಲ್ ಫಾದರ್ ಪೊನ್ನುಸ್ವಾಮಿ, ಮುಖ್ಯಸ್ಥರು ಕ್ರಿಸ್ತ ಜ್ಯೋತಿ ಪ್ರೌಢಾಲೆ ಮುದಗಲ್ ಸಿಸ್ಟರ ಮರಿಯ ಪನ್ನೂರ್, ವ್ಯವಸ್ಥಾಪಕ ಸಿಬ್ಬಂದಿ ವರ್ಗ ಹಾಗೂ ಮಕ್ಕಳ ಫಾದರ್ ಡಾ. ವಿಜಯ ಕುಮಾರ ಪಿ. ಸೇರದಂತೆ ಪುರಸಭೆ ಮುಖ್ಯಾಧಿಕಾರಿ ಪ್ರವೀಣ್ ಬೋಗಾರ,ಕ.ಕಾ.ನಿ.ಪ.ಸ ಮುದಗಲ್ ಅಧ್ಯಕ್ಷ ದೇವಪ್ಪ ರಾಥೋಡ್, ಬ್ಲಾಕ ಕಾಂಗ್ರೆಸ್ ಅಧ್ಯಕ್ಷ ಶಿವಶಂಕರಗೌಡ, ಕಾರ್ಯಧರ್ಶಿ ತಮ್ಮಣ್ಣಗುತ್ತೇದಾರ, ಅಲ್ಪ ಸಂಖ್ಯಾತರ ಅಧ್ಯಕ್ಷ ಅಬ್ದುಲ್ ಗಫೂರ್ ಖಾನ್, ಕರ್ಮಿಕ ಅಧ್ಯಕ್ಷ ಸೈಯದ್ ನ್ಯಾಮತುಲ್ಲಾ ಖಾದ್ರಿ, ನಾಗರಾಜ ತಳವಾರ, ಆರೋಗ್ಯಪ್ಪ ಕುರಿ ಇದ್ದರು.

# ಮಕ್ಕಳ ಭವಿಷ್ಯ ಸಂರಕ್ಷಿಸಲು ಪೋಲಿಯೋ ಹಾಕಿಸಿ: ನಾಗರಾಜ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಮಕ್ಕಳ ಅಂಗವೈಖಲ್ಯತೆ ತಡೆಗಟ್ಟುವ ನಿಟ್ಟಿನಲ್ಲಿ ಎಲ್ಲಾ ಪೋಷಕರು ತಮ್ಮ ಮಕ್ಕಳ ಭವಿಷ್ಯ ಸಂರಕ್ಷಿಸಲು ತಪ್ಪದೇ ಪೋಲಿಯೋ ಲಸಿಕೆ ಹಾಕಿಸಿ ಎಂದು ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಕರೆ ನೀಡಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಆಸ್ಪತ್ರೆಯ 100 ಹಾಸಿಗೆಗಳ ತಾಯಿ ಮತ್ತು ನವಜಾತ ಶಿಶುಗಳ ಆಸ್ಪತ್ರೆ ಆವರಣದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ದೇಶದಾದ್ಯಂತ ನಡೆಯುತ್ತಿದ್ದು, ಕಳೆದ ಹತ್ತು ವರ್ಷಗಳಿಂದ ಪರಿಣಾಮಕಾರಿಯಾಗಿ ಸ್ವ–ಇಚ್ಛೆಯಿಂದ ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಲು ಶ್ರಮ ವಹಿಸಿ ಪಲ್ಸ್ ಪೋಲಿಯೋ ಪ್ರಕರಣಗಳನ್ನು ತಡೆಯುಲ್ಲಿ ಯಶಸ್ವಿಯಾಗಿದ್ದಾರೆ ಎಂದು ಶ್ಲಾಘಿಸಿದರು.

ಬೇರೆಬೇರೆ ದೇಶಗಳಲ್ಲಿ ಪೋಲಿಯೋ ಪ್ರಕರಣಗಳು ಕಂಡುಬಂದಿದ್ದು, ಈ ಹಿನ್ನಲೆಯಲ್ಲಿ ಜಾಗೃತಿಗಾಗಿ ರಾಜ್ಯ ಸರ್ಕಾರವು ಪ್ರತಿ ವರ್ಷ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ನಗರದ ಸುತ್ತ–ಮುತ್ತಲಿನ ಕೈಗಾರಿಕಾ ಪ್ರದೇಶಗಳಲ್ಲಿ ಹೊರ ರಾಜ್ಯದ ಕಾರ್ಮಿಕರು ಕೆಲಸ ಮಾಡುತ್ತಿದ್ದು, ಅಲ್ಲಿನ ಪ್ರದೇಶಗಳಿಗೆ ಹೆಚ್ಚಿನ ಆಶಾ ಕಾರ್ಯಕರ್ತರನ್ನು ನಿಯೋಜಿಸಿ ಮನೆ–ಮನೆಗೆ ಹೋಗಿ ಲಸಿಕೆ ಹಾಕಲು ಕ್ರಮವಹಿಸಬೇಕು ಎಂದು ಹೇಳಿದರು.

ಬಳ್ಳಾರಿ ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಮಾತನಾಡಿ, ಹುಟ್ಟಿನಿಂದ 5 ವರ್ಷದ ಒಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸುವುದು ಬಹುಮುಖ್ಯವಾಗಿದ್ದು, ಡಿ.21 ರಿಂದ ಡಿ.24 ರವರೆಗೆ ನಡೆಯುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಪೋಷಕರು ತಮ್ಮ ಮಕ್ಕಳನ್ನು ಹಾಗೂ ನೆರೆ–ಹೊರೆಯವರಿಗೂ ಈ ಮಾಹಿತಿ ತಿಳಿಸಿ ಲಸಿಕೆ ಹಾಕಿಸಬೇಕೆಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ ಚಿದಾನಂದಪ್ಪ ಅವರು ಮಾತನಾಡಿ, ದೇಶದಲ್ಲಿ ಪ್ರತಿ ವರ್ಷ ನಡೆಯುವ ಪೋಲಿಯೋ ಲಸಿಕೆ ಕಾರ್ಯಕ್ರಮ ಅಭಿಯಾನವು 1995 ರಲ್ಲಿ ಪ್ರಾರಂಭಿಸಿ 2014 ರ ವೇಳೆಗೆ ಪೋಲಿಯೋ ಪ್ರಕರಣಗಳನ್ನು ಸಂಪೂರ್ಣ ನಿರ್ಮೂಲನೆ ಮಾಡುವಲ್ಲಿ



ನಮ್ಮ ದೇಶವು ಯಶಸ್ವಿಯಾಗಿದೆ. ನೂರು ಕೋಟಿಗಿಂತ ಹೆಚ್ಚಿನ ಜನ ಸಂಖ್ಯೆ ಇರುವ ನಮ್ಮ ದೇಶದಲ್ಲಿ ಇಂತಹ ಕಾರ್ಯಕ್ರಮ ನಡೆಸಲು ಸವಾಲಿನ ಕೆಲಸವಾಗಿದ್ದು, ಆರೋಗ್ಯ ಇಲಾಖೆಯ ಪ್ರತಿಯೊಬ್ಬ ಅಧಿಕಾರಿಗಳು, ಸಿಬ್ಬಂದಿಗಳು ಪೋಲಿಯೋ ಬಗ್ಗೆ ಜಾಗೃತಿ ಮೂಡಿಸಿ ಕಾರ್ಯ ನಿರ್ವಹಿದ್ದಾರೆ ಎಂದು ಅವರನ್ನು ಅಭಿನಂದಿಸಿದರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಮಹಮ್ಮದ್ ಹ್ಯಾರಿಸ್ ಸುಮೈರ್ ಅವರು ಮಾತನಾಡಿ, ಪ್ರತಿ ವರ್ಷ ಆರೋಗ್ಯ ಇಲಾಖೆಯಿಂದ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಕಾರ್ಯಕ್ರಮ ಏರ್ಪಡಿಸಲಾಗುತ್ತಿದ್ದು, ಪೋಲಿಯೋ ಖಾಯಿಲೆ ನಿರ್ಮೂಲನೆ ಮಾಡಲು ಎರಡು ಹನಿ ಪೋಲಿಯೋ ಲಸಿಕೆ ಅತ್ಯಗತ್ಯವಾಗಿದೆ. ಮಕ್ಕಳಿಗೆ ಬರುವ ವಿವಿಧ ಅಂಗವೈಖಲ್ಯತೆ ಹೋಗಲಾಡಿಸಲು ಜನಸಮುದಾಯದವರು 5 ವರ್ಷದ ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸಬೇಕು ಹಾಗೂ ವಿವಿಧ ಹಂತದ ವಯಸ್ಸಿನ ಮಕ್ಕಳಿಗೆ ಅವಶ್ಯವಿರುವ ಲಸಿಕೆಗಳನ್ನು ಸಹ ತಪ್ಪದೇ ಹಾಕಿಸಬೇಕು ಎಂದು ತಾಯಂದಿರಲ್ಲಿ ವಿನಂತಿ ಮಾಡಿದರು.

ಇದೇ ಸಂದರ್ಭದಲ್ಲಿ ಶಿಶು ಮಕ್ಕಳಿಗೆ ಗಣ್ಯರು ಸೇರಿದಂತೆ ವೈದ್ಯಾಧಿಕಾರಿಗಳು ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಮೂಲಕ ಜಿಲ್ಲಾ ಮಟ್ಟದ ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು ಹಾಗೂ ಪಲ್ಸ್ ಪೋಲಿಯೋ ಪೋಸ್ಟರ್ ಬಿಡುಗಡೆ ಮಾಡಿದರು.

ಕಾರ್ಯಕ್ರಮಕ್ಕೂ ಮುನ್ನ ಚಿಗುರು ಕಲಾ ತಂಡದ ಎಸ್.ಎನ್ ಹುಲುಗಪ್ಪ ಮತ್ತು ಸಂಗಡಿಗರಿಂದ ಪಲ್ಸ್ ಪೋಲಿಯೋ ಬಗ್ಗೆ ಜಾಗೃತಿ ಗೀತೆಗಳನ್ನು ಪ್ರಸ್ತುತ ಪಡಿಸಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಉಪಮೇಯರ್ ಮೊಬಿನಾ, ಸದಸ್ಯ ಅಶೋಕ್ ಕುಮಾರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್ ಝುಬೇರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ.ಎನ್., ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಂ ಸೇರಿದಂತೆ ಜಿಲ್ಲಾ ಆಸ್ಪತ್ರೆಯ ವೈದ್ಯರು, ಶುಶ್ರುಕರು, ಸಿಬ್ಬಂದಿ ಹಾಗೂ ಪೋಷಕರು ಉಪಸ್ಥಿತರಿದ್ದರು.

# ಪೋಲಿಯೋ ಮುಕ್ತ ರಾಷ್ಟ್ರ ನಿರ್ಮಾಣಕ್ಕಾಗಿ ಎಲ್ಲರೂ ಸಹಕಾರ ಮುಖ್ಯ : ಶ್ರೀ ಕಾಂತಮ್ಮ ಅಭಿಮತ.



**ಮಲ್ಲನ ನುಡಿ ವಾರ್ತೆ ಮಸ್ಕಿ :**

ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಪ್ರಯುಕ್ತ ಮಕ್ಕಳಿಗೆ ಪೋಲಿಯೊ ಹನಿ ಹಾಕುವ ಮೂಲಕ ಚಾಲನೆ ನೀಡಲಾಯಿತು.ಪಟ್ಟಣದ ಪಿಎಂಶ್ರೀ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಧನಗರವಾಡಿ ಶಾಲೆ ಆವರಣದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಉದ್ಘಾಟನೆ ನೆರವೇರಿಸಿ ಮಾತನಾಡಿದ ಪಿಎಂಶ್ರೀ ಶಾಲೆಯ ಮುಖ್ಯಗುರುಗಳಾದ ಶ್ರೀ ಕಾಂತಮ್ಮ ರವರು, ಪೋಲಿಯೋ ಮುಕ್ತ ರಾಷ್ಟ್ರ ನಿರ್ಮಾಣಕ್ಕಾಗಿ ಎಲ್ಲರೂ ಕೈ ಜೋಡಿಸಿ ಬೇಕು ಎಂದುರು.

ರಾಜ್ಯದಲ್ಲಿ ನಿರಂತರವಾಗಿ ಪಲ್ಸ್ ಪೋಲಿಯೊ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ. ಕಳೆದ 5 ವರ್ಷಗಳಲ್ಲಿ ರಾಜ್ಯದಲ್ಲಿ ಯಾವುದೇ ಪೆಣಟಿಜಜಜಿಟಿಜಜಲಿಯೋ ಪ್ರಕರಣ ಕಂಡುಬಂದಿಲ್ಲ ಎಂಬುದು ಒಳ್ಳೆಯ ಬೆಳವಣಿಗೆ ಎಂದು ಪುರಸಭೆ ನಾಮ ನಿರ್ದೇಶನ ಸದಸ್ಯರಾದ ಕೃಷ್ಣ ಡಿ ಚಿಗಿರಿ ರವರು ಹೇಳಿದರು.

ಈವೇಳೆ,ಪಿಎಂಶ್ರೀ ಶಾಲೆಯ,ಶಿಕ್ಷಕರಾದ ಸಿದ್ದಯ್ಯ ಹಿರೇಮಠ,ಬಸವರಾಜ ಬಡ್ಡಿವಡ್ಡರ,ರಮೇಶ್ ದೊಡ್ಡಮನಿ, ಯಶೋಧ,ಹಾಗೂ ಅಂಗನವಾಡಿ ಶಿಕ್ಷಕಿಯರಾದ ಶರಣಮ್ಮ,ನಿರ್ಮಲಾ,ಹನುಮಂತಿ,ಸುಜಾತ ಜನತಾ ಕಾಲೋನಿ,ಆಶಾಕಾರ್ಯಕರ್ತೆ,ಸೇರಿದಂತೆ ಇತರರು ಇದ್ದರು.

# ಪೋಲಿಯೋ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿದ: ಚೇತನ್ ಪಾಟೀಲ್

ಮಸ್ಕಿ : ಪಟ್ಟಣದ ಕಿಲ್ಲಾ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಪ್ರಯುಕ್ತ ಮಕ್ಕಳಿಗೆ ಪೋಲಿಯೊ ಹನಿ ಹಾಕುವ ಮೂಲಕ ಪುರಸಭೆ ಸದಸ್ಯರಾದ ಚೇತನ್ ಪಾಟೀಲ್ ಚಾಲನೆ ನೀಡಿದರು.

ಈ ವೇಳೆ,ಡಾ. ಅಮರೇಶ ಎಂ ಬಿರವರು ಮಾತನಾಡಿ,ಪೋಲಿಯೋ ರೋಗವು ಮಕ್ಕಳಲ್ಲಿ ಶಾಶ್ವತ ಅಂಗವೈಕಲ್ಯಕ್ಕೆ ಕಾರಣವಾಗುತ್ತದೆ.



ಇತರೆ ದೇಶಗಳಲ್ಲಿ ರೋಗ ಪೀಡಿತರು ಇರುವುದು ಆತಂಕಕಾರಿ ಆದ್ದರಿಂದ ರಾಷ್ಟ್ರೀಯ ಪೋಲಿಯೋ ಲಸಿಕಾ ಅಭಿಯಾನವನ್ನು ಪ್ರತಿ ವರ್ಷ ನಡೆಸಲಾಗುತ್ತಿದೆ.ಎಲ್ಲಾ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ,ಸಮುದಾಯ, ಪ್ರಾಥಮಿಕ ಆರೋಗ್ಯ ಕೇಂದ್ರ,ಹಾಗೂ ಉಪಕೇಂದ್ರಗಳಲ್ಲಿ,ಸರಕಾರಿ ಶಾಲೆ,ಅಂಗನವಾಡಿ ಕೇಂದ್ರಗಳಲ್ಲಿ ಉಚಿತವಾಗಿ ಪಲ್ಸ್ ಪೋಲಿಯೋ ಲಸಿಕೆ ಹಾಕಲಾಗುವುದು.ಎಂದರು.

ಈ ಅಭಿಯಾನದಲ್ಲಿ ಆಶಾ ಕಾರ್ಯಕರ್ತರು, ಅಂಗನವಾಡಿ ಸಿಬ್ಬಂದಿ ಮತ್ತು ಆರೋಗ್ಯ ಸಿಬ್ಬಂದಿ ತೊಡಗಿಸಿಕೊಳ್ಳಲಿದ್ದಾರೆ ಎಂದು ಅಮರೇಶ ಎಂ ಬಿ ಹೇಳಿದರು.

ಈ ವೇಳೆ,ವಿನಾಯಕ ಪಾಟೀಲ್, ಅಂಗನವಾಡಿ ಮೇಲ್ವಿಚಾರಕಿ ಶಿವಲೀಲಾ ಹಿರೇಮಠ,ನಮ್ಮ ಕ್ಲಿನಿಕ್ ಸಿಬ್ಬಂದಿಗಳಾದ ಶಶಿರೇಖಾ, ಯಮುನೂರ,ಹಾಗೂ ಆಶಾ ಕಾರ್ಯಕರ್ತೆಯರಾದ ಲಕ್ಷ್ಮೀ,ವಿಜಯಲಕ್ಷ್ಮೀ,ಅಂಗನವಾಡಿ ಸಿಬ್ಬಂದಿಗಳಾದ ಶ್ರೀದೇವಿ,ಅನಿತಾ,ಇದ್ದರೂ.



ಸೋನಾಳ: ವೀರಕ್ತಮಠಕ್ಕೆ ಕಳೆದ ಎರಡೂ ವರ್ಷದಿಂದ ಒಂದು ಕಿಲೋ ಬೆಳ್ಳಿ ಧಾತು ಮತ್ತು ಚನ್ನವೀರ ಮಹಾಸ್ವಾಮಿಗಳವರಿಗೆ ನಾಣ್ಯದಿಂದ ತುಲಾಭಾರ ಮಾಡುವ ಮುಖಂಡರಾದ ಡಾ. ಭೀಮಸೇನರಾವ ಸಿಂಧೆ ಅವರಿಗೆ ಮಠದ ಪರವಾಗಿ ಗೌರವ ಸನ್ಮಾನ ಮಾಡಲಾಯಿತು. ಈ ಸಂದರ್ಭದಲ್ಲಿ ವೀರಕ್ತ ಮಠದ ಅಧ್ಯಕ್ಷರಾದ ಶ್ರೀ. ಮ. ಬ. ಪ್ರ ಚನ್ನವೀರ ಮಹಾಸ್ವಾಮಿಗಳು ಇದ್ದರು.

# ಕಂದಾಯ ಇಲಾಖೆ ನೌಕರರ ವಾರ್ಷಿಕ ಕ್ರೀಡಾಕೂಟ–2025

## ಸೋಲು–ಗೆಲುವನ್ನು ಸಮನಾಗಿ ಸ್ವೀಕರಿಸಿ– ಶಾಸಕ ಅಲ್ಲಂ ಪ್ರಭು ಪಾಟೀಲ

**ಮಲ್ಲಮ್ಮನುಡಿವಾರ್ತೆಕಲಬುರಗಿ:**

ಸೋಲು–ಗೆಲುವು ಮುಖ್ಯವಲ್ಲ; ಅವುಗಳನ್ನು ಸಮನಾಗಿ ಸ್ವೀಕರಿಸಿ ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮವಾಗಿ ಸಾಧಿಸುವ ಮನೋಭಾವನೆ ಬೆಳೆಸಿಕೊಳ್ಳಬೇಕು ಎಂದು ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಂ ಪ್ರಭು ಪಾಟೀಲ ಅವರು ಹೇಳಿದರು.ಶನಿವಾರ ಜಿಲ್ಲಾಡಳಿತ, ಕಲಬುರಗಿ ಹಾಗೂ ಕಂದಾಯ ಇಲಾಖೆ ನೌಕರರ ವಾರ್ಷಿಕ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನೌಕರರು ಹಾಗೂ ಅಧಿಕಾರಿಗಳು ದಿನನಿತ್ಯ ಅನೇಕ ಒತ್ತಡಗಳ ನಡುವೆ ಕೆಲಸ ನಿರ್ವಹಿಸುತ್ತಿದ್ದಾರೆ. ಮನಸ್ಸಿಗೆ ಶಾಂತಿ ದೊರಕಲು ಸಂಗೀತ ಮತ್ತು ಕ್ರೀಡೆ ಅತ್ಯಂತ ಸಹಕಾರಿ. ಕ್ರೀಡಾಕೂಟದಲ್ಲಿ ಉತ್ಸಾಹದಿಂದ ಭಾಗವಹಿಸಿರುವ ಎಲ್ಲರಿಗೂ ಅಭಿನಂದನೆಗಳು ಎಂದು ತಿಳಿಸಿದರು. ಸರ್ಕಾರದ ಕೆಲಸ ದೇವರಕೆಲಸದಂತಿದ್ದು, ಸಮಾಜದಲ್ಲಿ ದೃಢಸಂಕಲ್ಪದಿಂದ ನಾವೆಲ್ಲರೂ ಕರ್ತವ್ಯನಿರ್ವಹಿಸಬೇಕು ಎಂದರು.

ಕಲಬುರಗಿ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಂ ಅವರು ಕ್ರೀಡಾಜ್ಯೋತಿ ಸ್ವೀಕರಿಸಿ ಬಲೂನು ಹಾರಿಬಿಡುವುದರ ಮೂಲಕ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು. ಸೋಲು–ಗೆಲುವಿಗಿಂತ ಸಹಭಾಗಿತ್ವ ಮತ್ತು ಸೌಹಾರ್ದತೆಯೇ ಕ್ರೀಡಾ–ಕೂಟದ ಉದ್ದೇಶ ಎಂದು ಅವರು ಹೇಳಿದರು. ಕೆಲಸದ ಒತ್ತಡಗಳ ನಡುವೆಯೂ ಕ್ರೀಡಾಕೂಟದಲ್ಲಿ ಭಾಗವಹಿಸಿ ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ತಿಳಿಸಿ, ಎರಡು ದಿನಗಳ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಿದ ಎಲ್ಲಾ ಅಧಿಕಾರಿಗಳು, ಗ್ರೇಡ್–1 ಹಾಗೂ ಗ್ರೇಡ್–2 ತಹಶೀಲ್ದಾರರಿಗೆ ಕೃತಜ್ಞತೆ ಸಲ್ಲಿಸಿದರು.ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಕಂದಾಯ ಇಲಾಖೆ ಅತ್ಯಂತ ಮಹತ್ವದ ಕೆಲಸಗಳನ್ನು ನಿರ್ವಹಿಸುತ್ತಿದೆ. ಅನೇಕ ಒತ್ತಡಗಳ ನಡುವೆಯೂ ಕ್ರೀಡಾಕೂಟಕ್ಕೆ ಆಗಮಿಸಿ ಕ್ರೀಡೆಯಲ್ಲಿ ಭಾಗವಹಿಸಿರುವುದು ಸಂತೋಷಕರವಾಗಿದೆ ಎಂದರು. ಕ್ರೀಡೆಯಿಂದ ಮಾನಸಿಕ ಹಾಗೂ ದೈಹಿಕ ನೆಮ್ಮದಿ ದೊರಕುವುದರ ಜೊತೆಗೆ ಆರೋಗ್ಯವೂ ಸುಧಾರಿಸುತ್ತದೆ ಎಂದು ಹೇಳಿದರು. ಕಳೆದ ವರ್ಷ ಬರಪರಿಹಾರ ಹಾಗೂ ಈ ವರ್ಷ ಅತಿವೃಷ್ಟಿ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಅಧಿಕಾರಿಗಳು ಮತ್ತು ಸಿಬ್ಬಂದಿ ಜವಾಬ್ದಾರಿಯಿಂದ ಕೆಲಸ ನಿರ್ವಹಿಸಿದ್ದಕ್ಕಾಗಿ ಶ್ಲಾಘಿಸಿದರು.

ಕಳೆದ ವರ್ಷವೂ ಉತ್ತಮ ಆಯೋಜನೆ ಮಾಡಿದ್ದಿರಿ; ಈ ವರ್ಷವೂ ಅದೇ ರೀತಿಯಾಗಿ ಕ್ರೀಡಾಕೂಟವನ್ನು ಯಶಸ್ವಿಯಾಗಿ ನಡೆಸಿದ್ದಿರಿ ಎಂದು ಮೆಚ್ಚುಗೆ



ವ್ಯಕ್ತಪಡಿಸಿದರು.

ಕ್ರೀಡಾಕೂಟಕ್ಕೆ ಕುಟುಂಬದ ಸದಸ್ಯರೊಂದಿಗೆ ಬರುವಂತೆ ಆಹ್ವಾನಿಸಿ, ಭಾಗವಹಿಸಿದವರಿಗೆ ಊಟದ ವ್ಯವಸ್ಥೆ ಇರುತ್ತದೆ ಎಂದು ತಿಳಿಸಿದರು.ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳು 100 ಮೀಟರ್ ಓಟ ಸ್ಪರ್ಧೆ ಮತ್ತು ಗುಂಡು ಎಸೆತದ ಮೂಲಕ ಕ್ರೀಡಾಕೂಟ–ಕ್ಕೆ ಚಾಲನೆ ನೀಡಿದರು. ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರು ಕ್ರೀಡಾ ತಂಡಗಳಿಂದ ಪ್ರತಿಜ್ಞಾವಿಧಿ ಸ್ವೀಕಾರ ಮಾಡಿಸಿ ಪ್ರತಿಜ್ಞೆ ಬೋಧಿಸಿದರು.ರನ್ನಿಂಗ್, ಶಾಟ್‌ಪುಟ್,ಲಾಂಗ್‌ಜಂಪ್,ಗುಂಡು ಎಸೆತ,ಡಿಸ್ಕಸ್ ಥ್ರೋ,ಚೆಸ್,ಕೇರಂ, ಬ್ಯಾಡ್ಮಿಂಟನ್,ಥ್ರೋಬಾಲ್,ಕ್ರಿಕೆಟ್ ಹಾಗೂ ವಾಲಿಬಾಲ್ ಸ್ಪರ್ಧೆಗಳಲ್ಲಿ ಕ್ರೀಡಾಪಟುಗಳು ಉತ್ಸಾಹದಿಂದ ಭಾಗವಹಿಸಿದರು.ಸರ್ಕಾರಿ ಬಾಲಕರ ಪ್ರೌಢಶಾಲೆಯ ಸಂಗೀತ ಶಿಕ್ಷಕರಾದ ಬಾಳು ಜಾಧವ,ಶ್ರೀಕಾಂತ ಹಂಗರಗಿ ಹಾಗೂ ಎಸ್. ಜಗದೀಶ ನಾಯಕ ಅವರನ್ನು ಸನ್ಮಾನಿಸಲಾಯಿತು.

ಸೇಡಂ ಸಹಾಯಕ ಆಯುಕ್ತರಾದ ಪ್ರಭು ರಡ್ಡಿ ಸ್ವಾಗತಿಸಿದರು. ಮಹಾನಗರ ಪಾಲಿಕೆ ಆಯುಕ್ತರಾದ ಅವಿನಾಶ ಶಿಂಧೆ, ಕಲಬುರಗಿ ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಸಂಗಮೇಶ್ವರ,ಕಲಬುರಗಿ ತಹಶೀಲ್ದಾರ್ ಆನಂದ ಶೀಲ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಖಜಾಂಚಿ ಶ್ರೀಮಂತ ಪಟ್ಟೇದಾರ ಸೇರಿದಂತೆ ಜಿಲ್ಲೆಯ ಗ್ರೇಡ್–1 ಮತ್ತು ಗ್ರೇಡ್–2 ತಹಶೀಲ್ದಾರರು ಹಾಗೂ ಕಂದಾಯ ಇಲಾಖೆ ಅಧಿಕಾರಿಗಳ–ನೌಕರರು ಭಾಗವಹಿಸಿದ್ದರು. ಸೇಡಂ ಟಿಎಂಸಿ ಎಫ್‌ಡಿಎ ಪೂಜಾ ಬಂಕಲಗಿ ಕಾರ್ಯಕ್ರಮ ನಿರೂಪಿಸಿದರು. ತಹಶೀಲ್ದಾರ್ ಸಂಜೀವ ಕುಮಾರ ದಾಸರ ವಂದಿಸಿದರು

## ವೃತ್ತಿಪರ ಕುಶಲಕರ್ಮಿಗಳಿಗೆ ಸೌಲಭ್ಯಕ್ಕೆ ಅರ್ಜಿ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :

ಜಿಲ್ಲಾ ವಲಯ ಯೋಜನೆಯ "ಜಿಲ್ಲಾ ಉದ್ಯಮ ಕೇಂದ್ರ" ಮತ್ತು "ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತವಾಗಿ ಸುಧಾರಿತ ಸಲಕರಣೆ ಯೋಜನೆ" ಯಡಿ ಗ್ರಾಮೀಣ ಪ್ರದೇಶದ ವೃತ್ತಿನಿರತ ಕುಶಲಕರ್ಮಿಗಳಿಗೆ ಹಿಂದಿನ ವರ್ಷಗಳಲ್ಲಿ ಫಲಾನುಭವಿಗಳ ಲಭ್ಯತೆ ಇಲ್ಲದ ಕಾರಣದಿಂದಾಗಿ ವಿತರಣೆಯಾಗದೆ ಉಳಿದಿರುವ ಈ ಕೆಳಕಂಡ ವರ್ಗವಾರು ಉಪಕರಣಗಳನ್ನು ವಿತರಿಸಲು ಜಿಲ್ಲೆಯ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಉಪ ನಿರ್ದೇಶಕರು (ಗ್ರಾಕೈ) ಮುಕುಂದರೆಡ್ಡಿ ಪಾಟೀಲ ಅವರು ತಿಳಿಸಿದ್ದಾರೆ. ವೃತ್ತಿ ಹೊಲಿಗೆಯಂತ್ರ ಪರಿಶಿಷ್ಟ ಪಂಗಡದ ಮಹಿಳೆಯರಿಗೆ ಮಾತ್ರ, ಗೌಂಡಿ ಪರಿಶಿಷ್ಟ ಪಂಗಡ ಪುರುಷರಿಗೆ, ಕಮ್ಮಾರಿಕೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಪುರುಷರಿಗೆ ಮಾತ್ರ ಈ ಕೆಳಕಂಡ ದಾಖಲಾತಿಗಳು ಹಾಗೂ ಷರತ್ತುಗೊಳಪಟ್ಟು ಅರ್ಜಿಸಲ್ಲಿಸಬೇಕು. ದಾಖಲಾತಿಗಳು ಜನ್ಮ ದಿನಾಂಕ ನಮೂದಿಸಿರುವ ದಾಖಲೆ. (ಅಂಕಪಟ್ಟಿ, ವರ್ಗಾವಣೆ ಪ್ರಮಾಣಪತ್ರ), ಶೈಕ್ಷಣಿಕ ಅರ್ಹತೆ, ಹೊಲಿಗೆಯಂತ್ರಗಳಿಗಾಗಿ ಕನಿಷ್ಟ 8ನೇ ತರಗತಿ ಪಾಸಾಗಿರಬೇಕು ಮತ್ತು ಇತರೆ ಉಪಕರಣಗಳಿಗಾಗಿ ಯಾವುದೇ ಶೈಕ್ಷಣಿಕ ಅರ್ಹತೆ ಇರುವುದಿಲ್ಲ. (ವರ್ಗಾವಣೆ ಪ್ರಮಾಣಪತ್ರ, ಅಂಕಪಟ್ಟಿ), ಜಾತಿ ಪ್ರಮಾಣ ಪತ್ರ. (ಪ.ಜಾ, ಪ.ಪಂ ಮಾತ್ರ), ವಿಕಲಚೇತನ ಪ್ರಮಾಣ ಪತ್ರ. (ವಿಕಲಚೇತನರಾಗಿದ್ದಲ್ಲಿ), ಚಾಲ್ತಿಯಲ್ಲಿರುವ ಪಡಿತರ ಚೀಟಿ ಮತ್ತು ಆಧಾರ ಗುರುತಿನ ಚೀಟಿ, ಪಾಸ್ ಫೋ- ಟೊ, ಪಿಡಿಓ ಅವರಿಂದ ವೃತ್ತಿ ದೃಢೀಕರಣ ಪತ್ರ ಸಲ್ಲಿಸಬೇಕು. ಷರತ್ತುಗಳು (ಸೂಚನೆಗಳು) : ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳು ಮಾತ್ರ ಅರ್ಜಿಸಲ್ಲಿಸಬೇಕು, ನಗರ ಪ್ರದೇಶದ ಅಭ್ಯರ್ಥಿಗಳಿಗೆ ಅವಕಾಶವಿರುವುದಿಲ್ಲ.

ಸರ್ಕಾರಿ ನೌಕರರು ಅಥವಾ ಅವರ ಅವಲಂಬಿತರು ಅರ್ಜಿಸಲ್ಲಿಸಲು ಅರ್ಹರಿರುವುದಿಲ್ಲ. ಆಯಾ ಗ್ರಾಮ ಪಂಚಾಯತಿಯ, ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರಿಂದ, ತಾಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿಯವರಿಂದ ವೃತ್ತಿ ಮಾಡುತ್ತಿರುವ ಬಗ್ಗೆ ದೃಢೀಕರಣ ಪತ್ರ. ಹೊಲಿಗೆಯಂತ್ರಕ್ಕಾಗಿ ಪರಿಶಿಷ್ಟ ಪಂಗಡದ ಮಹಿಳೆಯರು ಮಾತ್ರ ಅರ್ಜಿಸಲ್ಲಿಸಬೇಕು. ಇತರೆ ಉಪಕರಣಗಳ ಸೌಲಭ್ಯಕ್ಕೆ ಅಭ್ಯರ್ಥಿಗಳು ಮಾತ್ರ ಸಲ್ಲಿಸಬೇಕು, 3 ವರ್ಷದಲ್ಲಿ ಇಲಾಖೆಯಿಂದ ಈ ವೃತ್ತಿಯ ಉಪಕರಣಗಳನ್ನು ಪಡೆದಿದ್ದರೆ ಅರ್ಜಿಸಲ್ಲಿಸಲು ಅವಕಾಶವಿರುವುದಿಲ್ಲ. ಯಾವುದೇ ಫಲಾನುಭವಿಯು ಕೇವಲ ಒಂದು ಅರ್ಜಿಸಲ್ಲಿಸಲು ಅವಕಾಶವಿರುತ್ತದೆ. ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಅರ್ಜಿಸಲ್ಲಿಸಲು ಅವಕಾಶ ಇರುತ್ತದೆ.

ಅಪ್ಲೋಡ್ ಮಾಡಿದ ಮೂಲ ದಾಖಲಾತಿಗಳು ಸ್ಪಷ್ಟವಾಗಿರಬೇಕು ಇಲ್ಲವಾದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು. ಆಯಾ ತಾಲೂಕಿನ ಅರ್ಜಿದಾರರು ಆಯಾ ತಾಲೂಕಿನಲ್ಲಿ ಅರ್ಜಿಸಲ್ಲಿಸಬೇಕು ಇಲ್ಲವಾದ್ದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು. ಹೊಲಿಗೆಯಂತ್ರಗಳಿಗಾಗಿ 18 ರಿಂದ 50 ವರ್ಷ ಒಳಗಿರಬೇಕು.

ಇತರೆ ಉಪಕರಣಗಳಿಗೆ ಕನಿಷ್ಠ 18 ರಿಂದ 50 ವರ್ಷ ಒಳಗಿರಬೇಕು, ಗುರಿಗಿಂತಲೂ ಹೆಚ್ಚಿನ ಅರ್ಹ ಅರ್ಜಿಗಳು ಸ್ವೀಕೃತವಾದಲ್ಲಿ ಆಯ್ಕೆ ಸಮಿತಿ ವತಿಯಿಂದ ಲಾಟರಿ ಮೂಲಕ ಆಯ್ಕೆ ಮಾಡಲಾಗುವುದು. ಆಯ್ಕೆ ಸಮಿತಿಯ ತಿರ್ಮಾನವೇ ಅಂತಿಮವಾಗಿರುವುದು. ಅರ್ಜಿದಾರರು ಆನ್‌ಲೈನ್‌ನಲ್ಲಿ ಸಲ್ಲಿಸಿದ ಅರ್ಜಿಯ ಮೂಲ ಪ್ರತಿಯನ್ನು ಕಾಯ್ದಿರಿಸಿಕೊಳ್ಳಬೇಕು, ಉಪಕರಣಗಳನ್ನು ಪಡೆಯುವಾಗ ಈ ಕಛೇರಿಗೆ ಸಲ್ಲಿಸಬೇಕು. ವೆಬ್‌ಸೈಟ್ zpyadgiri.karnataka.gov.in, yadgir.nic.in ನಲ್ಲಿ 2025ರ ಡಿಸೆಂಬರ್ 31ರ ಒಳಗೆ ಅರ್ಜಿಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ.08473253791 ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.29 ರಂದು ಸಾಹಿತಿ ಕಲಾವಿದರುಗಳಿಗೆ ಕವಿಗೋಷ್ಠಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :

2025-26ನೇ ಸಾಲಿನ 2025ರ ಡಿಸೆಂಬರ್ 29 ರಂದು ರಾಷ್ಟ್ರಕವಿ ಕುವೆಂಪುರವರ ಜನ್ಮ ದಿನಾಚರಣೆ ನಿಮಿತ್ಯ ವಿಶ್ವಮಾನವ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ. ಜಿಲ್ಲಾಡಳಿತ, ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆದಿಂದ ಅಂದು ಜಿಲ್ಲೆಯ ಎಲ್ಲಾ ಸಾಹಿತಿ ಕಲಾವಿದರುಗಳಿಗೆ ಕವಿಗೋಷ್ಠಿಯನ್ನು ಏರ್ಪಡಿಸಲಾಗುತ್ತಿದೆ. ಹಿನ್ನೆಲೆ ಜಿಲ್ಲೆಯ ಎಲ್ಲಾ ಆಸಕ್ತ ಸಾಹಿತಿ ಕವಿಗಳು ಈ ಕಾರ್ಯಕ್ರಮದಲ್ಲಿ ಕುವೆಂಪುರವರ ಕುರಿತ ಸ್ವ ರಚಿತ ಕವಿತೆಗಳ ಕಾವ್ಯ ವಾಚನ ಮೂಲಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂ.ನಿರಂಜನ ಮಹಾಸ್ವಾಮಿಗಳ ಜ್ಞಾನದ ಜಾತ್ರೆ

ಮಲ್ಲಮ್ಮ ನುಡಿ ವಾರ್ತೆ ಕಮಲನಗರ:

ಸೋನಾಳನಲ್ಲಿ ಲಿಂ.ನಿರಂಜನ ಮಹಾಸ್ವಾಮಿಗಳ ಜ್ಞಾನದ ಜಾತ್ರೆ, ಪೂಜ್ಯರು ಕೈಲಾದಿಂದ ನಮ್ಮೂರಿಗೆ ಬಂದು ನಮ್ಮಗೆ ಒಳ್ಳೆ ಮಾರ್ಗ ತೋರಿಸಿದ್ದಾರೆ ಎಂದು ಶಿವಾಣಿ ಹಲಬರ್ಗಾ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯ ಹೇಳಿದರು.




> ಪೂಜ್ಯಶ್ರೀ ನಿರಂಜನ ಮಹಾಸ್ವಾಮಿಗಳು, ಶೈಕ್ಷಣಿಕ ಕ್ರಾಂತಿಯನ್ನು ಹರಿಸಿದ್ದಾರೆ. ಅವರು ಹುಟ್ಟು ಹಾಕಿದ ಶಿಕ್ಷಣ ಸಂಸ್ಥೆಯಲ್ಲಿ ಸಾವಿರಾರು ನಿರ್ಗತಿಕ, ಬಡ ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ಸಮಾಜದ ಕಲ್ಯಾಣಕ್ಕಾಗಿ ಹಗಲಿರುಳು ಶ್ರಮಿಸಿದ ಶ್ರಮ ಜೀವಿ."
> ಡಾ. ಭೀಮಸೇನರಾವ ಸಿಂಧೆ, ಮುಖಂಡರು ಔರಾದ (ಬಿ)

> ಸೋನಾಳ ವೀರಕ್ತಮಠದಲ್ಲಿ ಪೂಜ್ಯ ಲಿಂ. ಶ್ರೀ ಮ.ನಿ.ಪ್ರ. ನಿರಂಜನ ಮಹಾಸ್ವಾಮಿಗಳ ಹೆಸರಲ್ಲಿ ಧಾರ್ಮಿಕ ಕಾರ್ಯಗಳು ಪರಮ ಉಲ್ಲಾಸ ಹಾಗೂ ಭಕ್ತಿಯಿಂದ ನಡೆಯುತ್ತಿವೆ, ಸೋನಾಳ ಗ್ರಾಮದಲ್ಲಿ ಬ್ರಹತಾಕಾರದ 'ಅಕ್ಕ ಮಹಾದೇವಿ ಅನುಭವ ಮಂಟಪ' ಕಾರ್ಯಕ್ಕೆ ಭಕ್ತರು ಮುನ್ನುಡಿ ಬರೆದ್ದಿದ್ದಾರೆ."
> ಶ್ರೀ ಚನ್ನವೀರ ಮಹಾಸ್ವಾಮಿಗಳು, ಪೀಠಾಧಿಪತಿ ಸೋನಾಳ ಹೂವಿನಶಿಗ್ಗಿ ಮಠ.

ತಾಲೂಕಿನ ಸೋನಾಳ ಗ್ರಾಮದಲ್ಲಿ ರವಿವಾರ ಆಯೋಜಿಸಿದ, ಪೂಜ್ಯರ 16ನೇ ಪುಣ್ಯಸ್ಮರಣೋತ್ಸವ ಹಾಗೂ ರಥೋತ್ಸವ ಮತ್ತು ರಾಜ್ಯಮಟ್ಟದ ನಿರಂಜನ ಪ್ರಭು ಪ್ರಶಸ್ತಿ ವಿತರಣೆ ಸಮಾರಂಭದಲ್ಲಿ ನೇತೃತ್ವ ವಹಿಸಿ ಮಾತನಾಡಿದರು. ದೇವರ ನಮ್ಮಗೆ ಬದುಕ ಮಾತ್ರ ಕೊಟ್ಟಿದ್ದಾನೆ, ಸಾರ್ಥಕ ಬದುಕನ್ನಾಗಿ ಮಾಡಿ ಕೊಳ್ಳುವದು ನಮ್ಮ ಕೈಯಲಿದೆ. ಸಜ್ಜನರ ಸಂಘ ಮಾಡಿ ನಮ್ಮ ಪಾಪವನ್ನು ಕಳೆದು ಒಳ್ಳೆಯವರಾಗಿ ಪಾವನ ರಾಗುತ್ತೇವೆ, ದುರ್ಜನರ ಸಂಘ ಕುಳಿತು ಅವರ ಅನಾಚಾರಕ್ಕೆ ನಾವು ಬಲಿಯಾಗ ಬೇಕಾಗುತ್ತದೆ ಎಂದು ಹೇಳಿದರು. ದಿವ್ಯಾ ಸಾನಿಧ್ಯ ವಹಿಸಿ ಮಾತನಾಡಿದ, ಜಗದ್ಗುರು ಶಿವಯೋಗೀಶ್ವರ ಮಹಾಸ್ವಾಮಿಗಳು ಭಾತಂಬ್ರ ಅವರು ಇಂದಿನ ಅನಾರೋಗ್ಯ ಜೀವನದಲ್ಲಿ ನಾವು ಇಂಗ್ಲೀಷ್ ಮಾತ್ರೆಗಳು ತೆಗೆದುಕೊಂಡು ಕ್ಷಣಿಕ ನೆಮ್ಮದಿಗಾಗಿ ನಮ್ಮ ಶರೀರವನ್ನು ಹಾಳು ಮಾಡಿಕೊಳ್ಳುತ್ತಿದ್ದೇವೆ. ಪೂಜ್ಯ ಲಿಂಗೈಕ್ಯ ನಿರಂಜನ ಮಹಾಸ್ವಾಮಿಗಳು ಆಯುರ್ವೇದಿಕ ಜ್ಞಾನ ಹೊಂದಿದರು, ಎಡಮೂಲಿಕೆಗಳ ಮೂಲಕ, ಪರಿಸರದಲ್ಲಿ ಸಿಗುವ ಅನೇಕ ಎಲೆ ಗಳನ್ನು ಕೊಟ್ಟಿ ರೋಗ ನಿರ್ವಾಹನ ಮಾಡಿದ ಆಯುರ್ವೇದ ಪಂಡಿತರಾಗಿದ್ದರು ಎಂದು ಹೇಳಿದರು. ಶಿವಾನಂದ ಮಹಾಸ್ವಾಮಿಗಳು ಗುರುಬಸವೇಶ್ವರ ಸಂಸ್ಥಾನ ಮಠ ಹುಲಸೂರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿವಶರಣರ ಬದುಕು ನಮ್ಮೆಲ್ಲರಿಗೆ ದಾರಿದೀಪ, ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆದರೆ ನಮ್ಮ ಜೀವನ ಪಾವನವಾಗುತ್ತದೆ. ಬಸವಾದಿ ಶಿವ ಶರಣರು ಕಾಯಕವೇ ಕೈಲಾಸ ಎಂದು ಹೇಳಿ ಕೆಲಸಕ್ಕೆ ಮಹತ್ವವನ್ನು ನೀಡಿದರು, ಲಿಂಗೈಕ್ಯ ನಿರಂಜನ ಮಹಾಸ್ವಾಮಿಗಳು ಅದನ್ನು ಮಾಡಿಕೊಳ್ಳುತ್ತಿದ್ದರು, ಈಗಿನ ಪೀಠಾಧಿಪತಿ ಶ್ರೀ ಚನ್ನವೀರ ಮಹಾ ಸ್ವಾಮಿಗಳು ಅದೇ ದಾರಿಯಲ್ಲಿ ನಡೆ- ಯುತ್ತಿದ್ದಾರೆ ಎಂದು ಹೇಳಿದರು.

ರಾಜ್ಯಮಟ್ಟದ ನಿರಂಜನ ಪ್ರಭು ಪ್ರಶಸ್ತಿಯನ್ನು ಡಾ. ನಿರ್ಮಲಾ ಕೆಳಮನಿ, ಪ್ರಾಧ್ಯಾಪಕರು ಹಿಂಗುಲಾಂಬಿಕ ಆಯುರ್ವೇದ ಮೆಡಿಕಲ್ ಕಾಲೇಜು ಕಲಬುರಗಿ ಅವರಿಗೆ ಆಯುರ್ವೇದ 25 ವರ್ಷದ ಗಣಿನಿಯ ಸೇವೆಯನ್ನು ಪರಿಗಣಿಸಿ ಈ ವರ್ಷದ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರು ಮಾತನಾಡಿದರು, ಮಠಾಧ್ಯಕ್ಷರಾದ ಪೂಜ್ಯಶ್ರೀ ಮ. ನಿ. ಪ್ರ. ಚನ್ನವೀರ ಮಹಾಸ್ವಾಮಿಗಳವರಿಗೆ 11 ಜನ ಭಕ್ತ- ರಿಂದ ತುಲಾಭಾರ ಮಾಡಲಾಯಿತು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷ ಮಹಾದೇವಿ ಲಕ್ಷ್ಮಣ ಮೇತ್ರೆ, ಶಿವಯೋಗಿ ಪಟವಾರಿ, ಕಲ್ಯಾಣರಾವ ಬಿರಾದಾರ, ವಿಜಯಕುಮಾರ ಬಿರಾದಾರ, ರಾಜಕುಮಾರ್ ಅಲಬಿದೆ, ಈಶ್ವರ ಚಿಂಚೋಳೆ, ಶಾಂತಪ್ಪ ದೇವಪ್ಪ, ಬಸವರಾಜ ಬಿರಾದಾರ, ಡಾ. ಪರಮೇಶ್ವರ ಬಿರಾದಾರ, ಶಿವರಾಜ ರಾಮಕೋಳೆ, ಶಿವಕುಮಾರ ಕೌಡಗಾಂವೆ, ದಯಾನಂದ ಬಿರಾದಾರ, ಶರಣು ಹಣಮಶೆಟ್ಟೆ, ಕೇದಾರನಾಥ್ ಬಿರಾದಾರ, ಸಾಗರ ಸ್ವಾಮಿ, ನರಶಿಂಗ ದೇವಕತ್ತೆ, ಶೇಖರ ಬಿರಾದಾರ, ಹಾಗೂ ಸೇರಿದಂತೆ ಸೋನಾಳ, ಸೋನಾಳವಾಡಿ, ಕಳಗಾಪುರ, ಹೊರಂಡಿ, ಕಮಲನಗರ, ಡಿಗ್ಗಿ, ಹೊಳಸಮುದ್ರ, ಖೇಡ ಸೇರಿದಂತೆ ಸುತ್ತ ಮುತ್ತಲಿನ ಗ್ರಾಮದ ಸದ್ಭಭಕ್ತರು ಸೇರಿದರು. ಮಹಾ ಪ್ರಸಾದ ಸೇವೆ: ಲೋಕೇಶ ಧನರಾಜ ಹಣಮಶೆಟ್ಟೆ, ಸೋನಾಳ ಅಧ್ಯಕ್ಷರು ಶ್ರೀಗುರು ನಿರಂಜನ ಸೌಹಾರ್ದ ಸಹಕಾರಿ ಬ್ಯಾಂಕ ಭಾಲ್ಕಿ, ಅವರು ಮಾಡಿದರು. ಕಾರ್ಯಕ್ರಮದ ನಿರೂಪಣೆಯನ್ನು ಶಿವಲಿಂಗ ಶಾಸ್ತ್ರೀಗಳು ಮಾಡಿದರು.

## 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಿ: ಪ್ರಭು ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ ಔರಾದ(ಬಿ) :



ಐದು ವರ್ಷದೊಳಗಿನ ಪ್ರತಿ ಮಗುವಿಗೂ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹನಿ ಹಾಕಿಸುವ ಮೂಲಕ ಮಹಾಮಾರಿ ಪೋಲಿಯೋ ಮರಳಿ ಬಾರದಂತೆ ಪೋಷಕರು ಜಾಗೃತಿ ವಹಿಸಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಔರಾದ(ಬಿ) ತಾಲ್ಲೂಕಿನ ಘಮಸುಬಾಯಿ ತಾಂಡಾದಲ್ಲಿನ ಗೃಹ ಕಛೇರಿಯಲ್ಲಿ ಡಿ.21ರಂದು ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆರೋಗ್ಯವಂತ ಸಮಾಜ ನಿರ್ಮಾಣ ಕಾರ್ಯದಲ್ಲಿ ಪಲ್ಸ್ ಪೋಲಿಯೋ ಪ್ರಮುಖ ಪಾತ್ರ ವಹಿಸುತ್ತಿದೆ. ದೇಶದ ಆರೋಗ್ಯಕ್ಷೇತ್ರದಲ್ಲಿ ಪೋಲಿಯೋ ಕಾರ್ಯಕ್ರಮ ಕ್ರಾಂತಿಕಾರಕ ಬದಲಾವಣೆ ತಂದಿದೆ. ಈಗಾಗಲೇ ಭಾರತ ಪೋಲಿಯೋ ಮುಕ್ತ ರಾಷ್ಟವೆಂಬ ಹೆಗ್ಗಳಿಕೆ ಹೊಂದಿದೆ. ಆದರೂ ಅಕ್ಕಪಕ್ಕದ ರಾಷ್ಟಗಳಲ್ಲಿ ರೋಗ ಇನ್ನೂ ಜೀವಂತ ಇರುವುದರಿಂದ ಮುನ್ನೆಚ್ಚರಿಕೆ ವಹಿಸಬೇಕಿದೆ. ಹಾಗಾಗಿ ಪೋಲಿಯೋ ಲಸಿಕೆ ಹಾಕಿಸುವುದು ಅತ್ಯವಶ್ಯಕ ಎಂದರು. ಪೋಲಿಯೋ ಲಸಿಕೆಯಿಂದ ಯಾವುದೇ ರೀತಿಯ ಅಡ್ಡಪರಿಣಾಮಗಳು ಇರುವುದಿಲ್ಲ. ಹಾಗಾಗಿ ಪೋಷಕರು ನಿರ್ಭಯವಾಗಿ ತಮ್ಮ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಬೇಕೆಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು. ಮನವಿ ಮಾಡಿದರು. ಪ್ರತಿ ಗ್ರಾಮಗಳಲ್ಲಿ ಯಾವೊಬ್ಬ ಮಗುವು ಲಸಿಕೆಯಿಂದ ವಂಚಿತಗೊಳ್ಳದಂತೆ ನೋಡಿಕೊಳ್ಳಬೇಕು. ಮನೆ ಮನೆ ಭೇಟಿ ವ್ಯವಸ್ಥಿತವಾಗಿ ನಡೆಸಬೇಕು. ಅಲೆಮಾರಿ ಸಮುದಾಯಗಳು ಇರುವ ಪ್ರದೇಶಗಳಿಗೆ ಹೆಚ್ಚಿನ ಒತ್ತು ನೀಡಬೇಕೆಂದು ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಗಾಯತ್ರಿ ಅವರು ಮಾತನಾಡಿ, ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕುಗಳಲ್ಲಿ ಒಟ್ಟು 27980 ಮಕ್ಕಳಿದ್ದು ಎಲ್ಲರಿಗೂ ಲಸಿಕೆ ಹಾಕಿಸಲು ಅಗತ್ಯ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ನಗರ ಪ್ರದೇಶದಲ್ಲಿ 15 ಮತ್ತು ಗ್ರಾಮೀಣ ಪ್ರದೇಶದಲ್ಲಿ 159 ಬೂತ್ ಗಳನ್ನು ಸಜ್ಜುಗೊಳಿಸಲಾಗಿದೆ ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅನಿತಾ, ಮೆಡಿಕಲ್ ಆಫಿಸರ್ ಡಾ.ಅಮಿತ ಪಾಲ್ ಸೇರಿದಂತೆ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ರೈತರ ಗಮನಕ್ಕೆ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :

ಜಿಲ್ಲೆಯ ರೈತ ಭಾಂಧವರು ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ತೊಗರಿ ಕಾಳು, ಪ್ರತಿ ಕ್ವಿಂಟಾಲಗೆ ರೂ.8,000/- ರಂತೆ ಪ್ರತಿ ಎಕರೆಗೆ 04 ಕ್ವಿಂಟಲ್ಸ್ ಗರಿಷ್ಠ ತೊಗರಿ ಕಾಳು ಹಾಗೂ ಪ್ರತಿ ರೈತರಿಂದ ಫ್ರೂಟ್ಸ್ ತಂತ್ರಾಂಶದಲ್ಲಿ ನಮೂದಿಸಿರುವ ಜಮೀನಿನ ಪ್ರಮಾಣದಂತೆ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳ ವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳ ವರೆಗೆ ನಿಗಧಿಪಡಿಸಿದೆ ಎಂದು ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ತಿಳಿಸಿದ್ದಾರೆ. ರೈತರು ಕಔಖ ಯಂತ್ರಗಳ ಮೂಲಕ ರೈತರ ನೊಂದಣಿ ಹಾಗೂ ಖರೀದಿ ಪ್ರಕ್ರಿಯೆಯಲ್ಲಿ ಗಖಆಂಖ ಬಯೋಮೆಟ್ರಿಕ್ ಮೂಲಕ ಸಂಬಂಧಿಸಿದ ಖರೀದಿ ಕೇಂದ್ರಗಳಲ್ಲಿ ನೊಂದಾಯಿಸುವುದು ಕಡ್ಡಾಯವಾಗಿರುತ್ತದೆ. ಹುಟ್ಟುವಳಿ ಮಾರಾಟ ಮಾಡಿದ ರೈತರಿಗೆ ಆಃಖಿ ಮೂಲಕ ಹಣ ಪಾವತಿಸಲಾಗುವುದು. ಈ ಕೆಳಕಾಣಿಸಿದ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಕೇಂದ್ರಗಳಿಗೆ ಸಂಪರ್ಕಿಸಿ, ಸದರಿ ಯೋಜನೆಯ ಲಾಭ ಪಡೆಯಲು ಅವರು ಕೋರಿದ್ದಾರೆ.

**ಯಾದಗಿರಿ ತಾಲೂಕಿನ:** ಪಿಎಸಿಎಸ್ ಹತ್ತಿ ಕುಣಿ 7892741116, ಯಾದಗಿರಿ ಟಿ ಎ ಪಿಸಿ ಎಮ್ ಎಸ್ - 7019524908 ಹಾಗೂ ಪಿ ಎ ಸಿ ಎಸ್ ರಾಮಸಮುದ್ರ -9945405710 ಗೆ ಸಂಪರ್ಕಿಸಬಹುದು.

**ಶಹಾಪುರ ತಾಲೂಕಿನ:** ಶಹಾಪುರ ಟಿ ಎ ಪಿ ಸಿ ಎಮ್ ಎಸ್ -9448577858, ಪಿ ಎ ಸಿ ಎಸ್ ಚಾಮನಾಳ- 80882886797, ಹೊಸಕೇರಾ ಪಿ ಎ ಸಿ ಎಸ್ -9741138687, ಎಫ್ ಪಿ ಓ ಗಂಗನಾಳ -9902623346, ಪಿ ಎ ಸಿ ಎಸ್ ದೋರನಹಳ್ಳಿ -9902124640 , ಪಿ ಎ ಸಿ ಎಸ್ ಮದ್ರಕಿ 9980944446 ಗೆ ಸಂಪರ್ಕಿಸಬೇಕು.

**ಸುರಪುರ ತಾಲೂಕಿನ:** ಟಿ ಎ ಪಿ ಸಿ ಎಮ್ ಎಸ್ 7259688231, ಕೆಂಭಾವಿ ಪಿ ಎ ಸಿ ಎಸ್-(1) ,8970100234, ಕೆಂಭಾವಿ ಪಿ ಎ ಸಿ ಎಸ್ (2)- 9741854971 , ಪಿ ಎ ಸಿ ಎಸ್ ಮಾಲಗತ್ತಿ-9108636156, ಪಿ ಎ ಸಿ ಎಸ್ ಮುನಿರ್ ಬೊಮ್ಮನಹಳ್ಳಿ 9663157756, ಪಿ ಎ ಸಿ ಎಸ್ ನಗನೂರ್ 9880456797 ಹಾಗೂ ಪಿ ಎ ಸಿ ಎಸ್ ಯಾಳಗಿ - 9945767305 ಗೆ ಸಂಪರ್ಕಿಸಬಹುದು.

**ಹುಣಸಗಿ ತಾಲೂಕಿನ:** ಟಿ ಎ ಪಿ ಸಿ ಎಂ ಎಸ್ ಹುಣಸಗಿ- 9535220396, ಪಿ ಎ ಸಿ ಎಸ್ ಕೊಡೆಕಲ್ 7349666155, ಪಿ ಎ ಸಿ ಎಸ್ ರಾಜನ್ ಕೊಳೂರು- 9741764178, ಪಿ ಎ ಸಿ ಎಸ್ ಹಗರಟಗಿ 9361935156, ಸಂಪರ್ಕಿಸಬೇಕು.

**ವಡಗೇರಾ ತಾಲೂಕಿನ:** ಪಿ ಎ ಸಿ ಎಸ್ ಬೆಂಡೆಗಂಬಳಿ 9902813005, ಪಿ ಎ ಸಿ ಎಸ್ ಹೈಯಾಳ ಬಿ 9110603122, ಪಿ ಎ ಸಿ ಎಸ್ ನಾಯ್ಕಲ್ - 974161655 , ಗುರುಮಠಕಲ್ ತಾಲೂಕಿನ ಪಿ ಎ ಸಿ ಎಸ್ ಚಪೆಟ್ಲ 7259543708, ಎಫ್ ಪಿ ಓ ಗುರುಮಠಕಲ್ 7259543708, ಸೈದಾಪುರ ಎಫ ಪಿ ಓ 7022192270, ಎಫ ಪಿ ಓ ಕೊಂಕಲ್- 7204922282 ಸಂಪರ್ಕಿಸಲು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಲೆಗಳ ವ್ಯಾಪ್ತಿಯಲ್ಲಿ ಹೈಟೆನ್ಷನ್ ವೈರ್ -ಟ್ರಾನ್ಸಫಾರ್ಮರ್ ಸ್ಥಳಾಂತರಕ್ಕೆ ಕ್ರಮ ಕೈಗೊಳ್ಳಿ

# ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ



ಯಾದಗಿರಿ:ಡಿ:20(ಕ.ವಾ): ಶಾಲೆಗಳ ವ್ಯಾಪ್ತಿಯಲ್ಲಿ ಭಯಮುಕ್ತ ವಾತಾವರಣ ನಿರ್ಮಿಸಲು ಅನುಕೂಲವಾಗುವಂತೆ ಶಾಲಾ ಆವರಣ ಮೇಲಿಂದ ಹಾದುಹೋಗುವ ಹೈಟೆನ್ಷನ್ ವೈರ್ ಹಾಗೂ ಶಾಲೆಗಳ ಸಮೀಪದ ಟ್ರಾನ್ಸ್ ಫಾರ್ಮ್ ಗಳ ಸ್ಥಳಾಂತರಕ್ಕೆ ತಕ್ಷಣ ಕ್ರಮ ಕೈಗೊಳ್ಳುವಂತೆ ರಾಜ್ಯ ಮಕ್ಕಳು ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಶ್ರೀ ಶಶಿಧರ ಕೋಸಂಬೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಉಚಿತ ಕಡ್ಡಾಯ ಶಿಕ್ಷಣ ಕಾಯ್ದೆ -2009, ಪೋಕ್ಸೋ ಕಾಯ್ದೆ -2012 ಹಾಗೂ ಮಕ್ಕಳ ರಕ್ಷಣಾ ನೀತಿ- 2016ರ ಅನುಷ್ಠಾನ ಕುರಿತು ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು. ಜಿಲ್ಲೆಯ ಮಕ್ಕಳು ಭಯಮುಕ್ತ ವಾತಾವರಣದಲ್ಲಿ ಅಧ್ಯಯನ ಮಾಡಬೇಕು. ಜಿಲ್ಲೆಯ ಸುಮಾರು 72 ಶಾಲಾ ಆವರಣದಿಂದ ಹೈಟೆನ್ಷನ್ ವೈರ್ ಹಾದು ಹೋಗಿದೆ. ಅದರಂತೆ ಸುಮಾರು 42 ಶಾಲೆಗಳ ಸಮೀಪದ ಟ್ರಾನ್ಸ್ ಫಾರ್ಮರ್ಸ್ ಗಳನ್ನು ಒಂದು ತಿಂಗಳ ಅವಧಿಯೊಳಗೆ ಸ್ಥಳಾಂತರಕ್ಕೆ ಕ್ರಮಕೈಗೊಳ್ಳಬೇಕು. ಇದಕ್ಕೆ ತಪ್ಪಿದಲ್ಲಿ ಸ್ವಯಂ ಪ್ರೇರಿತವಾಗಿ ಪ್ರಕರಣ ದಾಖಲಿಸಲು ಕ್ರಮ ಕೈಗೊಳ್ಳುವುದಾಗಿ ಅವರು ತಿಳಿಸಿದರು. ಜಿಲ್ಲೆಯಲ್ಲಿ ಬಿಸಿಯೂಟಕ್ಕೆ ಸಂಬಂಧಿಸಿದಂತೆ ಗುಣಮಟ್ಟದ ಆಹಾರಧಾನ್ಯ ಬಳಸಬೇಕು. ಕಳಪೆ ಗುಣಮಟ್ಟದ ಆಹಾರಧಾನ್ಯ, ಬೇಳೆಕಾಳು ತಕ್ಷಣ ತೆಗೆದು ಮೇನ್ಯು ಚಾರ್ಟ ರನ್ವಯ ಗುಣಮಟ್ಟದ ಉಪಾಹಾರ ಪೂರೈಕೆಯಾಗುವಂತೆ ನೋಡಿಕೊಳ್ಳಲು ತಿಳಿಸಿದ ಅವರು ಜಿಲ್ಲೆಯ 2.66 ಲಕ್ಷ ಮಕ್ಕಳ ಆಧಾರ್ ವೆರಿಫಿಕೇಶನ್ ಒಂದು ವಾರದೊಳಗೆ ಹಾಗೂ ಆಧಾರ್ ಸೀಡಿಂಗ್ ಸಹ ಆಗಬೇಕು. ಮಿಸ್ ಮ್ಯಾಚ್, ಡುಪ್ಲಿಕೇಶನ್, ಜನನಪ್ರಮಾಣ ಪತ್ರಗಳ ಸಮಸ್ಯೆಗಳನ್ನು ಜನೇವರಿ 5 ರೊಳಗೆ ಪರಿಹರಿಸಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಸೇರಿಸುವ ಕಾರ್ಯ ಪ್ರಾಮಾಣಿಕವಾಗಿ ಮಾಡುವಂತೆ ಅವರು ಸೂಚಿಸಿದರು. ಜಿಲ್ಲೆಯಲ್ಲಿ ಎಸ್ ಎಸ್ ಎಲ್ ಸಿ ಫಲಿತಾಂಶ ಸುಧಾರಣೆಗೆ ಎಲ್ಲ ನ್ಯೂನ್ಯತೆಗಳನ್ನು ಸರಿಪಡಿಸಬೇಕು. ಪ್ರತಿ ವಾರ ಪರಿಶೀಲನಾ ಕ್ರಮಗಳನ್ನು ಕೈಗೊಳ್ಳಬೇಕು. ಪ್ರತಿ ಶಾಲೆಯಲ್ಲಿ ಮಕ್ಕಳ ಸಹಾಯವಾಣಿ 1098 ಬರೆಯಿಸಬೇಕು.

ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳುವ ಮುಂಚೆ ಕಡ್ಡಾಯವಾಗಿ ಪೋಲಿಸ್ ವೇರಿಫಿಕೇಶನ್ ಆಗಬೇಕು. ಕಾಲಮಿತಿಯೊಳಗೆ ನಿರ್ದೇಶನ ಪಾಲಿಸಿ ಈ ಕುರಿತು ವರದಿ ಸಲ್ಲಿಸುವಂತೆ ಅವರು ಸೂಚಿಸಿದರು.

ಜಿಲ್ಲೆಯ ಶಾಲೆಗಳಲ್ಲಿ ಮಕ್ಕಳ ರಕ್ಷಣಾ ನೀತಿ -2016 ಅನುಷ್ಠಾನಗೊಳ್ಳಬೇಕು. ಅವಶ್ಯಕತೆ ಇರುವ ಶಾಲೆಗಳಿಗೆ ಜೆಜೆಎಮ್ ರಡಿ ಕುಡಿಯುವ ನೀರಿನ ಸೌಲಭ್ಯ, ಒಂದು ವಾರದೊಳಗೆ ಕಲ್ಪಿಸಬೇಕು. ಶಾಲಾ ಕೊಠಡಿಗಳ ದುರಸ್ತಿ ಹಾಗೂ ಶೌಚಾಲಯಗಳ ದುರಸ್ತಿ ಕಾರ್ಯ ತಕ್ಷಣ ಕೈಗೊಳ್ಳಲು ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಶ್ರೀ ತಿಪ್ಪಣ್ಣ ಶಿರಸಗಿ, ಡಿಡಿಪಿಐ ಚನ್ನಬಸಪ್ಪ ಮುಧೋಳ, ಡಿಸಿಪಿಓ ಸಾವಿತ್ರಿ, ಶಿಕ್ಷಣ ಇಲಾಖೆ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ತಾಳಿಕೋಟಿ ವಾಲಿಬಾಲ್ ಪ್ರೀಮಿಯರ್ ಲೀಗ್ ಸೀಸನ್-2 ಉದ್ಘಾಟನಾ ಸಮಾರಂಭ

# ಕ್ರೀಡೆಗಳಿಂದ ಪಟ್ಟಣದ ಕೀರ್ತಿ ಹೆಚ್ಚಿಸುವ ಕಾರ್ಯವಾಗಲಿ: ಹಿರೇಮಠ

ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟಿ:



ಕ್ರೀಡೆಗಳಿಗೆ ಹೆಸರುವಾಸಿಯಾದ ಪಟ್ಟಣವಾಗಿದೆ. ಇಲ್ಲಿ ಎಲ್ಲ ಕ್ರೀಡೆ ಹಾಗೂ ಕ್ರೀಡಾಪಟುಗಳಿಗೆ ಸಾಕಷ್ಟು ಪ್ರೋತ್ಸಾಹ ಹಾಗೂ ಸಹಕಾರವಿದೆ. ಈ ವಾಲಿಬಾಲ್ ಪಂದ್ಯಾವಳಿಯಿಂದ ರಾಜ್ಯ ಮತ್ತು ರಾಷ್ಟಮಟ್ಟದ ಕ್ರೀಡಾಪಟುಗಳು ಹೊರಹೊಮ್ಮಿ ಅದು ನಮ್ಮ ಪಟ್ಟಣದ ಕೀರ್ತಿಯನ್ನು ಹೆಚ್ಚಿಸಲಿ ಎಂದು ವಿವಿ ಸಂಘದ ಚೇರ್ಮನ್ ವಿ.ಸಿ.ಹಿರೇಮಠ ಹೇಳಿದರು.

ಪಟ್ಟಣದ ಎಸ್ ಕೆ ಪಿಯು ಕಾಲೇಜ್ ಮೈದಾನದಲ್ಲಿ ತಾಳಿಕೋಟಿ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ಹಮ್ಮಿಕೊಂಡ ಎರಡು ದಿನಗಳ ತಾಳಿಕೋಟಿ ವಾಲಿಬಾಲ್ ಪ್ರೀಮಿಯರ್ ಲೀಗ್ ಸೀಷನ್-2 ಪಂದ್ಯಾವಳಿಯನ್ನು ಉದ್ಘಾಟಿಸಿ ಶನಿವಾರ ಅವರು ಮಾತನಾಡಿದರು. ವಿ.ವಿ.ಸಂಘದ ವತಿಯಿಂದ ದಕ್ಷಿಣ ಭಾರತದ ವಿಶ್ವವಿದ್ಯಾಲಯಗಳ ಮಟ್ಟದ ವಾಲಿಬಾಲ್ ಪಂದ್ಯಾವಳಿಯನ್ನು ಸಂಘಟಿಸಲು ಪ್ರಯತ್ನಿಸಲಾಗುತ್ತಿದೆ ಇದಕ್ಕೆ ಅನುಮತಿ ಸಿಕ್ಕಲ್ಲಿ ಇದರ ಯಶಸ್ವಿಗೆ ನಿಮ್ಮೆಲ್ಲರ ಸಹಕಾರ ಇರಲಿ ಎಂದರು.

ವಿ.ವಿ.ಸಂಘದ ಸಹ ಕಾರ್ಯದರ್ಶಿ ಕಾಶಿನಾಥ ಮುರಾಳ ಮಾತನಾಡಿ ಈ ಪಂದ್ಯಾವಳಿಯಲ್ಲಿ ಭಾಗವಹಿಸಿದ ಎಲ್ಲ ಕ್ರೀಡಾಪಟುಗಳು ಕ್ರೀಡಾ ಮನೋಭಾವದೊಂದಿಗೆ ಆಟವಾಡಲು ಪ್ರಯತ್ನಿಸಬೇಕು ನಿರ್ಣಾಯಕರ ನಿರ್ಣಯಗಳನ್ನು ಗೌರವಿಸಬೇಕು ಯಾವುದೇ ರೀತಿಯ ವಾದ ವಿವಾದಗಳಿಗೆ ಅವಕಾಶ ಮಾಡಿಕೊಡಬಾರದು. ವಿವಿ ಸಂಘವು ಸದಾ ಆಟಗಾರರಿಗೆ ಪ್ರೋತ್ಸಾಹಿಸುವ ಕಾರ್ಯವನ್ನು ಮಾಡುತ್ತಾ ಬಂದಿದೆ ಎಂದರು. ನಿವೃತ್ತ ದೈಹಿಕ ಶಿಕ್ಷಣಾಧಿಕಾರಿ ಡಿ.ಬಿ. ಹೆಬ್ಬಾಳ, ಹಿರಿಯ ವಾಲಿಬಾಲ್ ಕ್ರೀಡಾಪಟು ಮಹೇಶ ಚಲವಾದಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ತಾಳಿಕೋಟಿ ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷ ರವೀಂದ್ರ ಕಟ್ಟಿಮನಿ ಮಾತನಾಡಿ ಪಟ್ಟಣದಲ್ಲಿ ಎರಡನೇ ಬಾರಿಗೆ ಈ ಪಂದ್ಯಾವಳಿಯನ್ನು ಆಯೋಜಿಸಲಾಗುತ್ತಿದ್ದು ಇದಕ್ಕೆ ವಿ.ವಿ. ಸಂಘದ ಅಧ್ಯಕ್ಷರು ಹಾಗೂ ಎಲ್ಲ ಪದಾಧಿಕಾರಿಗಳು ವಿಶೇಷವಾಗಿ ಪಟ್ಟಣದ ವಾಲಿಬಾಲ್ ಹಿರಿಯ ಆಟಗಾರರ ಸಂಪೂರ್ಣ ಸಹಕಾರ ಮಾರ್ಗದರ್ಶನ ನಮ್ಮೊಂದಿಗೆ ಇದೆ ನಾನು ಕ್ಲಬ್ ವತಿಯಿಂದ ಅವರಿಗೆ ಅಭಿನಂದಿಸುತ್ತೇನೆ.

ಮುಂದಿನ ದಿನಗಳಲ್ಲಿ ಇಲ್ಲಿ ರಾಷ್ಟಮಟ್ಟದ ವಾಲಿಬಾಲ್ ಆಟಗಾರರ ಒಂದು ಪಂದ್ಯಾವಳಿ ನಡೆಯಬೇಕೆಂದು ಅವರ ಆಸೆಯಾಗಿದೆ ಅದನ್ನು ಕಾರ್ಯರೂಪಕ್ಕೆ ತರಲು ನಾವೆಲ್ಲರೂ ಅವರೊಂದಿಗೆ ಸಹಕರಿಸುತ್ತೇವೆ ಎಂದು ತಿಳಿಸಿದರು.

ಎರಡು ದಿನಗಳ ಕಾಲ ನಡೆಯುವ ಈ ಪಂದ್ಯಾವಳಿಯಲ್ಲಿ ಒಟ್ಟು 8 ತಂಡಗಳು ಭಾಗವಹಿಸಿವೆ. ಪ್ರಥಮ ಬಹುಮಾನ ರೂ.50.000. ಸಿ.ಬಿ. ಅಸ್ಕಿ, ದ್ವಿತೀಯ ಬಹುಮಾನ 40,000, ಯಮನಪ್ಪ ಮಸರ್ಕಲ್, ತೃತೀಯ ಬಹುಮಾನ 30.000 ರಾಜು ಪಾಟೀಲ.

ಚತುರ್ಥ ಬಹುಮಾನ 20,000, ಬ್ರಿಲಿಯಂಟ್ ಶಾಲೆ ಮೈಲೇಶ್ವರ, ಉದ್ಘಾಟನಾ ಸಮಾರಂಭದಲ್ಲಿ ವಿವಿ ಸಂಘದ ಕಾರ್ಯದರ್ಶಿ ಎಂ ಎಸ್ ಸರಶೆಟ್ಟಿ, ಸಹಕಾರಿ ಬ್ಯಾಂಕ್ ಅಧ್ಯಕ್ಷ ಕಾಶಿನಾಥ ಸಜ್ಜನ, ಎಸ್ಕೆ ಪಿಯು ಕಾಲೇಜ್ ಅಧ್ಯಕ್ಷ ಎಂ.ಆರ್. ಕತ್ತಿ, ಎಸ್ ಕೆ ಪ್ರೌಢಶಾಲೆ

ಅಧ್ಯಕ್ಷ ಮಹಾಂತೇಶ್ ಕತ್ತಿ, ಎಸ್ ಕೆ ಬಾಲಕಿರ ಪ್ರೌಢಶಾಲೆ ಅಧ್ಯಕ್ಷ ಐಬಿ ಬಿಳೆಭಾವಿ, ನಿವೃತ್ತ ದೈಹಿಕ ಶಿಕ್ಷಕ ಅಶೋಕ ಬಿರಾದಾರ, ಡಾ.ನಜೀರ ಕೋಳ್ಯಾಳ, ಡಾ.ಅನೀಲಕುಮಾರ ಇರಾಜ, ನಿರಂಜನಶಾ ಮಕಾನದಾರ, ಫಯಾಜ್ ಉತ್ನಾಳ,

ಸಂಜೀವ ಹಜೇರಿ, ಪರಶುರಾಮ ಕಟ್ಟಿಮನಿ, ಕಳಕೂಸ ರಂಗರೇಜ,

ಸಂಜು ಹಜೇರಿ, ರಾಘು ಮಾನೆ, ರಾಜು ಪಾಟೀಲ, ನಬಿ ರಸೂಲ್ ನಾಯ್ಕೋಡಿ, ನೀಲಕಂಠ ಕೊಣ್ಣೂರ, ವೀರೇಶ್ ಗದಗ, ರಾಮನಗೌಡ ದದ್ದಲ, ಶೌಕತ್

ನಾಲಬಂದ, ಈಶ್ವರ್ ಹೂಗಾರ, ಸೌರಭ ಕುಲಕರ್ಣಿ, ಮಲ್ಲನಗೌಡ ಪಾಟೀಲ, ನೂರ ಬಿಸ್ತಿ, ಲಾಲಸಾಬ ಅಸ್ಕಿ, ವಿಜಯ ಬೊಮ್ಮನಹಳ್ಳಿ ಹಾಗೂ ಕ್ರೀಡಾಪಟುಗಳು ಇದ್ದರು.

# ರಾಯಚೂರು ತಾಲೂಕಿನಲ್ಲಿ ಡಿ.24ರಂದು ಇ–ಪೋತಿ ಅಂದೋಲನ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ ಇ–ಪೋತಿ ಅಂದೋಲನವನ್ನು ರಾಯಚೂರು ತಾಲೂಕಿನ ವ್ಯಾಪ್ತಿಯಲ್ಲಿ ಡಿಸೆಂಬರ್ 24ರಂದು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಸೂಕ್ತ ದಾಖಲೆಗಳೊಂದಿಗೆ ಅಂದೋಲನದಲ್ಲಿ ಸಕ್ರಿಯವಾಗಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಕೋರಿದ್ದಾರೆ.

ಅಂದು ಬೆಳಿಗ್ಗೆಯಿಂದ ರಾಯಚೂರಿನ ತಹಶೀಲ್ದಾರ್ ಕಚೇರಿ, ದೇವಸೂಗೂರು, ಕಲಮಲಾ, ಚಂದ್ರಬಂಡಾ, ಯರಗೇರಾ ಹಾಗೂ ಗಿಲ್ಲೇಸುಗೂರು ನಾಡ ಕಾರ್ಯಾಲಯದಲ್ಲಿ ಇ–ಪೋತಿ ಅಂದೋಲನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಸೆಂಬರ್ 24ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ ಡಿಸೆಂಬರ್ 24ರ ಬೆಳಿಗ್ಗೆ 10 ಗಂಟೆಗೆ ನಗರದ ಸರ್ಕಾರಿ ನೌಕರರ ಭವನದಲ್ಲಿರಾಷ್ಟ್ರೀಯ ಗ್ರಾಹಕರ ದಿನಾಚರಣೆ–2025 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿ ಮಗುವಿಗೂ ಪಲ್ಸ್ ಪೋಲಿಯೊ ಲಸಿಕೆ ಸಿಗಬೇಕು



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

_ಜಿಲ್ಲೆಯಲ್ಲಿ ಡಿಸೆಂಬರ್ 21ರಿಂದ ಡಿಸೆಂಬರ್ 24ರವರೆಗೆ ನಿಗದಿಯಾದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಶಿಸ್ತುಬದ್ಧವಾಗಿ ನಡೆಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹೇಳಿದರು.

ಡಿಸೆಂಬರ್ 20ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಎರಡನೇ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಲು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ 1132 ಕೇಂದ್ರಗಳನ್ನು ತೆರೆಯಲಾಗಿದ್ದು, ಸುಮಾರು 2,59,984 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಜಿಲ್ಲೆಯಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಂಘ ಸಂಸ್ಥೆಗಳು ವಿವಿಧ ಇಲಾಖೆಗಳ ಸಹಕಾರ ಅಗತ್ಯವಿರುವದರಿಂದ ಎಲ್ಲರೂ ಆರೋಗ್ಯ ಇಲಾಖೆಗೆ ಸಹಕಾರ ನೀಡಬೇಕು ಎಂದರು.

ಪೋಲಿಯೋ ಲಸಿಕಾ ಅಭಿಯಾನಕ್ಕೆ ನಿಯೋಜನೆಗೊಂಡ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ ಆಶಾ ಕಾರ್ಯಕರ್ತೆಯರು ತಮಗೆ ವಹಿಸಿದ ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಡಿ.21ರಿಂದ ಗೊತ್ತುಪಡಿಸಿರುವ ಲಸಿಕಾ ಕೇಂದ್ರಗಳಲ್ಲಿ 5 ವರ್ಷದ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆಯನ್ನು ನೀಡಲು ಕ್ರಮವಹಿಸಬೇಕು. ಮನೆಮನೆ ಭೇಟಿ ಮೂಲಕವು ಸಹ ಆರೋಗ್ಯ ಕಾರ್ಯಕರ್ತರು 5 ವರ್ಷದ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಿದ್ದಾರೆ. ಸಾರ್ವಜನಿಕರು ಲಸಿಕಾ ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

1132 ಲಸಿಕಾ ಬೂತ್‌ಗಳ ಸ್ಥಾಪನೆ: ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಅವರು ಮಾತನಾಡಿ, ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 143, ಜಿಲ್ಲೆಯ ದೇವದುರ್ಗ ತಾಲೂಕಿನಲ್ಲಿ 140, ಲಿಂಗಸುಗೂರು ತಾಲೂಕಿನಲಿ 211, ಮಾನ್ವಿ. ತಾಲೂಕಿನಲ್ಲಿ 221, ಸಿಂಧನೂರು. ತಾಲೂಕಿನಲ್ಲಿ 248, ರಾಯಚೂರು ಗ್ರಾಮೀಣ ಭಾಗದಲ್ಲಿ 169 ಸೇರಿದಂತೆ ಜಿಲ್ಲಾದ್ಯಂತ 1132 ಬೂತ್‌ಗಳನ್ನು ಸ್ಥಾಪಿಸಲಾಗಿದೆ. ಲಸಿಕಾ ಕಾರ್ಯಕ್ರಮದ ಕುರಿತು ಆಟೋ, ಸ್ಥಳೀಯ ಸಂಸ್ಥೆಯ ಕಸದ ಸಂಗ್ರಹಣೆ ವಾಹನಗಳಲ್ಲಿ ಧ್ವನಿವರ್ಧಕಗಳ ಮೂಲಕ, ಬ್ಯಾನರ್ ಹಾಗೂ ಕರಪತ್ರಗಳನ್ನು ಅಂಟಿಸುವ ಮೂಲಕ ನಾಗರಿಕರಲ್ಲಿ ಅರಿವು ಮೂಡಿಸುವ ಕೆಲಸ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಬೂತ್‌ಗಳ ಜೊತೆಗೆ 33 ಮೊಬೈಲ್ ತಂಡ ಹಾಗೂ 53 ಟ್ರಾನ್ಸಿಟ್ ತಂಡಗಳು ಕಾರ್ಯನಿರ್ವಹಿಸಲಿದ್ದು, 2436 ಸ್ವಯಂ ಸೇವಕರು ಪಲ್ಸ್ ಪೋಲಿಯೊ ಲಸಿಕೆ ಹಾಕುವ ಕಾರ್ಯದಲ್ಲಿ ಪಾಲ್ಗೊಳ್ಳಲಿದ್ದಾರೆ. ಅದನ್ನು ಮೇಲ್ವಿಚಾರಣೆ ಮಾಡಲು 248 ಮೇಲ್ವಿಚಾರಕರು ಕೆಲಸ ಮಾಡಲಿದ್ದಾರೆ. 2 ರೈಲ್ವೇ ಸ್ಟೇಷನ್ ಸೇರಿದಂತೆ ಜಿಲ್ಲೆಯ ಎಲ್ಲ ಆಸ್ಪತ್ರೆಗಳು, ಕೆಲ ಶಾಲೆಗಳು, ಸಾರ್ವಜನಿಕ ಸ್ಥಳಗಳಲ್ಲಿ ಲಸಿಕೆ ನೀಡಲು ಪ್ರದೇಶವನ್ನು ಗುರುತಿಸಲಾಗಿದೆ. ಈ ಸಂಬಂಧ ಎಲ್ಲಾ ಕಡೆ ಸಕ್ರಿಯವಾಗಿ ಲಸಿಕೆ ಹಾಕುವ ಸಿಬ್ಬಂದಿಗಳನ್ನು ನಿಯೋಜಿಸಿ ಲಸಿಕೆ ಹಾಕುವ ಕಾರ್ಯವನ್ನು ಸಮರ್ಪಕವಾಗಿ ಮಾಡಲಾಗುವುದೆಂದು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಸ್ವಾಗತಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯ ಶಂಕರ್, ಪಾಲಿಕೆ ಆರೋಗ್ಯಾಧಿಕಾರಿ ಡಾ.ಮಹಮ್ಮದ್ ಶಾಕೀರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಕಾಂಬಳೆ, ಡೆಂಗೆ ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರಯ್ಯ ಸ್ವಾಮಿ, ರಾಯಚೂರು ತಾಲೂಕು ಆರೋಗ್ಯಾಧಿಕಾರಿ ಡಾ.ಪ್ರಜ್ವಲ್, ಜೆಸ್ಕಾಂನ ಎಇಇ ಶಿವನಗುತ್ತಿ, ಸಾರಿಗೆ ಇಲಾಖೆಯ ಆರ್ಜುನ್, ರಾಯಚೂರು ಸಿಡಿಪಿಓ ಮನಸೂರ್ ಅಹ್ಮದ್ ಸೇರಿದಂತೆ ಇತರರು ಇದ್ದರು.

# ಸಮಾಜದ ಪರ ಬುಡತಪ್ಪಗಾರಿ ಆಂಜನೇಯ್ಯ ವ್ಯಕ್ತಿತ್ವ ಮಾದರಿ: ಪಾಪಾರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:



ಒಕ್ಕಲತನ ನಂತರ ಕೃಷಿ ಚಟುವಟಿಕೆಯಲ್ಲಿ ಸಕ್ರಿಯವಾಗಿ ಗುರುತಿಸಿಕೊಂಡು ಎಲ್ಲಾ ಸಮುದಾಯದಗಳ ಜೊತೆಗೆ ಬುಡತಪ್ಪಗಾರು ಆಂಜನೇಯ್ಯ ಅವರು ಉತ್ತಮ ಒಡನಾಟದ ಮೂಲಕ ಸಮಾಜದ ಅಭಿವೃದ್ಧಿಯಲ್ಲಿ ಅವರ ವ್ಯಕ್ತಿತ್ವ ಮಾದರಿ ಎಂದು ಮುನ್ನೂರು ಕಾಪು ಸಮಾಜದ ಹಿರಿಯ ಮುಖಂಡರು ಹಾಗೂ ಮಾಜಿ ಶಾಸಕರಾದ ಎ. ಪಾಪಾರೆಡ್ಡಿ ಅವರು ಹೇಳಿದರು. ಅವರಿಂದು ನಗರದ ಸಮಾಜದ ಲಕ್ಷ್ಮಮ್ಮ ದೇವಿ ಕಲ್ಯಾಣ ಮಂಟಪದಲ್ಲಿ ಸಮಾಜದ ವತಿಯಿಂದ ಆಯೋಜಿಸಿದ ಬುಡತಪ್ಪಗಾರು ಆಂಜನೇಯ್ಯ ಶ್ರದ್ಧಾಂಜಲಿ ಕಾರ್ಯಕ್ರಮ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.ಬುಡತಪ್ಪಗಾರು ಆಂಜನೇಯ್ಯ ಅವರು ಅಗಲಿಕೆ ಸಮಾಜದ ಒಂದು ದೊಡ್ಡ ಶಕ್ತಿಯನ್ನು ಕಳೆದುಕೊಂಡಿದೆ.ಅವರ ನಿಧನ ಸಮಾಜಕ್ಕೆ ತೀವ್ರದುಃಖ ಉಂಟಾಗಿದೆ.ಬುಡತಪ್ಪಗಾರು ಆಂಜನೇಯ್ಯ ಅವರು ಕೇವಲ ಮುನ್ನೂರು ಕಾಪು ಸಮಾಜದ ಮಾತ್ರವಲ್ಲ ಬೇರೆ ಸಮಾಜದ ಜನರೊಂದಿಗೆ ಉತ್ತಮ ಒಡನಾಟ ಹೊಂದಿದ್ದರು. ಸಮಾಜದ ಉಪಾಧ್ಯಕ್ಷರಾಗಿ ಹಾಗೂ ಗಂಜ್ ಅಸೋಸಿಯೇಷನ್ ಗಂಜ್ ಸದಸ್ಯರಾಗಿ ಸುಧೀರ್ಘ ಸೇವೆ ಸಲ್ಲಿಸಿದ್ದಾರೆ. ಸಮಾಜದ ಕಲ್ಯಾಣ ಮಂಟಪ ನಿರ್ಮಾಣಕ್ಕೆ ಸಮಾಜದಲ್ಲಿ ಮೊಟ್ಟ ಮೊದಲ ಭಾರಿಗೆ 6 ಸಾವಿರ ಹಣ ನೀಡಿದ ಮೊದಲ ವ್ಯಕ್ತಿ. ಸಮಾಜದ ಪ್ರತಿಯೊಬ್ಬ ಕಾರ್ಯಕ್ರಮಗಳಿಗೆ ಅವರು ಸಹಕಾರ ನೀಡಿದ್ದಾರೆ. ಬುಡತಪ್ಪಗಾರು ಆಂಜನೇಯ್ಯ ಅತ್ಯಂತ ಸರಳ ಜೀವಿ ಮತ್ತು ಕಾಯಕ ವ್ಯಕ್ತಿ. ಸಮಾಜಕ್ಕೆ ಬುಡತಪ್ಪಗಾರು ಆಂಜನೇಯ್ಯ ಅವರು ಸಮಾಜ ಅಭಿವೃದ್ಧಿಗೆ ಶ್ರಮಿಸಿದ ಆದರ್ಶ ವ್ಯಕ್ತಿತ್ವವನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಸಮಾಜ ಎಂದರೆ ಒಂದು ಕುಟುಂಬ ಏನೇ

ಸಮಸ್ಯೆಗಳು ಇದ್ದರೂ ಮೊದಲು ಸಮಾಜದ ಹಿರಿಯ ಮುಖಂಡರ ನೇತೃತ್ವದಲ್ಲಿ ಬಗೆಹರಿಸಿಕೊಳ್ಳುವ ಪ್ರಯತ್ನ ಮಾಡಬೇಕು ಎಂದರು. ಸಮಾಜದಲ್ಲಿ ಭಿನ್ನಾಭಿಪ್ರಾಯ ಇರಬಹುದು.ಅದನ್ನು ಬಿಟ್ಟು ಸಮಾಜದ ಕಟ್ಟುವಲ್ಲಿ ಪ್ರತಿಯೊಬ್ಬರು ಶ್ರಮಿಸಬೇಕು ಎಂದರು. ಮುನ್ನೂರು ಕಾಪು ಸಮಾಜಕ್ಕೆ ದೊಡ್ಡ ಇತಿಹಾಸವಿದೆ. ಗಂಜ್ ನಲ್ಲಿ ಮುನ್ನೂರು ಕಾಪು ಸಮಾಜ ಜನರು ವ್ಯಾಪಾರಸ್ಥರಾಗಿ ಕೆಲಸ ಮಾಡುತ್ತಿರುವ ಹಿನ್ನಲೆಯಲ್ಲಿ ರೈತರಿಗೆ ಬಹಳ ಅನುಕೂಲವಾಗಿದೆ. ವೆಂಕಟರೆಡ್ಡಿ,ಜಿ. ಬಸವರಾಜರೆಡ್ಡಿ ಹಾಗೂ ಬುಡತಪ್ಪಗಾರು ಆಂಜನೇಯ್ಯ ಅವರು ನನ್ನ ಉತ್ತಮ ಒಡನಾಡಿಗಳಾಗಿ ಇದ್ದರೂ ಎಂದರು. ಅವರ ಮಾರ್ಗದರ್ಶನದಲ್ಲಿ ಪ್ರತಿಯೊಬ್ಬರು ಸಮಾಜಕ್ಕಾಗಿ ದುಡಿಯಬೇಕು ಎಂದರು. ಈ ಸಂದರ್ಭದಲ್ಲಿ ಸಮಾಜದ ಅನೇಕ ಮುಖಂಡರು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಆಗಲಿಕೆ ಕಂಬನಿ ಮಿಡಿದು ತೀವ್ರ ಸಂತಾಪ ಸೂಚಿಸಿದ್ದಾರೆ. ಮೂರು ಜನ ಮಕ್ಕಳು ಒಬ್ಬ ಪುತ್ರಿಯನ್ನು ಬಿಟ್ಟು ಆಗಲಿದ್ದಾರೆ. ಈ ಸಂದರ್ಭದಲ್ಲಿ ಸಮಾಜದ ಅಧ್ಯಕ್ಷರಾದ ಬೆಲ್ಲಂ ನರಸರೆಡ್ಡಿ, ಯು. ಕೃಷ್ಣಮೂರ್ತಿ, ಬುಡತಪ್ಪಗಾರು ರಾಘವೇಂದ್ರ ರೆಡ್ಡಿ, ಜಿ. ಶೇಖರ್ ರೆಡ್ಡಿ ಸೇರಿದಂತೆ ಸಮಾಜದ ಅನೇಕ ಮುಖಂಡರು ಉಪಸ್ಥಿತರಿದ್ದರು.

# ಪರಿಶಿಷ್ಟ ಜಾತಿಯ ಒಳಮೀಸಲಾತಿ ಮಸೂದೆ ಬೆಳಗಾವಿ ಅಧಿವೇಶನದಲ್ಲಿ ಅಂಗಿಕಾರ ಸ್ವಾಗತ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:



ಪರಿಶಿಷ್ಟಜಾತಿಗಳ ಒಳ ಮೀಸಲಾತಿ ವರ್ಗೀಕರಣವನ್ನು ಬೆಳಗಾವಿ ಅಧಿವೇಶನದಲ್ಲಿಕರ್ನಾಟಕಅನುಸೂಚಿತ ಜಾತಿಗಳ ಉಪವರ್ಗೀಕರಣ ಮಸೂದೆಗೆ ವಿಧಾನಸಭೆಯಲ್ಲಿ ಆಂಗೀಕಾರ ಮಾಡಿರುವುದು ಸ್ವಾಗತ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಡಾ. ಆರ್ ಮೋಹನ್ ರಾಜ್ ಅವರು ಹೇಳಿದರು.ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ,ಕರ್ನಾಟಕರಾಜ್ಯದಲ್ಲಿ ಶೇ. 17ರಷ್ಟು ಮೀಸಲಾತಿಯಲ್ಲಿ 6–6–5, ಎ.ಬಿ.ಸಿ. ಮಾಡಲಾಗಿದ್ದು ಸಿ–ಗುಂಪಿನಲ್ಲಿ ಅಲೆಮಾರಿ ಸಮುದಾಯಗಳಿಗೆ ನ್ಯಾಯವನ್ನು ಒದಗಿಸಿಕೊಡುವ ಪ್ರಯತ್ನವನ್ನು ಸರ್ಕಾರ ಮಾಡಿದೆ. ಯಾವುದೇ ಕಾರಣಕ್ಕೂ ಸರ್ಕಾರ ಸಾಮಾಜಿಕ ನ್ಯಾಯವನ್ನು ತಡೆಹಿಡಿಯಬಾರದು ಹಾಗೂ ವಂಚಿತ ಸಮುದಾಯಗಳಿಗೆ ನ್ಯಾಯ ಒದಗಿಸುವುದು ಸರ್ಕಾರದ ಆದ್ಯ ಕರ್ತವ್ಯವಾಗಬೇಕು. ಈ ನಿಟ್ಟಿನಲ್ಲಿ ಬೆಳಗಾವಿ ಅಧಿವೇಶನದಲ್ಲಿ ಅಂಗೀಕಾರಿಸಿದ ಮಸೂದೆಯನ್ನು ಬೆಂಬಲಿಸಿದರು.ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ರಾಜಕೀಯ ಒಳ ಮೀಸಲಾತಿಯನ್ನು ಜಾರಿಗೆ ತರ ಬೇಕು ಹಾಗೂ ಎಸ್.ಸಿ.ಪಿ. ಹಾಗೂಟಿ.ಎಸ್.ಪಿ. ಅನುದಾನಗಳಲ್ಲಿ ಒಳಮೀಸಲಾತಿಯನ್ನು ಜಾರಿಗೆ ತರಬೇಕು ಎಂದು ಈ ಮೂಲಕ ಸರ್ಕಾರಕ್ಕೆ ಒತ್ತಾಯಿಸುತ್ತೇವೆ. ಎಸ್.ಸಿ.ಪಿ–ಟಿಎಸ್‌ಪಿ 24000 ಕೋಟಿ ಹಣವನ್ನು ಗ್ಯಾರಂಟಿಗಳಿಗೆ ಬಿಡುಗಡೆ ಮಾಡಿ ಪರಿಶಿಷ್ಟರಿಗೆ ಮೋಸ ಮಾಡಿದೆ. ಪರಿಶಿಷ್ಟ ಜಾತಿಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉನ್ನತ ವಿದ್ಯಾಭ್ಯಾಸಕ್ಕೆ, ವಿದೇಶಗಳಲ್ಲಿ ಹೋಗುವ ಪ್ರಬುದ್ಧ ಯೋಜನೆಗೆ ಸರ್ಕಾರದಲ್ಲಿ ಹಣವಿಲ್ಲವೆಂದು ನೆಪ ಮಾಡುತ್ತಿರುವುದು ಈ ಸಮುದಾಯಗಳಿಗೆ ಮಾಡುತ್ತಿರುವ ಮೋಸ. ಕೂಡಲೇ ಎಲ್ಲಾ ಅರ್ಜಿ ಹಾಕಿದ ವಿದ್ಯಾರ್ಥಿಗಳಿಗೂ ಈ ಯೋಜನೆಯಲ್ಲಿ ವಿದ್ಯಾರ್ಥಿ ವೇತನವನ್ನು ಮಂಜೂರು ಮಾಡ ಬೇಕಾಗಿ ಒತ್ತಾಯಿಸುತ್ತೇವೆ. ಹಾಗೂ ವಿವಿಧ ಯೋಜನೆಗಳು ಮತ್ತು ಸಾಲ ನೀಡುವ ಯೋಜನೆಗಳು 2 ವರ್ಷಗಳಿಂದ ಮಂಜೂರು ಮಾಡಿಲ್ಲ.ಕರ್ನಾಟಕದಲ್ಲಿ ಮೂರನೇ ಪರ್ಯಾಯ ರಾಜಕೀಯ ವೇದಿಕೆಗೆ– ಮುಂದಾಗಿರುವುದನ್ನು ಬೆಂಬಲ ಎಂದರು.ರಾಷ್ಟ್ರೀಯ ಪಕ್ಷಗಳು ಸ್ವಾತಂತ್ರ್ಯ ಬಂದಾಗಿನಿಂದಲು ರಾಜ್ಯಗಳನ್ನು ನಿರ್ಲಕ್ಷಿಸುತ್ತ ಬಂದಿವೆ.ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಉತ್ತಮವಾದ ಸರ್ಕಾರವನ್ನು ಸ್ಥಾಪಿಸುವುದು, ನೆಲ, ಜಲ ಸಂಪತ್ತನ್ನು, ಭಾಷೆಯನ್ನು ರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಅರಿತು, ನವ ಕರ್ನಾಟಕ ನಿರ್ಮಾಣ ಆಂದೋಲನದ ಆಶ್ರಯದಲ್ಲಿ 7ನೇ ಫೆಬ್ರವರಿ –2026 ರಂದು ಕಲಬುರ್ಗಿಯಲ್ಲಿ ಬೃಹತ್ ಸಮಾವೇಶವನ್ನು ಮಾನ್ಯ ಸಿ.ಎಂ. ಇಬ್ರಾಹಿಂ ಹಾಗೂ ಕೋಡಿಹಳ್ಳಿ ಚಂದ್ರಶೇಖರ ನಾಯಕತ್ವದಲ್ಲಿ ಹಮ್ಮಿಕೊಂಡಿದ್ದೇವೆ. ಕಳೆದ ಒಂದು ವರ್ಷದಿಂದ ಜನತಾ ಪ್ರಣಾಳಿಕೆಯನ್ನು ನಾಡಿನ ಪ್ರತಿ ಜಿಲ್ಲೆಯಲ್ಲೂ ಜನರ ನಡುವೆ ಚರ್ಚೆಗಳಿಗೆ ಬಿಡಲಾಯಿತು.

ಈ ಸಂದರ್ಭದಲ್ಲಿ ವಿಶ್ವನಾಥ ಪಟ್ಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಅಂತರ್ಜಲ ಮಟ್ಟ ಹೆಚ್ಚಿಸಲು ಕ್ರಮವಹಿಸಿ: ಡಿಸಿ ಸಂಗಪ್ಪ

ಮಲ್ಲಮ್ಮ ನುಡಿ ಬಾಗಲಕೋಟೆ:



ಜಿಲ್ಲೆಯಲ್ಲಿ ಅಂತರ್ಜಲ ಅತೀ ಬಳಕೆ ಪ್ರದೇಶಗಳನ್ನು ಗುರುತಿಸಿ ಅಂತರ್ಜಲ ಮಟ್ಟ ಹೆಚ್ಚಿಸಲು ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಜರುಗಿದ ಜಿಲ್ಲಾ ಅಂತರ್ಜಲ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ಬಾಗಲಕೋಟೆ ತಾಲ್ಲೂಕು ಪ್ರದೇಶದಲ್ಲಿ ಮಳೆಯ ಪ್ರಮಾಣ ಕಡಿಮೆ ಹಾಗೂ ನೀರಿನ ಬಳಕೆ ಹೆಚ್ಚಾಗಿದ್ದರಿಂದ ಅಂತರ್ಜಲ ಮಟ್ಟ ಕಡಿಮೆಯಾಗಿದೆ. ಈ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸಲು ಅಧಿಕಾರಿಗಳು ಕ್ರಮವಹಿಸಬೇಕು. ಈ ಪ್ರದೇಶದಲ್ಲಿ ಹೊಸದಾಗಿ ಬೋರವೆಲ್ ಕೊರೆಯಬೇಕಾದಲ್ಲಿ ಜಿಲ್ಲಾ ಮಟ್ಟದ ಪ್ರಾಧಿಕಾರದ ಸಭೆಯ ಅನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು. ಬಾಗಲಕೋಟೆ ತಾಲ್ಲೂಕಿನಲ್ಲಿ ಅತಿಯಾದ ಬಳಕೆಯಿಂದ ಅಂತರ್ಜಲ ಮಟ್ಟ ಕಡಿಮೆಯಾಗಿದ್ದು, ನಿಯಂತ್ರಣಕ್ಕೆ ಕಡಿವಾಣ ಹಾಕುವ ಅವಶ್ಯಕತೆ ಇದೆ. ಮಳೆಗಾಲದ ಸಮಯದಲ್ಲಿ ಅಂತರ್ಜಲ ಹೆಚ್ಚಿಸುವ ಕಾರ್ಯವಾಗಬೇಕು. ಈಗಾಗಲೇ ಕೆಬಿಜೆಎನ್‌ಎಲ್‌ದಿಂದ ಕಳಸಕೊಪ್ಪ, ಚಿತ್ತವಾಡಗಿ, ಹಳೆ ಸಿಂಗನಗುತ್ತಿ ಸೇರಿದಂತೆ ಒಟ್ಟು 6 ಕೆರೆಗಳನ್ನು ತುಂಬಿಸುವ ಕಾರ್ಯ ಪ್ರಗತಿಯಲ್ಲಿದೆ. ಅಲ್ಲದೇ ಮುಚಖಂಡಿ, ಕೆಂದೂರ, ಮಂಗಳೂರು ಕೆರೆ ತುಂಬಿಸಲು ಕ್ರಮವಹಿಸುವಂತೆ ಸಂಗಪ್ಪ ತಿಳಿಸಿದರು. ಮುಖ್ಯವಾಗಿ ಅಂತರ್ಜಲ ಮೌಲ್ಯಮಾಪನ, ನಿಯಂತ್ರಣ ಮತ್ತು ಅಧಿನಿಯಮ ಅನುಷ್ಠಾನ ಕುರಿತು ಚರ್ಚಿಸಲಾಯಿತು. ಬೋರವೆಲ್ ಕೊರೆಯುವುದಕ್ಕೆ ಬೋರವೆಲ್ ನಿಯಮ, ಅತೀ ಬಳಕೆ ತಡೆಯುವ ಬಗ್ಗೆ ಹೆಚ್ಚಿನ ಗಮನ ಹರಿಸುವ ಕೆಲಸವಾಗಬೇಕು. ಜಿಲ್ಲೆಯಲ್ಲಿ ಒಟ್ಟು 105 ವೀಕ್ಷಣಾ ಕೊಳವೆಬಾವಿ ಇದ್ದು, ಪ್ರತಿ ತಿಂಗಳು ಅಂತರ್ಜಲ ಮಟ್ಟ ಅಳತೆ ಮಾಪನ ಮಾಡಲಾಗುತ್ತಿರುವ ಬಗ್ಗೆ ಹಿರಿಯ ಭೂವಿಜ್ಞಾನಿ ಮಹೇಶ ಸಭೆಗೆ ತಿಳಿಸಿದರು.

ಮುಚಖಂಡಿ ಹಾಗೂ ಶಿರೂರ ಕೆರೆ ತುಂಬಿಸಲು ಚತುಷ್ಪಥ ರಸ್ತೆ ನಿರ್ಮಾಣದಿಂದ ಪೈಪ್‌ಗಳು ಒಡೆದಿದ್ದು, ಅವುಗಳ ದುರಸ್ತಿಕಾರ್ಯ ಪ್ರಗತಿಯಲ್ಲಿದೆ ಎಂದು ಸಂಬಂಧಿಸಿದ ಅಧಿಕಾರಿಗಳು ಸಭೆಗೆ ತಿಳಿಸಿದರು. ಮಲಪ್ರಭಾ ನದಿ ಒತ್ತುವರಿ ತೆರವಿಗೆ ಕ್ರಮಕೈಗೊಂಡು ನೀರು ನದಿಗೆ ಸರಾಗವಾಗಿ ಹರಿಯುವಂತೆ ಮಾಡಲು ಅಧಿಕಾರಿಗಳು ಕ್ರಮವಹಿಸಲು ಸೂಚಿಸಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಜಿಲ್ಲಾ ಪರಿಸರ ಮಾಲಿನ್ಯ ನಿಯಂತ್ರಣಾಧಿಕಾರಿ ಅನೀಲ ಚಳಗೇರಿ, ವೆಂಕಟೇಶ ನೀಲನಾಯ್ಕ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ ಜಯಂತ್ಯುತ್ಸವ



ಭಾಲ್ಕಿ.:ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ 136ನೆಯ ಜಯಂತ್ಯುತ್ಸವ ಆಚರಣೆಗೆ ಪಟ್ಟಣ ಸಜ್ಜುಗೊಂಡಿ–ದೆ. ಎಲ್ಲೆಡೆ ಸ್ವಾಗತ ಕೋರುವ ಕಮಾನಗಳು, ಬ್ಯಾನರ್ ಗಳು ರಾರಾಜಿಸುತ್ತಿವೆ. ಪಟ್ಟದ್ದೇವರ ಧ್ಯಾನ ಮಂದಿರ ವಿದ್ಯುತ್ ದೀಪ ಮತ್ತು ಹೂಗಳಿಂದ ಸಿಂಗಾರಗೊಂಡಿದೆ.

ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಸೋಮವಾರನಾಡೋಜಡಾ.ಬಸವಲಿಂಗ ಪಟ್ಟದ್ದೇವರು ಮತ್ತು ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಸಾನ್ನಿಧ್ಯದಲ್ಲಿ ದಿನವಿಡಿ ವಿವಿಧ ಅರ್ಥಪೂರ್ಣ ಕಾರ್ಯಕ್ರಮಗಳು ಜರುಗಲಿವೆ. ಸಾಧಕರಿಗೆ ಪ್ರಶಸ್ತಿ ಪ್ರದಾನ, ಗ್ರಂಥ, ಕಿರುಚಿತ್ರ ಲೋಕಾರ್ಪಣೆ, ನಾಟಕ ಪ್ರದರ್ಶನ ಸೇರಿ ಮುಂತಾದ ಕಾರ್ಯಕ್ರಮಗಳು ನಿರಂತರವಾಗಿ ನಡೆಯಲಿವೆ.

**ವಿವಿಧ ಗ್ರಂಥ ಲೋಕಾರ್ಪಣೆ :**

ಸಾಹಿತಿ ಸುನಿತಾ ದಾಡಗೆ(ಗೌಡರ) ಸಂಪಾದಕತ್ವದಲ್ಲಿ ಹೊರತಂದ ನಂದಾದೀಪ ಮತ್ತು ಚನ್ನಬಸವೇಶ್ವರ ಗುರುಕುಲ ಅಧೀಕ್ಷಕ,ಸಾಹಿತಿ ಆಗಿರುವ ಗಣಪತಿ ಭೂರೆ ಅವರು ಬರೆದ ಅಕ್ಷರಲೋಕದ ನಕ್ಷತ್ರ ಗ್ರಂಥಗಳು ಬಿಡುಗಡೆಯಾಗಲಿವೆ.ಮತ್ತುಗುರುಪ್ರಸಾದ ಚಂದ್ರಶೇಖರ ನಿರ್ದೇಶನದಲ್ಲಿ ಹೊರತಂದಿರುವ ಕಿರುಚಿತ್ರ ದೇವರ ಹೆಸರಿನಲ್ಲಿ ಪ್ರಮಾಣ ಮಾಡುತ್ತೇನೆ ಲೋಕಾರ್ಪಣೆಗೊಳ್ಳಲಿದೆ.ಸಾಯಂಕಾಲ 7ಕ್ಕೆ ಅನುಭವ ಮಂಟಪ ಸಂಸ್ಕೃತಿ ವಿದ್ಯಾಲಯ ಬೀದರ್ ಮಕ್ಕಳು ಶಿವಯೋಗಿ ಸಿದ್ಧರಾಮೇಶ್ವರ ನಾಟಕ ಪ್ರದರ್ಶಿಸಲಿದ್ದಾರೆ. ಚನ್ನಬಸವೇಶ್ವರ ಗುರುಕುಲ ಪಿಯುಸಿ ವಿಭಾಗದ ವಿದ್ಯಾರ್ಥಿನಿ ಸಿಂಚನ ಬಸವರಾಜ ವಚನ ನೃತ್ಯ ನಡೆಸಿ ಕೊಡಲಿದ್ದಾರೆ.

ಬಸವ ಕಲ್ಯಾಣ ವಿಶ್ವಬಸವ ಧರ್ಮ ಟ್ರಸ್ಟ್ ಅನುಭವ ಮಂಟಪದ ಕಾರ್ಯದರ್ಶಿ ಡಾ.ಎಸ್.ಬಿ.ದುರ್ಗೆ ಅವರಿಗೆ

2025ನೇ ಸಾಲಿನ ಡಾ.ಚನ್ನಬಸವ ಪಟ್ಟದ್ದೇವರ ಕಾಯಕ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ನಾರಂಜಾ ಸಕ್ಕರೆ ಕಾರ್ಖಾನೆ ಮಾಜಿ

ಅಧ್ಯಕ್ಷ ಡಿ.ಕೆ.ಸಿದ್ರಾಮ ಪ್ರಶಸ್ತಿ ದಾಸೋಹಿಗಳಾಗಿದ್ದಾರೆ.

**ಕಾರ್ಯಕ್ರಮದಲ್ಲಿ ಏನೇನು?**

**ಬೆಳಿಗ್ಗೆ 6.30 ಗಂಟೆಗೆ ಹಿರೇಮಠ ಸಂಸ್ಥಾನದ ವತಿಯಿಂದ ಚನ್ನಬಸವಾಶ್ರಮ ವರೆಗೂ ಬಸವ ನಡಿಗೆ ನಡೆಯಲಿದೆ. ಬೆಳಿಗ್ಗೆ 7.30ಕ್ಕೆ ಷಟಸ್ಥಲ ಧ್ವಜಾರೋಹಣ ನೆರವೇರಲಿದೆ. ಬೆಳಿಗ್ಗೆ 10 ಗಂಟೆಗೆ ವಿವಿಧ ಸರ್ಧೆಗಳ ಉದ್ಘಾಟನೆ ನಡೆಯಲಿದೆ. ನಂತರ ಸಾಯಂಕಾಲ 4.30ಕ್ಕೆ ಅಕ್ಕನ ಬಳಗದ ಶರಣೆ–ಯರಿಂದ ತೊಟ್ಟಿಲು ಕಾರ್ಯಕ್ರಮ ನೆರವೇರುವುದು. ಸಾಯಂಕಾಲ 5ಕ್ಕೆ ಪಟ್ಟದ್ದೇವರ ಜಯಂತ್ಯುತ್ಸವ ಉದ್ಘಾಟನೆಗೊಳ್ಳಲಿದೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮಾಜಿ ಶಾಸಕ ಪ್ರಕಾಶ ಖಂಡ್ರೆ ಅಧ್ಯಕ್ಷತೆ ವಹಿಸುವರು. ಸಂಸದ ಸಾಗರ ಖಂಡ್ರೆ ಕ್ಯಾಲೆಂಡರ್ ಬಿಡುಗಡೆ ಮಾಡಲಿದ್ದಾರೆ. ನಾರಂಜಾ ಸಕ್ಕರೆ ಕಾರ್ಖಾನೆ ಮಾಜಿ ಅಧ್ಯಕ್ಷ ಡಿ.ಕೆ.ಸಿದ್ರಾಮ ಪುಸ್ತಕ ಬಿಡುಗಡೆ ಮಾಡುವರು.**

**ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ ಜಯಂತ್ಯುತ್ಸವ ಅರ್ಥಪೂರ್ಣ ಆಚರಣೆಗೆ ಕಳೆದ ಒಂದು ತಿಂಗಳಿನಿಂದ ಸಿದ್ಧತೆ ಮಾಡಿಕೊಳ್ಳಲಾಗಿದೆ. ದಿನವೀಡಿ ಕಾರ್ಯಕ್ರಮಗಳು ನಡೆಯಲಿದ್ದು ಬಸವ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಬೇಕು. ಆಗಮಿಸುವ ಭಕ್ತರಿಗೆ ಅನ್ನದಾಸೋಹ ವ್ಯವಸ್ಥೆ ಮಾಡಲಾಗಿದೆ.**

**ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

# ಪ್ರಭಾವತಿ ಚಂದ್ರಧಾರ ವಾರದ ನಿಧನ



ಭಾಲ್ಕಿ: ಪ್ರಭಾವತಿ ಚಂದ್ರಧಾರ ವಾರದ (75) ನಿಧನ ಭಾಲ್ಕಿ. ಪಟ್ಟಣದ ನಿವಾಸಿ, ನ್ಯಾಯವಾದಿ ಉಮಾಕಾಂತ ವಾರದ ರವರ ತಾಯಿ ಪ್ರಭಾವತಿ ಚಂದ್ರಧಾರ ವಾರದ (75) ರವರು ರವಿವಾರ ಸಂಜೆ ನಿಧನ ರಾಗಿದ್ದಾರೆ. ಮೃತರು ಇಬ್ಬರು ಗಂಡು ಮಕ್ಕಳು ಓರ್ವ ಹೆಣ್ಣು ಮಗಳು ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಮಧ್ಯಾನ 1 ಗಂಟೆಗೆ ಪಟ್ಟಣದ ಲಿಂಗಾಯತ ರುದ್ರ ಭೂಮಿಯಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಸಂತಾಪ. ಮೃತರ ನಿಧನಕ್ಕೆ ಹಿರೇಮಠದ ಶ್ರೀ ಬಸವಲಿಂಗ ಪಟ್ಟದೇವರು, ಶ್ರೀ ಗುರುಬಸವ ಪಟ್ಟದೇವರು ಸಂತಾಪ ಸೂಚಿಸಿದ್ದಾರೆ.

# ಪೋಲಿಯೊ ಮುಕ್ತ ಭಾರತ : ಬಾದರ್ಲಿ

ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು:



05 ವರ್ಷದೊಳಗಿನ ಮಕ್ಕಳಿಗೆ ತಪ್ಪದೆ ಪೋಲಿಯೊ ಹನಿ ಹಾಕಿಸುವ ಮೂಲಕ ಆರೋಗ್ಯವಂತ ಸದೃಢ ಸಮಾಜ ನಿರ್ಮಾಣ ಮಾಡಬೇಕು ಎಂದು ವಿಧಾನ ಪರಿಷತ ಶಾಸಕರಾದ ಬಸನಗೌಡ ಬಾದರ್ಲಿ ಹೇಳಿದರು. ನಗರದ ತಾಲೂಕು ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ರಾಷ್ಟ್ರೀಯ ಪೋಲಿಯೊ ದಿನಾಚರಣೆ ಕಾರ್ಯಕ್ರಮ ಅಂಗವಾಗಿ ಮಕ್ಕಳಿಗೆ ಪೋಲೀಯೋ ಹನಿ ಹಾಕಿ ಮಾತನಾಡಿ ಅವರು ಭಾರತ ಪೋಲೀಯೊ ಮುಕ್ತವಾಗಿದೆ ಎಂದು ಹೇಳಿದರು ಇತರ ದೇಶಗಳಲ್ಲಿನ ಹೋಲಿಕೆ ಮಾಡಿದಾಗ ನಮ್ಮ ದೇಶದಲ್ಲಿ ಪೋಲೀಯೊ ಪ್ರಕರಣಗಳು ನಮ್ಮ ದೇಶದೊಳಗೆ ಬಾರದಂತೆ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ನಿರಂತರ ಪೋಲೀಯೊ ಹನಿ ಹಾಕಿಸುವ ಕಾರ್ಯ ಕ್ರಮ ಕೈಗೊಳ್ಳುತ್ತಿದೆ ಕಡ್ಡಾಯ ವಾಗಿ ತಪ್ಪದೆ ಮಕ್ಕಳಿಗೆ ಪೋಲಿಯೊ ಹನಿ ಹಾಕಿಸಿ ಆರೋಗ್ಯ ವಂತ ಮಕ್ಕಳನ್ನು ಬೆಳೆಸುವ ಹೊಣೆಗಾರಿಕೆಗೆ ನಮ್ಮೆಲ್ಲಿರ ಮೇಲಿದೆ ಎಂದು ಹೇಳಿದರು

ತಾಲ್ಲೂಕಿನ 5 ವರ್ಷದೊಳಗಿನ 45571 ಮಕ್ಕಳಿದ್ದು 248 ಮೇಲ್ವಿಚಾರಕರ ತಂಡಗಳನ್ನು ರಚನೆ ಮಾಡಿದ್ದು. 14, ಸಂಚಾರಿ ತಂಡಗಳನ್ನು ಮಾಡಲಾಗಿದೆ ಇಂದು ಕೇಂದ್ರಗಳಲ್ಲಿ ಪೋಲಿಯೊ ಹಾಕಲಾಗುವದು 22.23.24 ಅಂಗನವಾಡಿ. ಆಶಾ ಕಾರ್ಯಕರ್ತರು ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಮನೆ ಮನೆಗೆ ಹೋಗಿ ಮಕ್ಕಳಿಗೆ ಪೋಲೀಯೊ ಹಾಕಲಾಗುವುದು ಆರೋಗ್ಯ ಇಲಾಖೆ ಸಿಬ್ಬಂದಿಗಳ ಜೊತೆ ಸಾರ್ವಜನಿಕರು ಸಹಕಾರ ನೀಡಿ ಪೋಲೀಯೊ ಮುಕ್ತ ತಾಲೂಕು ನಿರ್ಮಾಣ ಮಾಡೋಣ ಎಂದರು. ಸಾರ್ವಜನಿಕ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿಗಳಾದ ಟಿ ಹೆಡಾ. ಅಯ್ಯನಗೌಡ. ಡಾ ಸುರೇಶಗೌಡ. ಡಾ ಹನುಮಂತ ರೆಡ್ಡಿ. ಡಾ.ನಾಗರಾಜ ಕಾಟ್ವ. ಡಾ. ಶ್ರುತಿ. ಡಾ. ಮಂಜುನಾಥ ಅಣೆಗೌಡರ್ ಡಾ. ಅಹ್ಮಜದ ಷರೀಪ ಜವಳಗೇರಾ. ನಗರ ಹಾಗೂ ತಾಲುಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಬ್ಬಂದಿಗಳಾದ ಸಂಗನಗೌಡ. ಗೀತಾ ಹಿರೆಮಠ. ರಂಗನಾಥ ಗುಡಿ. ಎಫ್.ಎ.ಹಣಗಿ. ಗುರುಶಾಂತಮ್ಮ. ಸುವರ್ಣ. ಪ್ರಸಾದ. ಈರಣ್ಣ. ತ್ರಿವೇಣಿ. ತೇಜಾ. ರಾಮಾಂಜನೇಯ. ಪ್ರಸಾದ. ಸಿಡಿಪಿಓ ಲಿಂಗನಗೌಡ. ಬಿಇಓ ಬಸಲಿಂಗಪ್ಪ ಜವಳಗೇರಾ. ಸೇರಿಂದತೆ ಆಶಾ ಅಂಗನವಾಡಿ ಮತ್ತು ಬಸವ ಮೆಡಿಕಲ್ ಕಾಲೇಜ ವಿದ್ಯಾರ್ಥಿಗಳು ಸಾರ್ವಜನಿಕರು ಹಾಜರಿದ್ದರು.

# ಕನ್ನಡ ಪ್ರೇಮಿ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆ



ಭಾಲ್ಕಿ : ಗಡಿ ಭಾಗದಲ್ಲಿ ಮರಾಠಿ ಉರ್ದು ಭಾಷೆಗಳ ಪ್ರಭಾವ ಇತ್ತು. ನಿಜಾಮನ ಕಾಲದಲ್ಲಿ ಕನ್ನಡ ಮಾತನಾಡಿದರೆ ಅಪರಾಧ ಎಂಬ ವಾತಾವರಣ ನಿರ್ಮಾಣವಾಗಿತ್ತು. ಇಂತಹ ಸಂದರ್ಭದಲ್ಲಿ ಡಾ. ಚನ್ನಬಸವ ಪಟ್ಟದ್ದೇವರು ಹೊರಗಡೆ ಉರ್ದು ನಾಮಫಲಕವನ್ನು ಹಾಕಿ ಒಳಗಡೆ ಕನ್ನಡವನ್ನು ಕಲಿಸಿ ಕನ್ನಡವನ್ನು ಉಳಿಸಿದ್ದಾರೆ ಎಂದು ಶುಭಾಂಗಿ ಚನ್ನಬಸವಣ್ಣ ಬಳತೆ ಅಭಿಪ್ರಾಯಪಟ್ಟರು. ಏಕೀಕರಣದಲ್ಲಿಯೂ ಹೋರಾಟವನ್ನು ಮಾಡಿ, ಕಾವಿ ತೊಟ್ಟು ಮಠಕ್ಕೆ ಅಂಟಿಕೊಳ್ಳದೆ ,ಶುದ್ಧ ಜಂಗಮರಾಗಿ ಬಸವಣ್ಣನವರ ಮಾರ್ಗದಲ್ಲಿ ಸಮಾಜದ ಉದ್ಧಾರಕ್ಕಾಗಿ ಜೀವನ ಪರ್ಯಂತ ಶ್ರಮಿಸಿದ್ದಾರೆ. ಪೂಜ್ಯಶ್ರೀಗಳು ಕನ್ನಡ , ನಾಡು ,ನುಡಿ ಶಿಕ್ಷಣಕ್ಕಾಗಿ ಹೋರಾಡಿ ಕನ್ನಡದ ಅಭಿಮಾನವನ್ನು ಎಲ್ಲರಲ್ಲಿಯೂ ಬೆಳೆಸಿದ್ದಾರೆ. 109 ವರ್ಷಗಳ ಕಾಲ ಬಾಳಿ ಬದುಕಿದ ಡಾ. ಚೆನ್ನಬಸವ ಪಟ್ಟದ್ದೇವರು ಬಡ ಜನರ ದೀನ ,ದಲಿತರ ಏಳಿಗೆಗಾಗಿ ತಮ್ಮ ಬದುಕನ್ನೇ ಮುಡಿಪಾಗಿಟ್ಟಿದ್ದರು. ಕ್ರಿಯಾಶೀಲರಾಗಿ, ಎನಗಿಂತ ಕಿರಿಯರಿಲ್ಲ ಶಿವ ಭಕ್ತರಿಗಿಂತ ಹಿರಿಯರಿಲ್ಲ ಎಂಬ ಮಾತಿನಂತೆ ನಡೆಯುತ್ತಿದ್ದರು. ಅವರ ಬದುಕಿನ ಒಂದೊಂದು ತತ್ವಗಳು ಕೂಡ ಆದರ್ಶ ಹಾಗೂ ಅನುಕರಣೆಯವಾದದ್ದು ಎಂದು ತಮ್ಮ ಅನಿಸಿಕೆಯನ್ನು ವ್ಯಕ್ತಪಡಿಸಿದರು.

# ಆಡಳಿತ ಸುಧಾರಣಾ ಆಯೋಗ ಅಧ್ಯಕ್ಷರ ಪ್ರವಾಸ

**ಮಲ್ಲಮ್ಮ ನುಡಿ ವಾರ್ತೆ ಕಾರವಾರ:** ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ.ದೇಶಪಾಂಡೆ ಅವರು ಡಿ20 ರಿಂದ 24 ರ ವರೆಗೆ ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರವಾಸ ಕೈ ಗೊಂಡಿದ್ದು, ಅಂದು ಬೆಳಗ್ಗೆ 11 ಗಂಟೆಗೆ ಜೋಯಿಡಾ ತಾಲೂಕಿನ ಮೂಲಭೂತ ಸೌಕರ್ಯಗಳ ಈಡೇರಿಕೆಗೆ ಸಂಬಂಧಿಸಿದಂತೆ ಕರ್ನಾಟಕ ಪ್ರಾಂತ ರೈತ ಸಂಘದ ಸದ್ಯಸರೊಂದಿಗೆ ಸಭೆ ನಡೆಸಲಿದ್ದಾರೆ.

ಡಿ.23 ರಂದು ಮದ್ಯಾಹ್ನ 12 ಗಂಟೆಗೆ ಹಳಿಯಾಳದಲ್ಲಿ ಸಾರ್ವಜನಿಕರ ಭೇಟಿ, ಮದ್ಯಾಹ್ನ 3.30 ಗಂಟೆಗೆ ಹಂದಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಸಮುದಾಯ ಭವನ ನಿರ್ಮಾಣದ ಗುದ್ದಲಿ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಸಂಜೆ 4.30 ಗಂಟೆಗೆ ದಾಂಡೇಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಶ್ರೀ ನಾಗದೇವತಾ ದೇವಸ್ಥಾನದ ಆವರಣದಲ್ಲಿ ಸಮುದಾಯ ಭವನ ನಿರ್ಮಾಣದ ಗುದ್ದಲಿ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ, ಸಂಜೆ 5.30 ಗಂಟೆಗೆ ದಾಂಡೇಲಿ ನಗರಸಭೆಯಲ್ಲಿ ಅರ್ಹ ಫಲಾನುಭವಿಗಳಿಗೆ ಹೊಲಿಗೆ ಯಂತ್ರಗಳ ಹಾಗೂ ಇತರ ಸಾಮಾಗ್ರಿಗಳ ವಿತರಣೆ ಮಾಡಲಿದ್ದಾರೆ. ಸಂಜೆ 6.30 ಗಂಟೆಗೆ ದಾಂಡೇಲಿಯ ಜೆ.ಎನ್.ರಸ್ತೆ ಮತ್ತು ಚನ್ನಮ್ಮಾ ಸರ್ಕಲ್‌ನಲ್ಲಿ ಅಲಂಕಾರಿಕ ದೀಪಗಳ ಮತ್ತು ಎಲ್.ಇ.ಡಿ. ಪರದೆ ಲೋಕಾರ್ಪಣೆ ಮಾಡಲಿದ್ದಾರೆ.

ಡಿ.24 ರಂದು ಬೆಳಗ್ಗೆ 11 ಗಂಟೆಗೆ ಸಾರ್ವಜನಿಕರ ಭೇಟಿ, ಸಂಜೆ 4 ಗಂಟೆಗೆ ಹಳಿಯಾಳ ತಾಲೂಕಿನ ಅಭಿವೃದ್ಧಿಪಡಿಸಿದ ಶ್ರೀ ಶಿವಾಜಿ ಕ್ರೀಡಾಂಗಣ ಲೋಕಾರ್ಪಣೆ ಮಾಡಲಿದ್ದಾರೆ ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಪ್ರಟಣೆಯಲ್ಲಿ ತಿಳಿಸಿದ್ದಾರೆ.

# ಕರಾವಳಿ ಉತ್ಸವ : ಮ್ಯಾರಾಥಾನ್ ಓಟ

ಕಾರವಾರ.ಡಿ.19 (ಕರ್ನಾಟಕ ವಾರ್ತೆ):– ಜಿಲ್ಲಾಡಳಿತದ ವತಿಯಿಂದ ಕರಾವಳಿ ಉತ್ಸವ–2025 ರ ಅಂಗವಾಗಿ ಡಿಸೆಂಬರ್ 26 ರಂದು ರವೀಂದ್ರನಾಥ ಠಾಗೋರ ಕಡಲತೀರದಲ್ಲಿ ಮ್ಯಾರಾಥಾನ್ (ಪುರುಷ ಮತ್ತು ಮಹಿಳೆಯರಿಗೆ 21 ಕೀ.ಮೀ, 10 ಕೀ.ಮೀ, 5 ಕೀ.ಮೀ), ಹಗ್ಗಜಗ್ಗಾಟ (ಪುರುಷ ಮತ್ತು ಮಹಿಳೆಯರು), ವಾಲಿಬಾಲ್ (ಪುರುಷ ಮತ್ತು ಮಹಿಳೆಯರು) ಮತ್ತು ಕಬ್ಬಡ್ಡಿ (ಪುರುಷರಿಗೆ ಮಾತ್ರ) ಪಂದ್ಯಾವಳಿಯನ್ನು ಆಯೋಜಿಸಲಾಗಿದೆ.

ಈ ಪಂದ್ಯಾವಳಿಗಳಲ್ಲಿ ಭಾಗವಹಿಸುವ ಸ್ಪರ್ಧಾಳುಗಳು ಡಿ.24 ರ ಸಂಜೆ 6 ಗಂಟೆಯೊಳಗಾಗಿ ಹೆಸರನ್ನು ಗೂಗಲ್ ಫಾರ್ಮ ಲಿಂಕ್: https://forms.gle/UFkdjPcouTYvqyyB6 ನಲ್ಲಿ ನೋಂದಾಯಿಸತಕ್ಕದ್ದು.

ಸೂಚನೆಗಳು: ಮ್ಯಾರಾಥಾನ್ ಸ್ಪರ್ಧೆಯನ್ನು ಬೆಳಗ್ಗೆ ಸರಿಯಾಗಿ 6 ಗಂಟೆಗೆ ಏರ್ಪಡಿಸಲಾಗುವುದು. ಗುಂಪು ಸ್ಪರ್ಧೆಗಳನ್ನು ಬೆಳಗ್ಗೆ 10 ಗಂಟೆಗೆ ಏರ್ಪಡಿಸಲಾಗುವುದು. ಮ್ಯಾರಾಥಾನ್ ಸ್ಪರ್ಧೆಯಲ್ಲಿ ಭಾವಹಿಸಿದ ಸ್ಪರ್ಧಾಳುಗಳಿಗೆ ಟಿ.ಶರ್ಟ ವಿತರಿಸಲಾಗುವುದು ಹಾಗೂ ಫಿನಿಶಿಂಗ್ ಮಾಡಿದ ಸ್ಪರ್ಧಾಳುಗಳಿಗೆ ಮೆಡಲ್ಸ್ ಮತ್ತು ಸರ್ಟಿಫಿಕೇಟ್ ನೀಡಲಾಗುವುದು. ಊಟೋಪಹಾರದ ವ್ಯವಸ್ಥೆ ಇರುತ್ತದೆ. ಕಬ್ಬಡಿ ಪಂದ್ಯಾವಳಿಯನ್ನು ಮ್ಯಾಟ್‌ನಲ್ಲಿ ಆಡಿಸುವುದರಿಂದ ಮ್ಯಾಟ್ ಶೂ ಮತ್ತು ಡ್ರೆಸ್ ಕೋಡ್ ಕಡ್ಡಾಯವಾಗಿ ಧರಿಸತಕ್ಕದ್ದು, ಮ್ಯಾರಾಥಾನ್ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ಸ್ಪರ್ಧಾಳುಗಳಿಗೆ ನಗದು ಬಹುಮಾನ ಮತ್ತು ಪದಕ ನೀಡಲಾಗುವುದು.ಎಲ್ಲಾ ಗುಂಪು ಕ್ರೀಡೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ತಂಡಗಳಿಗೆ ನಗದು ಬಹುಮಾನ ಮತ್ತು ಟ್ರೋಫಿ ನೀಡಲಾಗುವುದು. ಎಲ್ಲಾ ಗುಂಪು ಕ್ರೀಡೆಯ ಸ್ಪರ್ಧಾಳುಗಳು ಬೆಳಗ್ಗೆ 9 ಗಂಟೆಗೆ ಹಾಜರಿರತಕ್ಕದ್ದು. ಆನ್‌ಲೈನ್ ಲಿಂಕ್ ಮೂಲಕ ನೋಂದಣಿಗೊಂಡ ಸ್ಪರ್ಧಾಳುಗಳು ಮತ್ತು ತಂಡಗಳಿಗೆ ಮಾತ್ರ ಭಾಗವಹಿಸಲು ಅವಕಾಶ ನೀಡಲಾಗುವುದು.ಕ್ರೀಡಾಕೂಟ ನಡೆಯುವ ಸಂದರ್ಭದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ಜರುಗಿದ್ದಲ್ಲಿ ಸಂಘಟಕರು ಜವಾಬ್ದಾರರಾಗಿರುವುದಿಲ್ಲ. ಯಾವುದೇ ಸಮಯದಲ್ಲಿ ಸಂಘಟಕರ ತೀರ್ಮಾನವೇ ಅಂತಿಮವಾಗಿರುತ್ತದೆ. ಭಾಗವಹಿಸುವ ಸ್ಪರ್ಧಾಳುಗಳಿಗೆ ಪ್ರಯಾಣ ಭತ್ಯೆ ಇರುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ, ಅಥ್ಲೆಟಿಕ್ ತರಬೇತುದಾರ ಶಿವಾನಂದ ನಾಯ್ಕ, ಮೊ.ನಂ: 8722516856 ಕ್ಕೆ ಹಾಗೂ ಕಚೇರಿ ಮೊಬೈಲ್ ಸಂ: 9480886551 ಕ್ಕೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರಾವಳಿ ಉತ್ಸವ: ಶ್ವಾನ ಪ್ರದರ್ಶನ

**ಮಲ್ಲಮ್ಮ ನುಡಿ ವಾರ್ತೆ ಕಾರವಾರ:** ಕರಾವಳಿ ಉತ್ಸವ–2025 ರ ಅಂಗವಾಗಿ "ಶ್ವಾನ ಪ್ರದರ್ಶನ" ಕಾರ್ಯಕ್ರಮವನ್ನು ಡಿ.27 ರಂದು ಬೆಳಗ್ಗೆ 8 ಗಂಟೆಗೆ ಕಾರವಾರ ಮಾಲಾದೇವಿ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಶ್ವಾನ ಪ್ರದರ್ಶನದಲ್ಲಿ ಸಾರ್ವಜನಿಕರು ಸಾಕಿರುವ ವಿವಿಧ ತಳಿಯ ಶ್ವಾನಗಳನ್ನು ಪ್ರದರ್ಶಿಸಲಾಗುವುದು ಹಾಗೂ ಪೋಲಿಸ್ ಇಲಾಖೆಯ ಶ್ವಾನದಳ ವಿಭಾಗದವರಿಂದ ಆಕರ್ಷಕ ಪ್ರದರ್ಶನವನ್ನು ಆಯೋಜಿಸಲಾಗಿದೆ.

ಶ್ವಾನ ಪ್ರದರ್ಶನದಲ್ಲಿ ಭಾಗವಹಿಸಲು ಯಾವುದೇ ನೋಂದಣಿ ಶುಲ್ಕ ಇರುವುದಿಲ್ಲ. ಪ್ರದರ್ಶನದಲ್ಲಿ ಭಾಗಹಿಸಲು ಆಸಕ್ತಿ ಇರುವ ಶ್ವಾನ ಮಾಲೀಕರು ಆಯಾ ತಾಲ್ಲೂಕಿನ ಪಶುವೈದ್ಯ ಆಸ್ಪತ್ರೆಗಳಲ್ಲಿ ಡಿ.25 ರೊಳಗಾಗಿ ನೋಂದಣಿ ಮಾಡಿಸುವುದು ಕಡ್ಡಾಯವಾಗಿರುತ್ತದೆ. ಶ್ವಾನ ಪ್ರದರ್ಶನದಲ್ಲಿ ಭಾಗವಹಿಸಿದ ವಿವಿಧ ತಳಿಯ ಉತ್ತಮ ಶ್ವಾನಗಳಿಗೆ ಜಿಲ್ಲಾಡಳಿತದಿಂದ ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಡಾ. ಪ್ರಶಾಂತ ಕುಮಾರ, ಮುಖ್ಯ ಪಶುವೈದ್ಯಾಧಿಕಾರಿ, ಪಶು ಆಸ್ಪತ್ರೆ, ಕಾರವಾರ. ದೂರವಾಣಿ ಸಂಖ್ಯೆ: 9620092951 ನ್ನು ಹಾಗೂ ಸ್ಥಳೀಯ ಪಶುವೈದ್ಯ ಆಸ್ಪತ್ರೆಗಳ ಪಶುವೈದ್ಯರನ್ನು ಸಂಪರ್ಕಿಸುವಂತೆ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹನೀಯರ ಜಯಂತಿ ಆಚರಣೆ: ಎಸಿ ರಾಜೇಶ್ ಹೆಚ್.ಡಿ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:** ಜಿಲ್ಲಾಡಳಿತವತಿಯಿಂದ ಮಹನೀಯರ ಜಯಂತಿಯ ಕಾರ್ಯಕ್ರಮಗಳನ್ನು ಜಿಲ್ಲಾಕೇಂದ್ರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಮಹನೀಯರ ಜಯಂತಿ ಆಚರಣೆ ಕುರಿತು ಶನಿವಾರ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾಧರು, ಸಂತರು, ಮಹನೀಯರು ಕೇವಲ ಆಯಾ ಸಮುದಾಯಕ್ಕೆ ಸೀಮಿತರಾದವರಲ್ಲ; ಬದಲಾಗಿ ಸಮಾಜದ ಏಳ್ಗೆಗೆ ಶ್ರಮಿಸಿದವರು. ಹಾಗಾಗಿ ಎಲ್ಲ ಸಮುದಾಯದವರು, ಸಂಘ–ಸಂಸ್ಥೆಗಳ ಮುಖಂಡರು, ಸಾರ್ವಜನಿಕರು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಜಯಂತಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಡಿ.29 ರಂದು ಕುವೆಂಪು ಜನ್ಮದಿನದ ಅಂಗವಾಗಿ ವಿಶ್ವಮಾನವ ದಿನಾಚರಣೆ ಮತ್ತು ಜ.01ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಚಾರಿ ಸಂಸ್ಮರಣಾ ದಿನಾಚರಣೆ ಜಯಂತಿಯ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ, ಅಚ್ಚುಕಟ್ಟಾಗಿ ಆಯೋಜಿಸಬೇಕು ಎಂದರು.

ವಿವಿಧ ಇಲಾಖೆಗಳಿಗೆ ವಹಿಸಿದ ಜವಾಬ್ದಾರಿಗಳನ್ನು ಅರಿತು, ತಮ್ಮ ತಮ್ಮ ಕೆಲಸಗಳನ್ನು ಅಚ್ಚುಕಟ್ಟಾಗಿ



ನಿರ್ವಹಿಸುವುದರಮೂಲಕ ಮಹನೀಯರ ಜಯಂತಿ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಬೇಕು ಎಂದು ನಿರ್ದೇಶನ ನೀಡಿದರು.

ಡಿ.29 ರಂದು ಕುವೆಂಪು ಜನ್ಮದಿನದ ಅಂಗವಾಗಿ ವಿಶ್ವಮಾನವ ದಿನಾಚರಣೆ ವೇದಿಕೆ ಕಾರ್ಯಕ್ರಮವನ್ನು ಅಂದು ನಗರದ ಡಾ.ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯ ಆವರಣದ ಹೊಂಗಿರಣ ಸಭಾಂಗಣದಲ್ಲಿ ಆಯೋಜಿಸಲಾಗುವುದು. ಮತ್ತು ಜ.01ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಚಾರಿ ಸಂಸ್ಮರಣಾ ದಿನಾಚರಣೆ–ಯ ವೇದಿಕೆ ಕಾರ್ಯಕ್ರಮವನ್ನು ಸಮುದಾಯದ ಮುಖಂಡರ ಕೋರಿಕೆಯಂತೆ ಜಿಲ್ಲಾಧಿಕಾರಿ, ಅಪರ ಜಿಲ್ಲಾಧಿಕಾರಿಯವರೊಂದಿಗೆ ಚರ್ಚಿಸಿ ತೀರ್ಮಾನಿಸಿ ಆಯೋಜಿಸಲಾಗುವುದು ಎಂದರು.

ಶಿಷ್ಟಾಚಾರದಂತೆ ಆಹ್ವಾನಪತ್ರಿಕೆಯನ್ನು ಮುದ್ರಿಸಿ ಗಣ್ಯರನ್ನು ಆಹ್ವಾನಿಸಬೇಕು. ವೇದಿಕೆ ಕಾರ್ಯಕ್ರಮದಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ಆಸನ ವ್ಯವಸ್ಥೆ ಹಾಗೂ ಸ್ವಚ್ಛತೆ ಸೇರಿದಂತೆ ಇತರೆ ಕಾರ್ಯ ಕೈಗೊಳ್ಳಬೇಕು ಎಂದು ಸೂಚಿಸಿದರು.

ವೇದಿಕೆ ಕಾರ್ಯಕ್ರಮದಲ್ಲಿ ಗೀನಗಾಯನ, ಸುಗಮ ಸಂಗೀತ ಕಾರ್ಯಕ್ರಮ ನಡೆಯಲಿದೆ. ಮಹನೀಯರ ಕುರಿತು ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಏರ್ಪಡಿಸಬೇಕು ಎಂದು ಅವರು ಹೇಳಿದರು.

ಸಭೆಯಲ್ಲಿ ಸಮುದಾಯದ ಮುಖಂಡರು ಜಯಂತಿ ಕಾರ್ಯಕ್ರಮ ಅದ್ದೂರಿಯಾಗಿ ಹಾಗೂ ಯಶಸ್ವಿಗೊಳಿಸಲು ತಮ್ಮ ಅಭಿಪ್ರಾಯ ನೀಡಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಮಹಾನಗರ ಪಾಲಿಕೆ, ತೋಟಗಾರಿಕೆ, ಡಿಡಿಪಿಯು ಅಧಿಕಾರಿಗಳು, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮುದಾಯದ ಮುಖಂಡರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ತಂಬಾಕು ಮುಕ್ತ ಯುವ ಅಭಿಯಾನ 3.0 ಯಶಸ್ವಿ



**ಮಲ್ಲಮ್ಮ ನುಡಿ ವಾರ್ತೆ ಕಾರವಾರ:** ರಾಷ್ಟ್ರಿಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಭಾರತ ಸರ್ಕಾರದ ಕುಟುಂಬ ಕಲ್ಯಾಣ ಮಂತ್ರಾಲಯದ ನಿರ್ದೇಶನದಂತೆ ತಂಬಾಕು ಮುಕ್ತ ಯುವ ಅಭಿಯಾನ 3.0 ಕಾರ್ಯಕ್ರಮವನ್ನು 9ನೇ ಅಕ್ಟೋಬರ್ 2025 ರಿಂದ 9ನೇ ಡಿಸೆಂಬರ್ 2025 ರವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮವನ್ನು 7–11–2025 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯನ್ನು ಹಮ್ಮಿಕೊಂಡು, ತಂಬಾಕು ಮುಕ್ತ ಯುವ ಅಭಿಯಾನ 3.0 ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಬೇಕಾದ ಕಾರ್ಯಚಟುವಟಿಕೆಗಳ ಕುರಿತು ಚರ್ಚಿಸಲಾಯಿತು. ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯಾ ಮತ್ತು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ದಿಲೀಷ್ ಶಶಿ ಅವರು ತಂಬಾಕು ಮುಕ್ತ ಯುವ ಅಭಿಯಾನ 3.0 ಕಾರ್ಯಕ್ರಮದ ಅಂಗವಾಗಿ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸಿ, ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ತಂಬಾಕು ಮುಕ್ತ ಯುವ ಅಭಿಯಾನ 3.0 ಕಾರ್ಯಕ್ರಮದಡಿಯಲ್ಲಿ ಆರೋಗ್ಯ ಇಲಾಖೆಯ ಸಹಕಾರದೊಂದಿಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆಯ ವತಿಯಿಂದ ಶಾಲೆ/ಕಾಲೇಜುಗಳನ್ನು ಪರಿಶೀಲಿಸಿ, ತಂಬಾಕು ಮುಕ್ತ ಶೈಕ್ಷಣಿಕ ಸಂಸ್ಥೆಯಾಗಿ ಘೋಷಿಸಲಾಗಿದೆ. ಶೈಕ್ಷಣಿಕ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳಿಗೆ ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಪ್ರತಿಜ್ಞಾ ವಿಧಿ ಭೋಧನೆ, ಜಾಥಾ ಕಾರ್ಯಕ್ರಮ, ವಿದ್ಯಾರ್ಥಿಗಳಿಗೆ ಪ್ರಬಂಧ/ರಸಪ್ರಶ್ನೆ/ಚಿತ್ರಕಲೆ/ಭಾಷಣ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ. ನಗರಾಭಿವೃದ್ಧಿ ಕೋಶ ಹಾಗೂ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡು, ಭಾಗವಹಿಸಿದ ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ /ಓರಲ್ ಸ್ಕ್ರೀನಿಂಗ್ ನಡೆಸಲಾಗಿದೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕ ತಂಬಾಕು ಮುಕ್ತ ಯುವ ಅಭಿಯಾನ 3.0 ಕುರಿತು ಪತ್ರಿಕಾ ಮಾಧ್ಯಮದಲ್ಲಿ ಪ್ರಕಟಿಸಿ ಸದರಿ ಕಾರ್ಯಕ್ರಮದ ಕುರಿತು ಅರಿವು ಮೂಡಿಸಲಾಗಿದೆ.

ಆರೋಗ್ಯ ಇಲಾಖೆಯ ವತಿಯಿಂದ ವಿವಿಧ ಇಲಾಖೆಯ ಸಹಯೋಗದೊಂದಿಗೆ ಜಿಲ್ಲಾ ಮತ್ತು ತಾಲೂಕಾ ಮಟ್ಟ, ಪ್ರಾಥಮಿಕ ಆರೋಗ್ಯ ಕೇಂದ್ರ ಮಟ್ಟದಲ್ಲಿ ತಂಬಾಕು ಮುಕ್ತ ಯುವ ಅಭಿಯಾನ 3.0 ಕುರಿತು ಹಳ್ಳಿಗಳಲ್ಲಿ, ಸಾರ್ವಜನಿಕರಿಗೆ ಮಾಹಿತಿ, ಶಿಕ್ಷಣ, ಸಂವಹನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ವಿವಿಧ ಇಲಾಖೆಯ ಸಹಯೋಗದೊಂದಿಗೆ ಮಾರ್ಗಸೂಚಿಯಂತೆ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು/ಸಿಬ್ಬಂದಿಗಳು, ಆರೋಗ್ಯ ಇಲಾಖೆಯ ಪಿ.ಹೆಚ್.ಸಿ.ಓ., ಸಮುದಾಯ ಆರೋಗ್ಯ ಅಧಿಕಾರಿಗಳು, ಸಿದ್ದಾಪುರ ತಾಲೂಕಿನ ಅಂಗಡಿ–ಕಾರರು/ ತಂಬಾಕು ಉತ್ಪನ್ನ ಮಾರಾಟ ಅಂಗಡಿಕಾರರಿಗೆ, ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯಾದ್ಯಂತ ಸದರಿ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಂಡು ತಂಬಾಕು ಮುಕ್ತ ಯುವ ಅಭಿಯಾನ 3.0 ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀಗುರು ಶ್ರೀಶವಿಠಲ ದಾಸರ ಆರಾಧನೆ, ಸಂಗೀತ ಕಾರ್ಯಕ್ರಮ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:** ನಗರದ ಗಾಂಧಿನಗರ ಬಡಾವಣೆಯ ಜಹಗಿರದಾರ್ ಕುಟುಂಬದ ಧವಳಗಂಗಾ ನಿವಾಸದಲ್ಲಿ ಭುವನ ಸಂಗೀತ ವಿದ್ಯಾಲಯ ಟ್ರಸ್ಟ್ ಬಳ್ಳಾರಿ ಹಾಗೂ ಕನ್ನಡ ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ಶ್ರೀಗುರು ಶ್ರೀಶವಿಠಲ ದಾಸರ ಆರಾಧನೆಯನ್ನು ಶುಕ್ರವಾರ ಅರ್ಥಪೂರ್ಣವಾಗಿ ವಿಜೃಂಭಣೆಯಿಂದ ಆಚರಿಸಲಾಯಿತು. ಆರಾಧನೆ ನಿಮಿತ್ತ ಸಂಜೆ ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ ನಡೆಯಿತು. ಧಾರವಾಡ ಕಲಾವಿದರಾದ ವಿಜಯಕುಮಾರ್ ಪಾಟೀಲ್ ಅವರು,

ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ ಹಾಗೂ ದಾಸವಾಣಿ ಕಾರ್ಯಕ್ರಮ ಪ್ರಸ್ತುತಪಡಿಸಿದರು. ಆಕಾಶ್ ಪಾಟೀಲ್ ತಬಲಾ, ಸತೀಶ್ ಭಟ್ ಹೆಬ್ಬಾರ್ ಹಾರ್ಮೋನಿಯಂ, ವಾದಿರಾಜ್ ತಾಳ ಸಾಥ್ ನೀಡಿದರು. ಬೆಳಿಗ್ಗೆ ಶ್ರೀಗುರು ಶ್ರೀಶವಿಠಲ ದಾಸರ ಆರಾಧನೆ ನಿಮಿತ್ತ ವಿಶೇಷ ಪೂಜೆ,

ಅರ್ಚನೆ, ನೈವೇದ್ಯ, ಮಹಾಮಂಗಳಾರತಿ, ದಾಸರ ತಂಬೂರಿಗೆ ವಿಶೇಷ ಅಲಂಕಾರ ಸೇರಿದಂತೆ ವಿವಿಧ ಪೂಜೆಗಳು ವಿಜೃಂಭಣೆಯಿಂದ ನಡೆದವು.

ನಗರ ಸೇರಿದಂತೆ ನಾನಾ ಕಡೆಯಿಂದ ಆಗಮಿಸಿದ ನೂರಾರು ಭಕ್ತರು ಆರಾಧನಾ ಮಹೋತ್ಸವದಲ್ಲಿ ಭಾಗವಹಿಸಿ ಭಕ್ತಿಸಮರ್ಪಿಸಿದರು. ಆಗಮಿಸಿದ ಎಲ್ಲ ಭಕ್ತರಿಗೆ ತೀರ್ಥ ಪ್ರಸಾದ ವಿತರಿಸಲಾಯಿತು.

ಈ ಸಂದರ್ಭದಲ್ಲಿ ರಾಘವೇಂದ್ರ ಕುಷ್ಟಗಿ, ಶೇಷಗಿರಿರಾವ್ ಕುಲಕರ್ಣಿ, ಜಯತೀರ್ಥ

ಜಹಗಿರದಾರ್, ನಿವೃತ್ತ ಎಎಸ್ ಐ ಭೀಮನಗೌಡ, ನಿವೃತ್ತ ಪಿಎಸ್ ಐ ಪಿ.ಹುಸೇನ್ ಸಾಬ್ ಸೇರಿದಂತೆ ಇತರರಿದ್ದರು. ಟಿ.ಗುರುರಾಜ್ ಆಚಾರ ಜಹಗಿರದಾರ್ ಕಾರ್ಯಕ್ರಮ ನಿರ್ವಹಿಸಿದರು.



ಮಲ್ಲಮ್ಮ ನುಡಿ ವಾರ್ತೆ ವಿಜಯಪುರ, ನಗರದ ಜೆ.ಎಂ. ರಸ್ತೆ ಮುಖಾಂತರ ಗೋಲ್ ಗುಮ್ಮಜ್ ಸಂಪರ್ಕ ಕಲ್ಪಿಸುವ ರಸ್ತೆ ಸಂಪೂರ್ಣ ಹಾಳಾಗಿದ್ದು. ತಕ್ಷಣ ರಸ್ತೆ ಕಾಮಗಾರಿ ಕೈ ಗೆತ್ತಿಕೊಳ್ಳಬೇಕೆಂದು. ಹೋರಾಟಗಾರ ಹಾಫೀಜ್ ಸಿದ್ದಿಕಿ, ಫಯಾಜ್ ಎಂ.ಡಿ.ಇರ್ಫಾನ್ ಪಠಾಣ,ಸೇರಿದಂತೆ ಹಲವಾರು ಮುಖಂಡರು ಉಪಸ್ಥಿತರಿದ್ದರು

# ಸಿಪೆಟ್ ಉದ್ಯೋಗಾಧಾರಿತ ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:** ಮೈಸೂರಿನಲ್ಲಿರುವ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ (ಸಿಪೆಟ್) ಕೌಶಲ್ಯ ಮತ್ತು ತಾಂತ್ರಿಕ ತರಬೇತಿ ಕೇಂದ್ರಕ್ಕೆ 2026–27ನೇ ಸಾಲಿನ ಉದ್ಯೋಗಾಧಾರಿತ ಮತ್ತು ಉದ್ಯೋಗ ಖಚಿತ ಡಿಪ್ಲೋಮಾ ಕೋರ್ಸ್ ಗಳ ಪ್ರವೇಶಕ್ಕೆ ಆನ್ ಲೈನ್ ಮತ್ತು ಆಫ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸೆಪೆಟ್ ಸಂಸ್ಥೆಯು ಭಾರತ ಸರ್ಕಾರದ ರಸಾಯನ ಪೆಟ್ರೋರಸಾಯನ ಮತ್ತು ರಸಗೊಬ್ಬರ ಸಚಿವಾಲಯದ ಸ್ವಾಯತ್ತ ಸಂಸ್ಥೆಯಾಗಿದೆ. ಸಂಸ್ಥೆಯು ದೇಶದ ಪಾಲಿಮರ್, ಪೆಟ್ರೋಕೆಮಿಕಲ್ಸ್, ಪ್ಲಾಸ್ಟಿಕ್ಸ್ ಕೈಗಾರಿಕಾ ವಲಯಕ್ಕೆ ಬೇಕಾದ ಮಾನವ ಸಂಪನ್ಮೂಲಕ್ಕೆ ಶೈಕ್ಷಣಿಕ ತರಬೇತಿ ನೀಡಲಾಗುತ್ತಿದೆ ಮತ್ತು ಸಿಪೆಟ್ ಕರ್ನಾಟಕದ ವಿದ್ಯಾರ್ಥಿಗಳು ಪಾಲಿಮರ್ ಕೈಗಾರಿಕಾ ವಲಯದಲ್ಲಿ ಜಾಗತಿಕವಾಗಿ ಗುರುತಿಸಲ್ಪಟ್ಟಿದ್ದಾರೆ.

ಡಿಪ್ಲೋಮಾ ಇನ್ ಪ್ಲಾಸ್ಟಿಕ್ಸ್ ಟೆಕ್ನಾಲಜಿ, ಡಿಪ್ಲೋಮಾ ಇನ್ ಪ್ಲಾಸ್ಟಿಕ್ಸ್ ಮೌಲ್ಡ್ ಟೆಕ್ನಾಲಜಿ – 3 ವರ್ಷಗಳ ಕೋರ್ಸ್ ಗಳಿಗೆ ಅರ್ಜಿ ಸಲ್ಲಿಸಬಹುದು.


ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ತೇರ್ಗಡೆಯಾದವರು ಅರ್ಜಿ ಸಲ್ಲಿಸಬಹುದು ಹಾಗೂ ಆನ್‌ಲೈನ್ ವೆಬ್ ಸೈಟ್ https://cipet26.onlineregistrationform.org/CIPET/ ಮೂಲಕ ನೋಂದಣಿ ಮಾಡಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ದೂ.0821–2510618, ಮೊ.9480253024, 9791431827 ಗೆ ಸಂಪರ್ಕಿಸಬಹುದು. ಸಿಪೆಟ್ ಡಿಪ್ಲೋಮಾ ಪಡೆದ ಪ್ರತಿಯೊಬ್ಬ ವಿದ್ಯಾರ್ಥಿಗೂ ಕ್ಯಾಂಪಸ್ ನೇಮಕಾತಿಯ ಮೂಲಕ ಉದ್ಯೋಗಾವಕಾಶ ನೀಡಲಾಗುತ್ತದೆ ಎಂದು ಸಿಪೆಟ್ ಸಂಸ್ಥೆಯ ಪ್ರಿನ್ಸಿಪಾಲ್ ನಿರ್ದೇಶಕರು ಮತ್ತು ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೋಲಿಯೋ ಮೇಲಿನ ವಿಜಯ ಮುಂದುವರೆಸಲು ಕೈಜೋಡಿಸಿ: ಡಿಹೆಚ್‌ಓ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:** ಭಾರತ ದೇಶವು ಪೋಲಿಯೋ ವಿರುದ್ಧ ನಿರಂತರ ವಿಜಯ ಸಾಧಿಸಿದ್ದು, ಇದನ್ನು ಮುಂದುವರೆಸಲು ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಕೋರಿದ್ದಾರೆ. ಸಾಮಾನ್ಯವಾಗಿ ಮಕ್ಕಳಲ್ಲಿ ಶಾಶ್ವತ ಅಂಗವಿಕಲತೆ ಉಂಟು ಮಾಡುವ ಪೋಲಿಯೋ ಮೆಲಟೈಸ್ ಎಂಬ ಸೂಕ್ಷಾ ––ಣುವಿನಿಂದ ಉಂಟಾಗುವ ಪೋಲಿಯೋ ರೋಗದ ನಿಯಂತ್ರಣ–ಕ್ಕಾಗಿ 1995 ರಿಂದ ನಿರಂತರವಾಗಿ ಹುಟ್ಟಿನಿಂದ 5 ವರ್ಷದೊಳಗಿನ ಮಕ್ಕಳಿಗೆ ರಾಷ್ಟ್ರದ್ಯಾಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ.

ಪ್ರಸ್ತುತ ಈ ವರ್ಷದ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಡಿಸೆಂಬರ್–21 ರಂದು ಜರುಗಲಿದೆ. 1998ರಲ್ಲಿ 71 ಪ್ರಕರಣಗಳಿದ್ದ ಕರ್ನಾಟಕದಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮದ ಮೂಲಕ ಪೋಲಿಯೋ ನಿರ್ಮೂಲನೆಗೆ ಪಣ ತೊಡಲಾಯಿತು. 2007 ರಲ್ಲಿ ಕರ್ನಾಟಕದಲ್ಲಿ ಕೊನೆಯ ಪೋಲಿಯೋ ಪ್ರಕರಣ ವರದಿಯಾಗಿದೆ ಎಂದು ಅವರು ತಿಳಿಸಿದ್ದಾರೆ. ದೇಶದಲ್ಲಿ 2011 ರ ಜನವರಿ 13 ರಂದು ಪಶ್ಚಿಮ ಬಂಗಾಳದ ಹೌರಾ ಜಿಲ್ಲೆಯಲ್ಲಿ ಕೊನೆಯ ಪೋಲಿಯೋ ಪ್ರಕರಣ ವರದಿಯಾಗಿದ್ದು, ನಂತರದಲ್ಲಿ ಯಾವುದೇ ಪ್ರಕರಣ ವರದಿಯಾಗಿರುವುದಿಲ್ಲ. ವಿಶ್ವ ಆರೋಗ್ಯ ಸಂಸ್ಥೆಯು 11ನೇ ಪೆಬ್ರವರಿ 2014 ರಂದು ಭಾರತವನ್ನು ಪೋಲಿಯೋ ಮುಕ್ತ ರಾಷ್ಟ್ರವೆಂದು ಘೋಷಣೆ ಮಾಡಿತು. ಪಲ್ಸ್ ಪೋಲಿಯೊ ಎನ್ನುವುದು ಪೋಲಿಯೊ



(Poliomyelitis) ಎಂಬ ಭೀಕರ ವೈರಲ್ ರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ಉದ್ದೇಶದಿಂದ ಸರ್ಕಾರ ನಡೆಸುವ ವಿಶೇಷ ಲಸಿಕೆ ಅಭಿಯಾನ. ಇದರಲ್ಲಿ 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಎಲ್ಲಾ ಮಕ್ಕಳಿಗೂ ಪೋಲಿಯೊ ಲಸಿಕೆ ಹನಿಗಳನ್ನು ನೀಡಲಾಗುತ್ತದೆ.

ಪೋಲಿಯೊ ಒಂದು ವೈರಸ್‌ನಿಂದ ಉಂಟಾಗುವ ಸೋಂಕು ರೋಗ. ಇದು ಮುಖ್ಯವಾಗಿ ನರವ್ಯವಸ್ಥೆಯನ್ನು ಹಾನಿಗೊಳಿಸಿ, ಕೆಲವೊಮ್ಮೆ ಶಾಶ್ವತ ಅಂಗವಿಕಲತೆ ಉಂಟುಮಾಡಬಹುದು.

ಭಾರತ ದೇಶವು ಪೋಲಿಯೊ ಮೇಲಿನ ವಿಜಯವನ್ನು ಮುಂದುವರೆಸುತ್ತಾ, ಜಗತ್ತಿನಾದ್ಯಂತ ಪೋಲಿಯೊ ರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದು ಪಲ್ಸ್ ಪೋಲಿಯೊ ಕಾರ್ಯಕ್ರಮದ ಉದ್ದೇಶವಾಗಿದೆ ಎಂದಿದ್ದಾರೆ.5 ವರ್ಷದೊಳಗಿನ ಯಾವುದೇ ಮಗುವೂ ಲಸಿಕೆಯಿಂದ ವಂಚಿತವಾಗದಂತೆ ನೋಡಿಕೊಳ್ಳುವುದು. ಈಗಾಗಲೇ ಲಸಿಕೆ ಪಡೆದ ಮಕ್ಕಳಿಗೂ ಹೆಚ್ಚುವರಿ ರಕ್ಷಣೆಯನ್ನು ನೀಡುವುದಾಗಿದೆ.

ಬೈ ವಾಲೆಂಟ್ ಓರಲ್ ಪೋಲಿಯೊ ವ್ಯಾಕ್ಸಿನ್ ನೀಡುವ ವಿಧಾನ: ಬಾಯಿ ಮುಖಾಂತರ 2 ಹನಿ.

ವಯಸ್ಸು: 0–5 ವರ್ಷಗಳೊಳಗಿನ ಎಲ್ಲಾ ಮಕ್ಕಳು.

ಹಿಂದೆ ಲಸಿಕೆ ಪಡೆದಿದ್ದರೂ ಕೂಡ ಪಲ್ಸ್ ಪೋಲಿಯೊ ದಿನದಂದು ಮತ್ತೆ ಪೋಲಿಯೊ ಲಸಿಕೆ ಕೊಡಿಸಬೇಕು (ಇದು ಸುರಕ್ಷಿತ ಹಾಗೂ ಹೆಚ್ಚು ಪರಿಣಾಮಕಾರಿ) ನಿಮ್ಮ ಹತ್ತಿರದ ಆರೋಗ್ಯ ಕೇಂದ್ರ / ಬೂತ್ ಗೆ ಡಿಸೆಂಬರ್ 21 ರಂದೇ ಮಗುವನ್ನು ಕರೆದೊಯ್ದು ಲಸಿಕೆ ಕೊಡಿಸಬೇಕು.

ಡಿಸೆಂಬರ್ 22 ರಿಂದ 24 ರ ವರೆಗೆ ಆರೋಗ್ಯ ಕಾರ್ಯಕರ್ತರು ಮನೆಗೆ ಬಂದು ಲಸಿಕೆ ಪಡೆದ ಬಗ್ಗೆ ಮಕ್ಕಳ ಪರಿಶೀಲನೆ ಮಾಡುವಾಗ ಸಹಕರಿಸಬೇಕು. ಲಸಿಕೆ ಪಡೆದ ನಂತರ ಮಗುವಿನ ಎಡಗೈ ಕಿರು ಬೆರಳಿಗೆ ಅಳಿಸಲಾಗದ ಶಾಯಿಯಿಂದ ಗುರುತು ಹಾಕಲಾಗುತ್ತದೆ (ಪಲ್ಸ್ ಪೋಲಿಯೊ ಅಭಿಯಾನದಲ್ಲಿ ಲಸಿಕೆ ಪಡೆದಿರುವುದನ್ನು ಖಾತ್ರಿಪಡಿಸಲು) ಅಲ್ಪ ಪ್ರಮಾಣದ ಜ್ವರ, ಶೀತ, ಅತಿಸಾರ ಭೇದಿ ಇದ್ದರೂ ಕೂಡ ಲಸಿಕೆ ಕೊಡಿಸಬಹುದು.

ಯಾವುದೇ ಗಂಭೀರ ಅಡ್ಡ ಪರಿಣಾಮಗಳು ಇಲ್ಲ. ಈ ಹಿನ್ನೆಲೆಯಲ್ಲಿ ವಲಸೆ ಪ್ರದೇಶಗಳು, ಕೈಗಾರಿಕಾ ಪ್ರದೇಶಗಳು, ಇಟ್ಟಿಗೆ ಬಟ್ಟಿಗಳು, ಅಲೇಮಾರಿ ಕುರಿ ಸಾಕಾಣಿಕೆದಾರರು, ತೋಟದ ಮನೆಗಳು, ಕಟ್ಟಡ ನಿರ್ಮಾಣ ಸ್ಥಳಗಳು ಮುಂತಾದ ಸ್ಥಳಗಳಲ್ಲಿ ಮಕ್ಕಳಿರುವ ಬಗ್ಗೆ ಕ್ರಿಯಾಯೋಜನೆಯಲ್ಲಿ ಹೆಚ್ಚು ಆದ್ಯತೆ ನೀಡಿ ಲಸಿಕೆ ಹಾಕಲು ಕ್ರಮವಹಿಸಲಾಗುವುದು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ತಿಳಿಸಿದ್ದಾರೆ.

# ರೈತರು ಮೆಣಸಿನಕಾಯಿ ಬೆಳೆಯಲ್ಲಿ ರೋಗ, ಕೀಟಬಾಧೆ ಕಂಡುಬಂದಲ್ಲಿ ಸೂಕ್ತ ನಿರ್ವಹಣೆ ಕ್ರಮ ಅನುಸರಿಸಲು ಸಲಹೆ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:** ಜಿಲ್ಲೆಯಲ್ಲಿ ಪ್ರಸ್ತುತ ವಾತವರಣ ಏರುಪೇರು, ಮೋಡ ಕವಿದ ವಾತವರಣ ಹಾಗೂ ತಾಪಮಾನ ಇಳಿಕೆಯಾಗಿರುವುದರಿಂದ ಮೆಣಸಿನಕಾಯಿ ಬೆಳೆಯಲ್ಲಿ ರೋಗ ಮತ್ತು ಕೀಟಬಾಧೆಯಿಂದ ಇಳುವರಿ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದ್ದು, ಹಾಗಾಗಿ ರೈತರು ಸೂಕ್ತ ನಿರ್ವಹಣೆಯ ಕ್ರಮ ಅನುಸರಿಸಬೇಕು ಎಂದು ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಅವರು ತಿಳಿಸಿದ್ದಾರೆ. ಪ್ರಸಕ್ತ ವರ್ಷ ಬಳ್ಳಾರಿ, ಕುರುಗೋಡು ಮತ್ತು ಕಂಪ್ಲಿ ತಾಲ್ಲೂಕುಗಳಲ್ಲಿ 17,800 ಹೆಕ್ಟೇರ್ ಗಿಂತ ಹೆಚ್ಚು ಪ್ರದೇಶದಲ್ಲಿ ಮೆಣಸಿನಕಾಯಿ ಬೆಳೆಯಲಾಗಿದೆ. ಮೆಣಸಿನಕಾಯಿ ಬೆಳೆಯಲ್ಲಿ ಎಲೆ ಮುಟುರು ರೋಗ, ಬೂದಿ ರೋಗ, ಹಣ್ಣುಕೊಳೆ ರೋಗದ ನಿರ್ವಹಣೆಗೆ ರೈತರು ಸೂಕ್ತ ಕ್ರಮಗಳನ್ನು ಅನುಸರಿಸಬೇಕಿದೆ ಎಂದಿದ್ದಾರೆ.

**ಎಲೆ ಮುಟುರು ರೋಗ:**

ಈ ರೋಗವನ್ನು ಹಳದಿ ಮಿಶ್ರಿತ ಹಸಿರು ಭಾಗವನ್ನು ಎಲೆಯಲ್ಲಿ ಕಾಣಬಹುದು. ಎಲೆಗಳು ವಕ್ರಾಕಾರದ ಅಥವಾ ಮುಟುರು ಎಲೆಗಳನ್ನು ಕಾಣಬಹುದು. ಆ ಮೇಲೆ ಗಿಡಗಳ ಬೆಳವಣಿಗೆ ಕುಂಠಿತಗೊಳ್ಳುತ್ತದೆ. ಮುಟುರು ರೋಗದ ಬಾಧೆ ತಡೆಗಟ್ಟಲು ಶೇ.0.5 ರ ಬೆಳ್ಳೊಳ್ಳಿ, ಹಸಿ ಮೆಣಿಸಿನಕಾಯಿ, ಸೀಮೆ ಎಣ್ಣೆ ಕಷಾಯವನ್ನು ಬೇವು ಜನ್ಯ ಕೀಟನಾಶಕದೊಂದಿಗೆ (2.5 ಮಿ.ಲೀ. ಪ್ರತಿ ಲೀಟರ್ ನೀರಿಗೆ) ಬೆರಸಿ ಅವಶ್ಯವಿದ್ದಾಗ ಸಿಂಪರಣೆ ಮಾಡಬೇಕು. ಪ್ರಮುಖವಾಗಿ ಮೆಣಸಿನಕಾಯಿಯಲ್ಲಿ ಬೆಳೆಯಲ್ಲಿ ಬರುವ ಥಿಪ್ಸ್, ಮೈಟ್ಸ್, ಬಿಳಿ ನೋಣ ಹಾಗೂ ರಸಹಿರುವ ಕೀಟಗಳ ನಿರ್ವಹಣೆ ಮಾಡುವುದು ಎಲೆ ಮುಟುರು ರೋಗದ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

ಕೀಟನಾಶಕಗಲಾದ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 17.8 ಎಸ್.ಎಲ್ ಅಥವಾ 0.2 ಗ್ರಾಂ ಥಯೋಮೆಥಾಕ್ಸಾಮ್ 25 ಡಬ್ಲೂ .ಜಿ ಅಥವಾ 1.0 ಮಿ.ಲೀ ಫಿಪ್ರೋನಿಲ್ 5 ಎಸ್.ಸಿ ಅಥವಾ 1.0 ಗ್ರಾಂ ಡಯಾಫೆನ್‌ಥಯೂರಾನ್ 50 ಡಬ್ಲೂ .ಪಿ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು.

***ಬೂದಿ ರೋಗ:***

ಈ ರೋಗವನ್ನು ಬೂದಿ ಬಣ್ಣದ ಮಚ್ಚೆಗಳನ್ನು ಎಲೆಯಲ್ಲಿ ಕಾಣಬಹುದು. ರೋಗ ಕಂಡುಬಂದಲ್ಲಿ 1 ಗ್ರಾಂ ಕಾರ್ಬನ್‌ಡೈಜಿಮ್ ಅಥವಾ 3 ಗ್ರಾಂ ನೀರಿನಲ್ಲಿ ಕರಗುವ ಗಂಧಕ ಒಂದು ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಬೇಕು. ರೋಗ ಲಕ್ಷಣಗಳು ಕಡಿಮೆಯಾಗದ್ದಿದಲ್ಲಿ ಇದೇ ಸಿಂಪರಣೆಯನ್ನು 15 ದಿನಗಳ ಹಂತರದಲ್ಲಿ ಇನ್ನೂ ಎರಡು ಬಾರಿ ಕೈಗೊಳ್ಳಬಹುದು ಅಥವಾ 1 ಗ್ರಾಂ ಅಜೋಕ್ಸಿಸ್ಟರೋಬಿನ್ ಶೇ.23 ಎಸ್‌ಟಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೇರಸಿ ಸಿಂಪಡಿಸಬಹುದಾಗಿದೆ. ಇಲ್ಲವೇ ಹೆಕ್ಸಾಕೊನಜೋಲ್ ಶೇ.2 ಎಸ್‌ಸಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬಹುದು.

**ಹಣ್ಣು ಕೊಳೆ ರೋಗ:**

ಈ ರೋಗವನ್ನು ಹಣ್ಣುಗಳ ಮೇಲೆ ವೃತ್ತಾಕಾರದ ತಗ್ಗಾದ ಕಪ್ಪನೆಯ ಚುಕ್ಕೆಗಳು ಕಾಣಿಸಿಕೊಳ್ಳುತ್ತವೆ. ಒಳಗಿನ ಬಣ್ಣವು ಗುಲಾಬಿ ವರ್ಣದಿಂದ ಕೂಡಿರುತ್ತದೆ. ಆ ಮೇಲೆ ಕಪ್ಪಾಗುತ್ತವೆ. ಮೆಣಸಿನಕಾಯಿ ಬೆಳೆಗೆ ತುದಿ ಸಾಯುವ ರೋಗ, ಹಣ್ಣು ಕೊಳೆಯುವ ರೋಗ ಹಾಗೂ ಬೂದಿ ರೋಗಗಳು ಕಂಡು ಬಂದಾಗ 1 ಗ್ರಾಂ ಕಾರ್ಬನ್‌ಡೈಜಿಮ್ ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ 15 ದಿನಗಳ ಅಂತರದಲ್ಲಿ ನಾಲ್ಕು ಬಾರಿ ಸಿಂಪಡಿಸಬೇಕು.1 ಗ್ರಾಂ ಅಜೋಕ್ಸಿಸ್ಟರೋಬಿನ್ ಶೇ.23 ಎಸ್‌ಟಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೇರಸಿ ಸಿಂಪಡಿಸಬಹುದಾಗಿದೆ. ಇಲ್ಲವೇ ಹೆಕ್ಸಾಕೊನಜೋಲ್ ಶೇ.2 ಎಸ್‌ಸಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೇರೆಸಿ ಸಿಂಪಡಿಸಬಹುದು.

ಈ ಮೇಲ್ಕಂಡ ಎಲ್ಲಾ ಅಗತ್ಯವಿರುವ ನಿರ್ವಹಣಾ ಕ್ರಮಗಳನ್ನು ಅನುಸರಿಸುವ ಮೂಲಕ ರೈತರು ಸಕಾಲದಲ್ಲಿ ಮೆಣಸಿನಕಾಯಿ ಬೆಳೆಗೆ ಔಷಧಿಗಳನ್ನು ಸೂಕ್ತ ರೀತಿಯಲ್ಲಿ ಸಿಂಪಡಿಸಿ ಉತ್ತಮ ಗುಣಮಟ್ಟದ ಇಳುವರಿ ಪಡೆಯಬಹುದಾಗಿದೆ.

ಮಾಹಿತಿಗಾಗಿ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನಾಂಗದ ಹುಟ್ಟಿನೊಂದಿಗೆ ಬಂದ ಅಪರಿಮಿತ ಜ್ಞಾನವೇ ಜಾನಪದ–ಬಾಲಾಜಿ



**ಮಲ್ಲಮ್ಮ ನುಡಿ ಬಾಗಲಕೋಟೆ:** ಜಾನಪದ ಈ ನೆಲದ ಮೂಲ ಸಂಸ್ಕೃತಿ. ಮಾನವ ಜನಾಂಗದ ಹುಟ್ಟಿನೊಂದಿಗೆ ಹುಟ್ಟಿ ಬಂದ ಅಪರಿಮಿತ ಜ್ಞಾನವೇ ಜಾನಪದ. ತಲೆತಲಾಂತರದಿಂದಲೂ ಮೌಖಿಕ ಪರಂಪರೆಯಾಗಿ ಉಳಿದು ಬಂದಿರುವ ಶ್ರೇಷ್ಠ ಜ್ಞಾನವೇ ಜಾನಪದವಾಗಿದೆ ಎಂದು ಕನ್ನಡ ಜಾನಪದ ಪರಿಷತ್ ರಾಜ್ಯಾಧ್ಯಕ್ಷ ಡಾ.ಎಸ್.ಬಾಲಾಜಿ ಹೇಳಿದರು.

ಜಿಲ್ಲೆಯ ಬೀಳಗಿ ತಾಲೂಕಿನ ಬಾಡಗಿ ಗ್ರಾಮದ ಬಕ್ಕೇಶ್ವರ ಮಠದಲ್ಲಿ ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕ, ತಾಲೂಕು, ಮಹಿಳಾ ಘಟಕ, ವಲಯ ಘಟಕ ಬಾಡಗಿ ಹಾಗೂ ಬಾಡಗಿ ಗ್ರಾಮಸ್ಥರ ಸಹಯೋಗದಲ್ಲಿ ಜರುಗಿದ ಬೀಳಗಿ ತಾಲೂಕು ಪ್ರಥಮ ಕನ್ನಡ ಜಾನಪದ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ತಹಶಿಲ್ದಾರ್ ವಿನೋದ ಹತ್ತಳ್ಳಿ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿ, ಲಿಖಿತವಾಗಿರದೇ ಮೊದಲಿನಿಂದಲೂ ಬಾಯಿಂದ ಬಾಯಿಗೆ ಬಂದದ್ದು ಜಾನಪದ. ಜನಪದ ಸಾಹಿತ್ಯ ಪೋಷಿಸದಿದ್ದರೆ ಕನ್ನಡ ಭಾಷೆಗೆ ಕುತ್ತು ಬರುವುದರಿಂದ ಜಾನಪದ ಸಾಹಿತ್ಯವನ್ನು ಪೋಷಿಸಬೇಕು ಎಂದರು.

ರೈತಮುಖಂಡರಾದ ಎಸ್.ಟಿ.ಪಾಟೀಲ, ಸಾಹಿತಿ ಮೇಲಪ್ಪ ಕೆಂಪಲಿಂಗಣ್ಣವರ ರಚಿತ 'ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ' ಕೃತಿ ಬಿಡುಗಡೆ ಮಾಡಿ ಮಾತನಾಡಿ, ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ.ಎಂ.ಸಾವಕಾರ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಜಾನಪದದ ಸುವಾಸನೆ ಹರಡುತ್ತಿರುವುದು ಶ್ಲಾಘನೀಯ ಎಂದರು.

ಗಿರಿಸಾಗರ ಕಲ್ಯಾಣ ಹಿರೇಮಠದ ರುದ್ರಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಸಮಾಜದ ಮಧ್ಯದಲ್ಲಿ ಸಂಸ್ಕಾರದ ನಡೆ ನುಡಿ ತಿಳಿಸಿ ಕೊಡುವುದೇ ಜಾನಪದ ಸಾಹಿತ್ಯ. ಅಶ್ಲೀಲ ಪದಗಳಿಂದ ತುಂಬಿದ ವೇದಿಕೆಗಳು ಹೆಚ್ಚಾಗುತ್ತಿವೆ. ಕಾಮಿಡಿ ಕಿಲಾಡಿಯಂತಹ ರಿಯಾಲಿಟಿ ಶೋಗಳು ಸಮಾಜಕ್ಕೆ ಏನು ಸಂದೇಶ ಕೊಡುತ್ತಿವೆ ಎಂದು ಪ್ರಶ್ನಿಸಿದರು.

ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ.ಎಂ.ಸಾವಕಾರ ಅಧ್ಯಕ್ಷತೆ ವಹಿಸಿ ಮಾತನಾಡಿ, ಒತ್ತಡರಹಿತ ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಜನಪದ ಸಂಸ್ಕೃತಿಯ ಪಾತ್ರ ಹಿರಿದಾಗಿದೆ. ಜನಪದ ಸಂಸ್ಕೃತಿ ಭಾರತೀಯರ ಮೂಲ ಜೀವಾಳವಾಗಿದ್ದು. ಅದರಲ್ಲಿ ಕನ್ನಡ ಜಾನಪದ ಸಂಸ್ಕೃತಿ ಅತ್ಯಂತ ಶ್ರೀಮಂತಿಕೆಯಿಂದ ಕೂಡಿದೆ ಎಂದರು.

ಇನಾಂಹಂಚಿನಾಳ ಪಿಕೆಪಿಎಸ್ ಅಧ್ಯಕ್ಷ ಶ್ರೀಶೈಲ ನಿರಾಣಿ ಅವರು ಸಾಹಿತಿ ಸಿದ್ದಪ್ಪ ಮುಶೆಪ್ಪಗೋಳ ರಚಿತ 'ಚಿಕ್ಕಾಲಗುಂಡಿಯ ಮಾರುತೇಶ್ವರ ಚರಿತ್ರೆ ಮತ್ತು ಪವಾಡಗಳು' ಕೃತಿ ಬಿಡುಗಡೆ ಮಾಡಿದರು. ಬಾದಾಮಿಯ ಚಾಲುಕ್ಯ ಚಿತ್ರಕಲಾ ಮಹಾವಿದ್ಯಾಲಯದ ವಿದ್ಯಾರ್ಥಿನಿ ಗಂಗಾ ನುಚ್ಚಿನ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ ಗಮನ ಸೆಳೆಯಿತು.

ಜಾನಪದ ಕಲಾವಿದ ಪುಂಡಲಿಕಪ್ಪ ಗಾಣಿಗೇರ ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸಿದ್ದರು. ಬಾಡಗಿ ಬಕ್ಕೇಶ್ವರ ಮಠದ ಬಕ್ಕಯ್ಯ ಸ್ವಾಮೀಜಿ, ಶಿವಯ್ಯ ಸ್ವಾಮೀಜಿ, ಸಂಗಯ್ಯ ಸ್ವಾಮೀಜಿ, ಫಕೀರಯ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಕನ್ನಡ ಜಾನಪದ ಪರಿಷತ್ತಿನ ತಾಲೂಕ ಅಧ್ಯಕ್ಷ ಬಿ.ಬಿ.ನಾಯ್ಕ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಜಾಪ ಕಾರ್ಯದರ್ಶಿ ಆರ್.ಬಿ.ನಬಿವಾಲೆ, ಪಿಕಾರ್ಡ ಬ್ಯಾಂಕ್ ನಿರ್ದೇಶಕ ಹನಮಂತ ಸಿಂಗರಡ್ಡಿ, ಆಶುಕವಿ ಸಿದ್ದಪ್ಪ ಬಿದರಿ, ರವೀಂದ್ರ ಜಕರಡ್ಡಿ, ಚಂದ್ರಶೇಖರ ನಡುವಿನಮನಿ, ಶಿವಾನಂದ ಹಿರೇಮಠ, ವೆಂಕಣ್ಣ ದ್ಯಾವಣ್ಣವರ, ಎಂ.ಬಿ.ತಾಂಬೋಳಿ, ಶ್ರೀಮತಿ ಎಚ್.ಬಿ.ಮಾಳಗೊಂಡ, ದಯಾನಂದ ಪೂಜಾರಿ ಇದ್ದರು.

## ಸಂಭ್ರಮದ ಹುಚ್ಚೇಶ್ವರ ಕಾರ್ತಿಕೋತ್ಸವ



**ಮಲ್ಲಮ್ಮ ನುಡಿ ಬಾಗಲಕೋಟೆ:** ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದ ಆರಾಧ್ಯದೈವ ಹೊಳೆ ಹುಚ್ಚೇಶ್ವರ ಸಂಸ್ಥಾನಮಠದ ಹುಚ್ಚೇಶ್ವರ ಮಠದಲ್ಲಿ ಕಾರ್ತಿಕ ಮಾಸದ ಅಂಗವಾಗಿ ಇತ್ತೀಚಿಗೆ ಹುಚ್ಚೇಶ್ವರ ದೇವರ ಕಾರ್ತಿಕೋತ್ಸವ ಸಂಭ್ರಮದಿಂದ ನಡೆಯಿತು.

ಹುಚ್ಚೇಶ್ವರ ಗದ್ದುಗೆಗೆ ವಿಶೇಷ ಅಲಂಕಾರ, ಅಭಿಷೇಕ, ಮಹಾಮಂಗಳಾರತಿ, ಭಕ್ತರಿಂದ ನೈವೇದ್ಯ ಸಮರ್ಪಣೆ ಜರುಗಿದವು. ಹುಚ್ಚೇಶ್ವರ ಮಠದ ಆವರಣದಲ್ಲಿ ಸಂಜೆ ನಡೆದ ಕಾರ್ತಿಕೋತ್ಸವ ಕಾರ್ಯಕ್ರಮಕ್ಕೆ ಹೊಳೆ ಹುಚ್ಚೇಶ್ವರ ಸಂಸ್ಥಾನಮಠದ ಹುಚ್ಚೇಶ್ವರ ಮಹಾಸ್ವಾಮಿಗಳು ಚಾಲನೆ ನೀಡಿದರು. ನಂತರ ವಿವಿಧ ಚಿತ್ರಗಳಿಂದ ರಂಗೋಲಿ ಬಿಡಿಸಿ ಅದರಲ್ಲಿ ಭಕ್ತ ಸಮೂಹ ಎಣ್ಣೆ ದೀಪ ಹಚ್ಚಿ, ಭಕ್ತಿ ಸಮರ್ಪಿಸಿ ಸಂಭ್ರಮಿಸಿದರು.

ಇದೇ ಸಂದರ್ಭದಲ್ಲಿ ಹುಚ್ಚೇಶ್ವರ ಮೂರ್ತಿ ಸೇವಾರ್ತಿಗಳಾದ ಹಳ್ಳೂರು ಗ್ರಾಮದ ಶ್ರೀಮಠದ ಸದ್ಭಕ್ತರಾದ ಬಸವರಾಜ ಜಿಗಳೂರ ದಂಪತಿಗಳಿಗೆ ಹುಚ್ಚೇಶ್ವರ ಮಹಾಸ್ವಾಮಿಗಳು ಸನ್ಮಾನಿಸಿ ಗೌರವಿಸಿದರು. ಕಾರ್ಯಕ್ರಮದಲ್ಲಿ ಕಮತಪುರದ ಸರ್ವ ಸಮಾಜದ ಹಿರಿಯರು, ಯುವಕರು, ಮಹಿಳೆಯರು ಹಾಗೂ ಶ್ರೀಮಠದ ಭಕ್ತರು ಇದ್ದರು.

## ಸಂಘಗಳಿಂದ ಸಮಾಜದ ಶ್ರೇಯೋಭಿವೃದ್ಧಿ ಸಾಧ್ಯ : ಸುದೀಂದ್ರ ಮಹಾಸ್ವಾಮಿಗಳು

**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ :**

ಸಂಘ ಸಂಸ್ಥೆಗಳ ಸಾಮಾಜಿಕ ಕಾರ್ಯಗಳಿಂದ ಸಮುದಾಯದ ಶ್ರೇಯೋಭಿವೃದ್ಧಿಯ ಸಾಧ್ಯ ಎಂದು ನಾಲತವಾಡದ ಬ್ರಹ್ಮಾಂಡಭೇರಿ ಮಠದ ಪೂಜ್ಯರಾದ ಸುದೀಂದ್ರ ಮಹಾಸ್ವಾಮಿಗಳು ಹೇಳಿದರು ಅವರು ವಿದ್ಯಾಗಿರಿಯ ಶ್ರೀ ಕಾಳಿಕಾಂಬಾದೇವಿಯ ದೇವಸ್ಥಾನದ ಸಭಾಭವನದಲ್ಲಿ ರವಿವಾರ ನಡೆದ ಬಾಗಲಕೋಟೆ ತಾಲೂಕಾ ಶ್ರೀ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ 2026ರ ದಿನದರ್ಶಿಕೆ ಬಿಡುಗಡೆ, ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ದಿನದರ್ಶಿ ಬಿಡುಗಡೆ ಮಾಡಿ ಮಾತನಾಡಿದ ಅವರು, ಸಮಾಜದಲ್ಲಿ ವಿವಿಧ ಸಂಘ ಸಂಸ್ಥೆಗಳಂತೆ ಬಾಗಲಕೋಟೆಯ ತಾಲೂಕಾ ನೌಕರರ ಕ್ಷೇಮಾಭಿವೃದ್ಧಿ ಸಂಘ, ಪ್ರತಿಭೆಗಳನ್ನು ಸಾಧಕರನ್ನು ಗುರುತಿಸಿ ಸನ್ಮಾನಿಸಿ ಪ್ರೋತ್ಸಾಹಿಸುವುದು, ಜೊತೆಗೆ ಸಮುದಾಯದ ಧಾರ್ಮಿಕ ಪರಂಪರೆಯನ್ನು ಜಾಗೃತಿಯಿಂದ ಮುಂದುವರೆಸುವ ಕಾರ್ಯಗಳನ್ನು ಮಾಡುತ್ತಿರುವುದು ಶ್ಲಾಘನೀಯ, ಇದೊಂದು ಸಮುದಾಯದ ಮಾದರಿಯ ಸಂಘಟನೆಯಾಗಿದೆ ಎಂದರು.



ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಬಾಗಲಕೋಟೆ ತಹಶಿಲ್ದಾರ್ ವಾಸುದೇವ ಸ್ವಾಮಿ ಮಾತನಾಡಿ ಸಮುದಾಯದ ಸಂಘಟನಾತ್ಮಕವಾಗಿ ಸರ್ಕಾರದ ಸೌಲಭ್ಯ ಪಡೆಯುಬೇಕು, ವಿಶ್ವಕರ್ಮ ಸಮಾಜ ಅತ್ಯಂತ ಪ್ರತಿಭಾವಂತ ಸಮಾಜವಾಗಿದ್ದು, ಪ್ರತಿಭೆಗಳಿಗೆ ಕೋರತೆಯಿಲ್ಲಾ, ಇಂದು ಎಲ್ಲ ಕ್ಷೇತ್ರದಲ್ಲಿ ವಿಶ್ವಕರ್ಮ ಸಮಾಜದ ಸಾಧಕರು ಇದ್ದಾರೆ, ಅವರೆಲ್ಲರೂ ಮುಂದಿನ ಯುವಶಕ್ತಿಗೆ ಪ್ರೇರಣೆ, ವಿಶ್ವಕರ್ಮ ನೌಕರರ ಸಂಘ ಶಿಸ್ತು ಬದ್ದ ಸಂಘವಾಗಿದೆ ಎಂದರು.

ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ದೇವೇಂದ್ರ ಅಗಳತಕಟ್ಟಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿ ಸಂಘದಿಂದ ಸಮಾಜದ ಶ್ರೇಯೋಭಿವೃದ್ಧಿಗಾಗಿ ಹಮ್ಮಿಕೊಂಡ ಯೋಜನೆಗಳ ವಿವರಗಳನ್ನು ಸಂಘದಿಂದ ನಡೆದ ಅನೇಕ ಸಮಾಜ ಪರ ಕಾರ್ಯಕ್ರಮಗಳ ಬಗ್ಗೆ ತಿಳಿಸಿದರು.

ಪ್ರಸ್ತಾವಿಕವಾಗಿ ನಾಗರಾಜ ಕಮ್ಮಾರ ಮಾತನಾಡಿ ಸಂಘ ನಡೆದು ಬಂದ ದಾರಿ ಮತ್ತು ಸಂಘದ ಅಡಿಯಲ್ಲಿ ನಡೆದ ಸಮಾಜಸೇವೆಗಳ ಬಗ್ಗೆ ಗಮನ ತಿಳಿಸಿದರು. ವಿದ್ಯಾಗಿರಿ ವಿಶ್ವಕರ್ಮ ಸಮಾಜ ಅಭಿವೃದ್ಧಿ ಸಂಘದ ಅಧ್ಯಕ್ಷರಾದ ವಸಂತರಾವ ಕಮ್ಮಾರ, ನಗರದ ಖ್ಯಾತ ವೈಧ್ಯ ಡಾ.ಮನೋಹರ ಟಂಕಸಾಲಿ, ಶಿರೂರಿನ ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಮನೋಹರ ಪತ್ತಾರ, ನಗರದ ಆರ್.ಟಿ.ಓ ಗಳಾದ ಶ್ರೀಮತಿ ಅಶ್ವಿನಿ ಬಡಿಗೇರ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

## ಪಟ್ಟದಕಲ್ಲು ಸ್ಮಾರಕಗಳಿಗೆ 'ಲೈಟಿಂಗ್' ಮೆರಗು



**ಮಲ್ಲಮ್ಮ ನುಡಿ ಬಾಗಲಕೋಟೆ:** ಪ್ರವಾಸಿಗರನ್ನು ಸೆಳೆಯುವ ನಿಟ್ಟಿನಲ್ಲಿ ಚಾಲುಕ್ಯರ ವಿಶ್ವ ಪಾರಂಪರಿಕ ತಾಣ, ಐತಿಹಾಸಿಕ ಪಟ್ಟದಕಲ್ಲಿನ ಸ್ಮಾರಕಗಳಿಗೆ ವಿದ್ಯುತ್ ದೀಪಾಲಂಕಾರದ ಮೆರಗು ನೀಡಲಾಗಿದೆ.

ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ವಿದ್ಯುತ್ ದೀಪಾಲಂಕಾರದ ಡೆಮೋ ವೀಕ್ಷಣೆಯ ನಂತರ ಮಾತನಾಡಿ, ಪಟ್ಟದಕಲ್ಲಿನಲ್ಲಿ 1.40 ಕೋಟಿ ರೂ.ಗಳ ವೆಚ್ಚದಲ್ಲಿ ವಿದ್ಯುತ್ ದೀಪಾಲಂಕಾರ ವ್ಯವಸ್ಥೆ ಮಾಡಲಾಗುತ್ತಿದೆ. ನಿತ್ಯ ಸಂಜೆ 6 ರಿಂದ ರಾತ್ರಿ 9 ಗಂಟೆವರೆಗೆ ವಿದ್ಯುತ್ ದೀಪಾಲಂಕಾರದ ಮೆರಗು ನೀಡಲಾಗುತ್ತಿದೆ ಎಂದರು.

ಭಾರತೀಯ ಪುರಾತತ್ವ ಇಲಾಖೆಯು ಇಂಡಿಯನ್ ಆಯಿಲ್ ಕಾರ್ಪೋರೇಷನ್ ಸಿಆರ್.ಎಸ್ ಅನುದಾನಡಿಯಲ್ಲಿ ಲೈಟಿಂಗ್ ವ್ಯವಸ್ಥೆ ಮಾಡಿದೆ. ಲೈಟಿಂಗ್ ಜೋಡನೆ ಕಾರ್ಯ ಪೂರ್ಣಗೊಂಡಿದ್ದು, ಮೂರು ದಿನಗಳ ಕಾಲ ಡೆಮೋ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು.

ವಿದ್ಯುತ್ ದೀಪಾಲಂಕಾರದ ಜೊತೆಗೆ ಇಂಪಾದ ಸಂಗೀತದ ಧ್ವನಿ ಕೂಡಾ ಅಳವಡಿಕೆಗೆ ಚಿಂತನೆ ಮಾಡಲಾಗುತ್ತಿದೆ. ಉದ್ಘಾಟನೆಯ ಬಳಿಕ ಇದು ನಿರಂತರವಾಗಿ ವ್ಯವಸ್ಥೆ ಮಾಡಲಾಗುತ್ತಿದೆ.

ಇನ್ನು ಮುಂದೆ ಐತಿಹಾಸಿಕ ಸ್ಮಾರಕಗಳನ್ನು ವಿದ್ಯುತ್ ಅಲಂಕಾರದ ಮೆರಗಿನಲ್ಲಿ ಕಣ್ತುಂಬಿಕೊಳ್ಳಬಹುದಾಗಿದೆ. ವಿದ್ಯುತ್ ದೀಪಾಲಂಕಾರದ ವ್ಯವಸ್ಥೆಯ ನಿರ್ವಹಣೆಯನ್ನು ಮೂರು ವರ್ಷಗಳ ಕಾಲ ಇಂಡಿಯನ್ ಆಯಿಲ್ ಕಾರ್ಪೋರೇಷನ್‌ದವರೇ ಮಾಡಲಿದ್ದಾರೆ. ನಂತರ ಭಾರತೀಯ ಪುರಾತತ್ವ ಇಲಾಖೆಯವರು ಮಾಡಲಿದ್ದಾರೆಂದು ಅಪರ ಜಿಲ್ಲಾದಿಕಾರಿಗಳು ತಿಳಿಸಿದರು.

ಈ ಸಮಯದಲ್ಲಿ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಭಾರತೀಯ ಪುರಾತತ್ವ ಇಲಾಖೆಯ ಅಧೀಕ್ಷಕ ರಮೇಶ ಮೂಲಿಮನಿ,

ಉಪ ಅಧೀಕ್ಷಕ ಶ್ರೀಗುರು ಭಾಗಿ, ಹಿರಿಯ ಸಹಾಯಕ ಸಂರಕ್ಷಣಾಧಿಕಾರಿ ಅನಿರುದ್ಧ ದೇಸಾಯಿ ಸೇರಿದಂತೆ ಇತರರು ಇದ್ದರು.

## 'ಜಾನಪದ ಗೊಂಚಲು' ಕೃತಿ ಲೋಕಾರ್ಪಣೆ

### ಸಾಂಸ್ಕೃತಿಕ ಚರಿತ್ರೆಗೆ ಜಾನಪದ ಬಹುದೊಡ್ಡ ಅನಾವರಣ–ಖಾಡೆ

**ಮಲ್ಲಮ್ಮ ನುಡಿ ಬಾಗಲಕೋಟೆ:**

ಕರ್ನಾಟಕ ಸಾಂಸ್ಕೃತಿಕ ಚರಿತ್ರೆಗೆ ಮೌಖಿಕ ಪರಂಪರೆಯ ಬಹುದೊಡ್ಡ ಅನಾವರಣ ಜಾನಪದದಿಂದ ದೊರೆತಿದ್ದು, ಜಾನಪದದ ಸಂಗ್ರಹ ಮತ್ತು ಸಂಪಾದನೆಯ ಕಾರ್ಯಗಳೊಂದಿಗೆ ಬಹುಶ್ರುತ ನೆಲೆಯಲ್ಲಿ ಅಧ್ಯಯನ ಕೈಕೊಳ್ಳಬೇಕಾಗಿದೆ ಎಂದು ಸಾಹಿತಿ .ಪ್ರಕಾಶ ಖಾಡೆ ಹೇಳಿದರು.



ಜಿಲ್ಲೆಯ ಗುಳೇದಗುಡ್ಡ ತಾಲೂಕಿನ ತೆಗ್ಗಿ ಗ್ರಾಮದ ಕಾಳಣ್ಣವರ ಕುಟುಂಬದವರ ಹೊಲದಲ್ಲಿ ಎಳ್ಳು ಅಮವಾಸ್ಯೆ ಚರಗ ಚೆಲ್ಲುವ ಕಾರ್ಯಕ್ರಮದ ಅಂಗವಾಗಿ ಶುಕ್ರವಾರ ಹಮ್ಮಿಕೊಂಡಿದ್ದ ಹಂಪಿ ಕನ್ನಡ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ವೀರೇಶ ಬಡಿಗೇರ ಅವರ 'ಜಾನಪದ ಗೊಂಚಲು' ಕೃತಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಕೃತಿ ಪರಿಚಯಿಸಿ ಅವರು ಮಾತನಾಡಿದರು.

ವೀರೇಶ ಬಡಿಗೇರ ಅವರ ಕೃತಿ ಜಾನಪದ ಕ್ಷೇತ್ರದ ಅಧ್ಯಯನಕ್ಕೆ ಹೊಸ ಮಾದರಿಗಳನ್ನು ರೂಪಿಸಿದೆ. ಜನಪದರ ಭಾಷೆ, ಜನಾಂಗ, ಕಲೆ, ಹಾಡು, ಸಂಸ್ಕೃತಿ, ಆಚರಣೆ, ನಂಬುಗೆ, ಮಹಿಳೆ ಮತ್ತು ಕೃಷಿ ಸಂಬಂಧಿ ನೆಲೆಗಳ ವಿಸ್ತೃತ ಅಧ್ಯಯನಕ್ಕೆ ತೋರುಬೆರಳಾಗಿದೆ ಎಂದ ಪ್ರಕಾಶ ಖಾಡೆ, ಉತ್ತರ ಕರ್ನಾಟಕವಲ್ಲದೇ ಕರಾವಳಿ, ಮಲೆನಾಡು ಮತ್ತು ಬಯಲು ಸೀಮೆಯ ಪ್ರದೇಶಗಳ ಜಾನಪದ ಸಂಗತಿಗಳನ್ನು ಪುನರಾವಲೋಕಿಸುವದರೊಂದಿಗೆ ಸಮಗ್ರ ಜಾನಪದ ಸಮೃದ್ಧತೆಯನ್ನು ಕೃತಿಯಲ್ಲಿ ದಾಖಲಿಸಿದ್ದಾರೆ ಎಂದು ಹೇಳಿದರು.

ಶಿಕ್ಷಣ ಇಲಾಖೆಯ ವಿಶ್ರಾಂತ ನಿರ್ದೇಶಕ ಸಿದ್ಧರಾಮ ಮನಹಳ್ಳಿ ಕೃತಿ ಬಿಡುಗಡೆ ಮಾಡಿ ಮಾತನಾಡಿ, ಬಡಿಗೇರ ಅವರು ತಮ್ಮ ಹುಟ್ಟೂರು ಬೆಣ್ಣೂರು ಗ್ರಾಮದ ಸಂಸ್ಕೃತಿಯನ್ನು ಬಹುವಿಧದಲ್ಲಿ ಸಂಶೋಧಿಸಿ ಜಗತ್ತಿನ ಗಮನಕ್ಕೆ ತಂದಿದ್ದಾರೆ ಎಂದರು.

ಮಾಜಿ ಶಾಸಕ ಎಂ.ಕೆ.ಪಟ್ಟಣಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಿದರು. ಗುಳೇದಗುಡ್ಡದ ಅಭಿನವ ಒಪ್ಪತ್ತೇಶ್ವರ ಶ್ರೀಗಳು ಸಾನಿಧ್ಯ ವಹಿಸಿದ್ದರು. ಪಾಚಾರ್ಯ ಅರುಣಕುಮಾರ ಗಾಳಿ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ರಾಜ್ಯಮಟ್ಟದ ಅತ್ಯುತ್ತಮ ಅಂಗನವಾಡಿ ಕಾರ್ಯಕರ್ತೆ ಪ್ರಶಸ್ತಿ ಪುರಸ್ಕೃತೆ ಬಸವರಾಜೇಶ್ವರಿ ಕುಬಕಡ್ಡಿ ಅವರನ್ನು ಸತ್ಕರಿಸಲಾಯಿತು.

ಪ್ರೊ. ಚಂದ್ರಶೇಖರ ಕಾಳಣ್ಣವರ ಪ್ರಾಸ್ತಾವಿಕ ಮಾತನಾಡಿದರು. ಶರಣು ಪಾಟೀಲ ಅತಿಥಿಗಳಾಗಿ ಪಾಲ್ಗೊಂಡಿದ್ದರು, ಹುನಗುಂದ ಕಸಾಪ ಅಧ್ಯಕ್ಷ ಮಲ್ಲಿಕಾರ್ಜುನ ಸಜ್ಜನ, ಗುಳೇದಗುಡ್ಡ ಕಸಾಪ ಅಧ್ಯಕ್ಷ ಎಚ್.ಎಸ್.ಘಂಟಿ, ಬಾಗಲಕೋಟೆ ಕಸಾಪ ಅಧ್ಯಕ್ಷ ಪಾಂಡುರಂಗ ಸಣ್ಣಪ್ಪನವರ ಹಾಗೂ ಸಣ್ಣವೀರಣ್ಣ ದೊಡಮನಿ, ಶ್ರೀಹರಿ ದೂಪದ, ಮಲ್ಲಿಕಾರ್ಜುನ ರಾಜನಾಳ, ಆನಂದ ದಲಭಂಜನ, ಸಂಜಯ ನಡುವಿನಮನಿ, ಪ್ರೊ.ಸಂಗಮೇಶ ಬ್ಯಾಳಿ ಉಪಸ್ಥಿತರಿದ್ದರು. ಶೇಖರ ಗೊಳಸಂಗಿ ನಿರೂಪಿಸಿದರು. ಪ್ರೊ.ಎಸ್.ಎಂ.ಕಾಳಣ್ಣವರ ವಂದಿಸಿದರು.

## ಡಿ.25ರಿಂದ ಆರ್‌ಡಿಪಿಆರ್ ಕ್ರೀಡಾಕೂಟ

**ಮಲ್ಲಮ್ಮ ನುಡಿ ಬಾಗಲಕೋಟೆ:** ಪ್ರಸಕ್ತ ಸಾಲಿಗೆ ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತರಾಜ್ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಡಿಸೆಂಬರ್ 25 ರಿಂದ 27ರವರೆಗೆ ಮೂರು ದಿನಗಳ ಕಾಲ ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿ.ಪಂ ಸಿಇಓ ಶಶಿಧರ ಕುರೇರ ಹೇಳಿದರು.



ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದ ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲಾ ಪಂಚಾಯತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಇಲಾಖೆಯ ಎಲ್ಲಾ ವೃಂದ ಸಂಘಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಹಯೋಗದೊಂದಿಗೆ ಕ್ರೀಡಾಕೂಟಗಳನ್ನು ಆಯೋಜನೆ ಮಾಡಲಾಗುತ್ತಿದೆ ಎಂದರು.

ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಜೊತೆಗೆ ಆರೋಗ್ಯ ತಪಾಸಣಾ ಶಿಬಿರವನ್ನು ಸಹ ಹಮ್ಮಿಕೊಳ್ಳಲಾಗುತ್ತಿದೆ. ಕಾರ್ಯಕ್ರಮದಲ್ಲಿ ಸಮಯ ಪರಿಪಾಲನೆ ಮಾಡಿದಾಗ ಮಾತ್ರ ಕಾರ್ಯಕ್ರಮ ಯಶಸ್ವಿಯಾಗಲು ಸಾಧ್ಯವಾಗುತ್ತದೆ ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಕ್ರೀಡೆ, ಉಡುಗೆ ತೊಡುಗೆಯ ಶೈಲಿ, ಊಟ, ಸಾಂಸ್ಕೃತಿಕ ಕಾರ್ಯಕ್ರಮ ಸಿದ್ದತೆಗಳು ಸೇರಿದಂತೆ ಆಯಾ ಸಮಿತಿಗಳ ಜೊತೆ ಚರ್ಚಿಸಲು ತಿಳಿಸಿದರು. ಈ ಸಂದರ್ಭದಲ್ಲಿ ಟಿಶರ್ಟ್ ಮತ್ತು ಟ್ರೋಫಿಗಳನ್ನು ಅನಾವರಣಗೊಳಿಸಲಾಯಿತು.

ಸಭೆಯಲ್ಲಿ ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು ಅಲ್ಲಾಪೂರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯನಿರ್ವಾಹಕ ಇಂಜಿನಿಯರ್ ಆಕಾಶ್ ವಂದೆ,

ಭೂಸೇನಾ ಕಾರ್ಯನಿರ್ವಾಹಕ ಇಂಜಿನಿಯರ್ ಸದಾಶಿವಯ್ಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ, ಕರ್ನಾಟಕ ರಾಜ್ಯ .ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ರಾಜು ವಾರದ ಮತ್ತು ಜಿಲ್ಲಾ ಪಂಚಾಯತ್ ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ ಸೇರಿದಂತೆ ಜಿಲ್ಲೆಯ ಎಲ್ಲ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

## ಅಂತರಾಷ್ಟ್ರೀಯ ವಾಣಿಜ್ಯ ಮೇಳ : 23ರಂದು ನಡಿಗೆ

**ಮಲ್ಲಮ್ಮ ನುಡಿ ಬಾಗಲಕೋಟೆ:**

ಅಂತರಾಷ್ಟ್ರೀಯ ವಾಣಿಜ್ಯ ಮೇಳ–2025ರ ಅಂಗವಾಗಿ ಡಿಸೆಂಬರ 23 ರಂದು ಬೆಳಿಗ್ಗೆ 7 ಗಂಟೆಗೆ ಜಿಲ್ಲಾಡಳಿತ ಭವನದಿಂದ ವಿದ್ಯಾಗಿರಿ ವೃತ್ತದವರೆಗೆ ನಡಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ನಡಿಗೆಯಲ್ಲಿ ಶಾಲಾ–ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು, ಜಿ.ಪಂ ಸಿಇಓ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಸಾರ್ವಜನಿಕರು ಸೇರಿದಂತೆ ಅಂದಾಜು 400 ರಿಂದ 500 ವರೆಗೆ ಪಾಲ್ಗೊಳ್ಳಲಿದ್ದಾರೆ.

ನಡಿಗೆ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ನವನಗರ ಬಸ್ ನಿಲ್ದಾಣ, ಎಲ್.ಐ.ಸಿ ವೃತ್ತ, ಎಸ್.ಬಿ.ಆಯ್, ಜಿಲ್ಲಾ ಆಸ್ಪತ್ರೆ, ಕಾಳಿದಾಸ ವೃತ್ತ ಮಾರ್ಗವಾಗಿ ಬಸವೇಶ್ವರ ಇಂಜನೀಯರಿಂಗ್ ಕಾಲೇಜು ವೃತ್ತ, ವಿದ್ಯಾಗಿರಿಗೆ ಮುಕ್ತಾಯಗೊಳ್ಳಲಿದೆ.

ನಡಿಗೆಯಲ್ಲಿ ಪಾಲ್ಗೊಳ್ಳುವ ಆಸಕ್ತ ಸಾರ್ವಜನಿಕರು, ವಿವಿಧ ಸಂಘ ಸಂಸ್ಥೆಗಳು ವಿವೇಕಾನಂದ ಪಾಟೀಲ (9844536616), ಶಾಹೀದ ಮುದ್ದೇಬಿಹಾಳ (7022967686), ಈರಣ್ಣ ಬೂಸರೆಡ್ಡಿ (9900501152) ವಿಠಲ ಮೊಕಾಶಿ (8095147797) ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒತ್ತಡ ಮುಕ್ತ ಆಧುನಿಕ ಯೋಗ



**ಯಾದಗಿರಿ:** ಒತ್ತಡ ಸೇರಿದಂತೆ ಎಲ್ಲ ರೀತಿಯ ಆಧುನಿಕ ಬದುಕಿನ ಮಾನಸಿಕ ದೈಹಿಕ ಅನಿಶ್ಚಿತತೆಗಳನ್ನು ದೂರ ಮಾಡುವ ಶಕ್ತಿ ಧ್ಯಾನ ಹೊಂದಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಅಭಿಪ್ರಾಯಪಟ್ಟರು.

ನಗರದ ಶಾಸಕರ ಜನಸಂಪರ್ಕ ಕಚೇರಿ ಆವರಣದಲ್ಲಿ ಬಸವ ಯೋಗ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ವಿಶ್ವ ಧ್ಯಾನ ದಿನಾಚರಣೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡಿದರು. ಯೋಗದ ನಂತರ ಸಾಧನೆ ಮಾಡುವ ಹಾದಿಯಲ್ಲಿ ಕೊನೆಗೆ ಧ್ಯಾನ ಸ್ಥಿತಿ ಸಮಾಧಿ ಸ್ಥಿತಿ ಸಾಧ್ಯವಾಗುತ್ತದೆ ಇದು ಒತ್ತಡ ಮುಕ್ತ ಬದುಕು ಬದುಕಲು ಸಾಧ್ಯವಾಗುತ್ತದೆ ಎಂಬುದು ನಮ್ಮ ಪರಂಪರೆಯಲ್ಲಿ ಹಿರಿಯರು ಕಂಡುಕೊಂಡಿದ್ದರು.

ಆದರೆ ಇಂದು ಆಧುನಿಕ ಬದುಕಿನಲ್ಲಿ ಒತ್ತಡ ಎಂಬುದು ವ್ಯಾಪಕವಾಗಿ ಆಗುತ್ತಿದೆ. ಮತ್ತೆ ಒತ್ತಡ ಮುಕ್ತರಾಗಲು ಯೋಗ ಧ್ಯಾನದತ್ತ ನಾವು ಸಾಗಬೇಕೆಂದು ನುಡಿದರು.

ಶ್ರೀಮಂತಿಕೆ ಸಾಧಿಸುವುದೇ ಜೀವನ ಅಲ್ಲ ಹಣ ಗಳಿಸಿದ ಪ್ರತಿಯೊಬ್ಬರಿಗೂ ಒತ್ತಡ ಡಿಪ್ರೇಷನ್ ಗಳು ಬಳುವಳಿಯಾಗಿ ಬರುತ್ತವೆ ಆದರೆ ಇವುಗಳಿಂದ ಮುಕ್ತರಾದವರೇ ನಿಜವಾದ ಶ್ರೀಮಂತರು ಇಂತಹ ಶ್ರೀಮಂತಿಕೆ ಯೋಗ ಧ್ಯಾನ ಗಳಲ್ಲಿದೆ ಎಂದು ಮಾರ್ಮಿಕವಾಗಿ ನುಡಿದರು. ಜಗತ್ತಿಗೆ ಭಾರತದ ಕೊಡುಗೆ ಯೋಗ ಧ್ಯಾನ ಇದನ್ನು ಮನಗಂಡು ನಾವು ಅದನ್ನು ಅಳವಡಿಸಿಕೊಳ್ಳುವ ಅಗತ್ಯವಿದೆ ಎಂದು ನುಡಿದರು. ವಿಶೇಷ ಉಪನ್ಯಾಸ ನೀಡಿದ ಬಸವ ಯೋಗ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಕೆ ಸೋಮನಾಥ ರೆಡ್ಡಿ ಮಾತನಾಡಿ, ಧ್ಯಾನದಿಂದ ಮೆದುಳಿನಲ್ಲಿ ಅಲ್ಫಾ, ಬೀಟಾ, ಗಾಮಾ, ಸೀಟಾ ವೆವ್‌ಗಳು ಉತ್ಪನ್ನಗೊಳ್ಳುತ್ತಿವೆ ಇವುಗಳಿಂದ ಮೆದುಳು ಸಕ್ರಿಯ ಆಗುತ್ತದೆ ಧ್ಯಾನದಿಂದ ಸಕ್ರಿಯ ಆಗುತ್ತವೆ.

ಡೋಪಮೈನ್ ಸೇರಿದಂತೆ ಹಲವು ಹಾರ್ಮೋನ್ ಗಳು ಬಿಡುಗಡೆ ಆಗುತ್ತವೆ, ಆಕ್ಸಿಟಾಕ್ಸಿನ್ ಹಾರ್ಮೋನು ಸ್ರವಿಸುವಿಕೆ ಹೆಚ್ಚಾಗುತ್ತದೆ ಇದರಿಂದ ಸ್ಪರ್ಶ ಸುಖದ ಹಿತಾನುಭವ ಪ್ರಮಾಣ ಹೆಚ್ಚಳವಾಗುತ್ತದೆ.

ಎಂಡೋರ್ಸಿನ್ ಹಾರ್ಮೋನ್ ಸುಖ-ದುಃಖ ದ ದಣಿವು ದೂರ ಮಾಡುತ್ತೆ, ಅಪಾಯಕಾರಿ ಸಂದರ್ಭದಲ್ಲಿನ ಕಾರ್ಟಿಸೋಲ್ ಹಾರ್ಮೋನ್ ಬಿಡುಗಡೆ ಆಗಲು ಧ್ಯಾನ ಸಹಕಾರಿಯಾಗಿದೆ.

ಅಪಾಯದ ವೇಳೆ ಭಯ ಆದಾಗ ಬೆವರುವುದು ಗ್ಲುಕೋಸ್ ಬಿಡುಗಡೆ ಮಾಡುವುದರ ಮೂಲಕ ಪರಿಸ್ಥಿತಿ ನಿಯಂತ್ರಿಸಲು ಹಾರ್ಮೋನುಗಳು ಸಹಾಯಕ ಮಾಡುತ್ತವೆ ಈ ಹಾರ್ಮೋನುಗಳು ಸರಿಯಾಗಿ ಬಿಡುಗಡೆಯಾಗಬೇಕೆಂದರೆ ಧ್ಯಾನ ಯೋಗ ಕಡ್ಡಾಯ ಮಾಡಬೇಕು ಎಂದು ನುಡಿದರು.

ವೇದಿಕೆ ಮೇಲೆ ವೀರಶೈವ ಮಹಾಸಭಾ ಜಿಲ್ಲಾದ್ಯಕ್ಷ ಚೆನ್ನಪ್ಪಗೌಡ ಮೋಸಂಬಿ, ಆರ್ಯಭಟ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಸುಧಾಕರರಡ್ಡಿ ಅನಪೂರ, ನ್ಯಾಯವಾದಿ ಬಸವರಾಜಪ್ಪ ಕ್ಯಾತನಾಳ ಇದ್ದರು. ಗಣೇಶ ಪೂಜೆಯನ್ನು ನಿವೃತ್ತ ಸಿಪಿಐ ಪಂಚಾಕ್ಷರಿ ಹಿರೇಮಠ ಮಾಡಿದರು. ಹಣಮಯ್ಯ ಕಲಾಲ್ ಸ್ವಾಗತಿಸಿದರು. ಯಾದಗಿರಿ ಟೈಮ್ಸ್ ಪತ್ರಿಕೆ ಸಂಪಾದಕ ವೈಜನಾಥ ಹಿರೇಮಠ ಪ್ರಾಸ್ತಾವಿಕ ಮಾತನಾಡಿ ಸರ್ವರಿಗೆ ಸ್ವಾಗತಿಸಿದರು. ಶಿಕ್ಷಕಿ ವಿಜಯ ಲಕ್ಷ್ಮೀ ನಿರೂಪಿಸಿದರು. ಪುರುಷೋತ್ತಮ ವಂದಿಸಿದರು.

## ನೂತನ ಕಿಷ್ಕಿಂದ ವಿಶ್ವವಿದ್ಯಾಲಯದ ಪ್ರಥಮ ಘಟಿಕೋತ್ಸವ 24ರಂದು



**ಬಳ್ಳಾರಿ:** ಕಲ್ಯಾಣ ಕರ್ನಾಟಕದಲ್ಲಿ ಶೈಕ್ಷಣಿಕ ಕ್ರಾಂತಿ ಮೂಡಿಸಿರುವ ಕಿಷ್ಕಿಂದ ವಿಶ್ವವಿದ್ಯಾಲಯದ ಪ್ರಥಮ ಘಟಿಕೋತ್ಸವ ಇದೇ ಡಿ.24 ರಂದು ಜರುಗಲಿದೆ ಎಂದು ಕುಲಪತಿ ಪ್ರೊ.ಟಿ.ಎನ್.ನಾಗಭೂಷಣ ಅವರು ತಿಳಿಸಿದ್ದಾರೆ.

ಇಂದು ನಗರದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಬಳ್ಳಾರಿ-ಸಿರುಗುಪ್ಪ ಮಧ್ಯೆ ಇರುವ ಸಿಂಧಿಗೇರಿ ಬಳಿಯ 50 ಎಕರೆ ವಿಸ್ತೀರ್ಣದ ಮೌಂಟ್ ವ್ಯೂ ಕ್ಯಾಂಪಸ್ ನಲ್ಲಿ ಮಧ್ಯಾಹ್ನ 12-30ಕ್ಕೆ ಘಟಿಕೋತ್ಸವ ಆರಂಭವಾಗಲಿದ್ದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ರಾಜ್ಯ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಉಪಸ್ಥಿತಿ ವಹಿಸಲಿದ್ದಾರೆ. ಗೌರವಾನ್ವಿತ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ, ಬೆಳಗಾವಿ ಕ್ಷೇತ್ರದ ಸಂಸದ ಜಗದೀಶ್ ಶೆಟ್ಟರ್, ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಶಾಸಕ ಬಿ.ಎಂ.ನಾಗರಾಜ, ಸಿಂಧನೂರು ಶಾಸಕ ಬಾದರ್ಲಿ ಹಂಪನಗೌಡ ಆಗಮಿಸಲಿದ್ದಾರೆ.


ವಳಬಳ್ಳಾರಿ ಸುವರ್ಣಗಿರಿ ವಿರಕ್ತಮಠದ ಸಿದ್ಧಲಿಂಗ ಮಹಾಸ್ವಾಮಿಗಳಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಿದ್ದು, ಅವರೊಂದಿಗೆ ಶೈಕ್ಷಣಿಕ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಗೌರವಿಸಲಾಗುತ್ತಿದೆ. ಎಂಬಿಎ ವಿಭಾಗದಲ್ಲಿ ಶಬಾನಾ 9.33 ಸಿಜಿಪಿಎದೊಂದಿಗೆ ಪ್ರಥಮ ರ್‍ಯಾಂಕ್ ಪಡೆದು ಚಿನ್ನದ ಪದಕ ಪಡೆದಿದ್ದಾರೆ. ಸೌಗಂಧಿಕಾ ಲಕ್ಷ್ಮಿ 9.27 ಸಿಜಿಪಿಎಯೊಂದಿಗೆ ದ್ವಿತೀಯ ರ್‍ಯಾಂಕ್ ಪಡೆದು ಬೆಳ್ಳಿ ಪದಕ ಪಡೆಯಲಿದ್ದಾರೆ. ಟಿ.ಇ.ಹೆಚ್.ಆರ್.ಡಿ.ಟ್ರಸ್ಟ್ ಅಧ್ಯಕ್ಷ ಡಾ.ಎಸ್.ಜೆ.ವಿ.ಮಹಿಪಾಲ್, ಕಿಷ್ಕಿಂದ ವಿಶ್ವವಿದ್ಯಾಲಯದ ಕುಲಾಧಿಪತಿ ಡಾ.ಯಶವಂತ್ ಭೂಪಾಲ್, ಟ್ರಸ್ಟ್ ನ ಟ್ರಸ್ಟಿಗಳಾದ ಎಸ್ ಬಿ ಅಶೋಕ್ ಭೂಪಾಲ್, ಡಾ.ವಿ.ಜೆ.ಭರತ್, ಅಮರ್ ರಾಜ್ ಭೂಪಾಲ್, ಕುಲಸಚಿವರಾದ ಡಾ.ಯು.ಈರಣ್ಣ ಮತ್ತು ಮೌಲ್ಯಮಾಪನ ಕುಲಸಚಿವ ಡಾ.ರಾಜು ಜಾಡರ ಅವರು ಪಾಲ್ಗೊಳ್ಳಲಿದ್ದಾರೆ ಎಂದರು. ಸಹ ಕುಲಾಧಿಪತಿ ವೈ.ಜೆ.ಪೃಥ್ವಿರಾಜ್ ಭೂಪಾಲ್ ಮಾತನಾಡಿ, ವಿಜನ್ ಆಫ್ ಕರ್ನಾಟಕ ದೊಂದಿಗೆ ಈಗಾಗಲೇ ವಿದ್ಯಾರ್ಥಿಗಳ ಸರ್ವತೋಮುಖ ವ್ಯಕ್ತಿತ್ವ ವಿಕಸನಕ್ಕೆ ವಿಶ್ವವಿದ್ಯಾಲಯ ನಾವೀನ್ಯತೆ, ಕೌಶಲ್ಯಾಧಾರಿತ ಶಿಕ್ಷಣ ನೀಡಲು ಉದ್ದೇಶಿಸಿದೆ. ನಮ್ಮಲ್ಲಿ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳು ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸುವ ಸಾಮರ್ಥ್ಯ ಹೊಂದಿದ್ದಾರೆ. ಇಲ್ಲಿನ ವಿದ್ಯಾರ್ಥಿಗಳ ವಿಕಸನಕ್ಕಾಗಿ ಅಗ್ರಿ ಟೆಕ್ ಲ್ಯಾಬ್ ಸೆಟ್ ಅಪ್ ಮಾಡುತ್ತಿದ್ದು ಈ ಭಾಗದ ಮೆಣಸಿನ ಕಾಯಿ, ಭತ್ತ, ಹತ್ತಿ ಮತ್ತು ಜೀನ್ಸ್ ಉದ್ಯಮಕ್ಕೆ ಪೂರಕವಾಗಿ ಯೋಜನೆಗಳನ್ನು ರೂಪಿಸಲು, ಸಾಕಾರಗೊಳಿಸಲು ನಮ್ಮ ವಿದ್ಯಾರ್ಥಿಗಳಿಗೆ ಅಗತ್ಯ ತರಬೇತಿ, ಕಾರ್ಯಾಗಾರ ತಾಂತ್ರಿಕ ನೈಪುಣ್ಯತೆಯೊಂದಿಗೆ ವ್ಯಾವಹಾರಿಕ ಜ್ಞಾನವನ್ನು ಉತ್ತೇಜಿಸುತ್ತೇವೆ ಎಂದರು.

ಎಂ.ಬಿ.ಎ., ಮತ್ತು ಎಂ.ಸಿ.ಎ., ವಿಭಾಗದಲ್ಲಿ 80 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಇದರಲ್ಲಿ ಈಗಾಗಲೇ 50 ವಿದ್ಯಾರ್ಥಿಗಳಿಗೆ ಕ್ಯಾಂಪಸ್ ನಲ್ಲಿ ಆಯ್ಕೆ ಆಗಿದ್ದು ವಾರ್ಷಿಕ 4.5 ಪ್ಯಾಕೇಜ್ ದೊರೆತಿದೆ. ವಿವಿಧ ಕೋರ್ಸ್‌ಗಳಲ್ಲಿ 2368 ವಿದ್ಯಾರ್ಥಿಗಳಿದ್ದು, 200 ಕ್ಕೂ ಹೆಚ್ಚು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸ್ಟಾರ್ಟ್ ಅಪ್ ನಲ್ಲಿ ಕೌಶಲ್ಯ ಹೊಂದಿರುವ ವಿದ್ಯಾರ್ಥಿಗಳಿಗೆ ನಾವೇ ಅನುದಾನ ಒದಗಿಸುತ್ತೇವೆ. ಅವರ ಶೈಕ್ಷಣಿಕ ಮತ್ತು ಬೌದ್ಧಿಕ ಪ್ರಗತಿಗೆ ನಮ್ಮ ಬೆಂಬಲ ಸದಾ ಇರುತ್ತದೆ ಎಂದರು.

# ಹೊರಗಡೆ ಉರ್ದು ಬೋರ್ಡ್, ಒಳಗಡೆ ಕನ್ನಡ ಕಲಿಸಿದ ಪಟ್ಟದ್ದೇವರು

ಮಾತೃಭಾಷೆಯಲ್ಲಿ ಶಿಕ್ಷಣ ನೀಡಿದರೆ ಬೇಗನೆ ಗ್ರಹಿಸಲು ಅನುಕೂಲವಾಗುತ್ತದೆ ಎಂದು ತಿಳಿದ ಡಾ. ಚೆನ್ನಬಸವದ್ದೇವರು 1936ರಲ್ಲಿ ಮೋರಿಗಿ ಯಲ್ಲಿ ಕನ್ನಡ ಶಾಲೆಯನ್ನು ಪ್ರಾರಂಭಿಸಿದರು. ಉರ್ದು ಭಾಷೆಯ ಪ್ರಭಾವವಿದ್ದ ಕಾಲದಲ್ಲಿ ಹೊರಗಡೆ ಉರ್ದು ಪಾಠಶಾಲೆ ಎಂದು ನಾಮಫಲಕ ಹಾಕಿ ಶಾಲೆಯೊಳಗೆ ಕನ್ನಡ ಕಲಿಸಿವ ಪಣತೊಟ್ಟ ಮಹಾನುಭಾವರು.

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



**136 ನೇ ಜಯಂತೋತ್ಸವದ ನಿಮಿತ್ತ ಈ ವಿಶೇಷ ಲೇಖನ**

ಕರ್ನಾಟಕದ ಇತಿಹಾಸದಲ್ಲಿ ಬೀದರ್ ಜಿಲ್ಲೆಯು ಪ್ರಮುಖ ಪಾತ್ರ ವಹಿಸಿದೆ. ಅದರಲ್ಲೂ ಭಾಲ್ಕಿ ಸಾಧು, ಸನ್ಯಾಸಿಗಳ, ಸಂತರು ನೆಲೆಸಿದ ಪುಣ್ಯಭೂಮಿ ಇದಾಗಿದೆ. ಗಡಿ ಭಾಗವಾದ ಬೀದರ್ ಜಿಲ್ಲೆಯು ಹೈದರಾಬಾದ್ ನಿಜಾಮನ ಅಧೀನಕ್ಕೆ ಒಳಪಟ್ಟು ಉರ್ದು ಆಡಳಿತ ಭಾಷೆಯಾಗಿ ಕನ್ನಡಕ್ಕೆ ಯಾವುದೇ ಸ್ಥಾನಮಾನವಿರದೆ ಅವನತಿಯತ್ತ ಸಾಗಲಾರಂಭಿಸಿತು.

ಆ ವಾತಾವರಣದಲ್ಲಿ ಹೊರಗಡೆ ಉರ್ದು ನಾಮಫಲಕವನ್ನು ಹಾಕಿ ಒಳಗಡೆ ಕನ್ನಡವನ್ನು ಕಲಿಸಿದ ಮಹಾನ್ ಪುರುಷ. ಕನ್ನಡ ಭಾಷೆಯನ್ನು ಉಳಿಸಿ, ಬೆಳೆಸಿ ಕನ್ನಡಿಗರಲ್ಲಿ ವೀರತನವನ್ನು ಬಿತ್ತಿದ ಶೂರರು. ತಮ್ಮ ಕಾಯಕಯೋಗಿಯ ಗುಣದಿಂದಾಗಿ ಕನ್ನಡ ಭಾಷೆಯ ಪೂಜೆಗೈಯುತ್ತ ಈ ಭಾಗದಲ್ಲಿ ಹೊಸ ಸಂಚಲನವನ್ನು ಸೃಷ್ಟಿಸಿದವರು.

ಬುಳ್ಳಾ ಮನೆತನದ ರಾಚಪ್ಪ, ಸಂಗಮ ದಂಪತಿಗಳಿಗೆ 22.12.1899 ರಂದು ಜನಿಸಿದರು. ಮಗುವಿಗೆ ಮಹಾರುದ್ರಪ್ಪ ಎಂದು ಹೆಸರಿಟ್ಟರು. ಮಗು 5 ವರ್ಷ ತುಂಬುವುದರೊಳಗೆ ತಂದೆ-ತಾಯಿಗಳು ವಿಧಿವಶರಾಗಿ ಮಗು ಅನಾಥವಾಯಿತು. ಅಂತಹ ಸಂದರ್ಭದಲ್ಲಿ ಗ್ರಾಮದ ಮುಖಂಡರು ಶಾಖ ಮಠದ ಶಂಕ್ರಯ್ಯ ಸ್ವಾಮಿಗಳ ಪೋಷಣೆಗೆ ಒಪ್ಪಿಸಿದರು. ಬೆಳಗ್ಗೆ ಬೇಗ ಏಳುವುದು, ಸ್ನಾನ, ಪೂಜೆ ಮಾಡುವುದು ಭಕ್ತರ ಮನೆಯಿಂದ ಹಿಟ್ಟು ತರುವುದು, ಕಂತಿ ಬಿಕ್ಷೆ ಎತ್ತುವುದು ಮಹಾರುದ್ರಪ್ಪನ ನಿತ್ಯ ಕಾಯಕ. ಮಠದ ಆಕಳನ್ನು ಮೇಯಿಸುವುದು ಆತನ ಇನ್ನೊಂದು ಪ್ರಮುಖ ಕಾಯಕವಾಗಿತ್ತು. ವಿದ್ಯಾರ್ಥಿಗಳ ದಾಸೋಹಕ್ಕಾಗಿ ಕನ್ನಡ ಅಭಿಮಾನಿಗಳ ಮನೆ ಮನೆಗೆ ಹೋಗಿ ಶಾಂತಿ ವರ್ಧಕ ಮುಷ್ಟಿ ಫಂಡ್ ಸ್ಥಾಪಿಸಿದರು.

ರಜಾಕಾರದ ಹಾವಳಿಯ ಸಂದರ್ಭದಲ್ಲಿ ವಿದ್ಯಾರ್ಥಿಗಳನ್ನು ಸೊಲ್ಲಾಪುರಕ್ಕೆ ಕರೆದುಕೊಂಡು ಹೋಗಿ ಹೋರಾಟ ಮಾಡಿ ಕನ್ನಡ ಶಾಲೆ ಪ್ರಾರಂಭಿಸಿದ್ದು ಈಗ ಇತಿಹಾಸ. ಬಡ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದೆಂದು ಹಳ್ಳಿಹಳ್ಳಿಗೆ ಸಂಚರಿಸಿ ದವಸ ಧಾನ್ಯ ಸಂಗ್ರಹಿಸಿ ಭಾಲ್ಕಿಯಲ್ಲಿ ಹಾನಗಲ್ ಕುಮಾರಸ್ವಾಮಿ ಉಚಿತ ಪ್ರಸಾದ ನಿಲಯವನ್ನು ನಿರ್ಮಿಸಿದರು. ಅವರು ನಿಸ್ವಾರ್ಥತೆ ಸಮರ್ಪಣಾ ಭಾವದಿಂದ ಗೈದ ಸೇವೆ ಅವಿಸ್ಮರಣೆಯ ಹಾಗೂ ಅನನ್ಯ. ಕರ್ನಾಟಕ ಏಕೀಕರಣದಲ್ಲಿ ಶ್ರೀಗಳ ಪಾತ್ರ ಅತ್ಯಂತ ಪ್ರೇರಣದಾಯಕವಾಗಿತ್ತು. ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಾ ಅಸ್ಪೃಶ್ಯತೆಯನ್ನು ಹೋಗಲಾಡಿಸಲು ಶ್ರಮಪಟ್ಟರು.

ಸಮಾನತೆಯ ಹರಿಕಾರರಾಗಿ ಸಮಾನತೆಗೋಸ್ಕರ ಸಮಾಜದ ತುಳಿತಕ್ಕೆ ಒಳಗಾದವರಿಗೆ ವಿವಿಧ ರೀತಿಯಲ್ಲಿ ನೆರವಾದರು. ಆಧ್ಯಾತ್ಮಿಕ, ಸಾಮಾಜಿಕ ಹಾಗೂ ಕಾಯಕ ನಿಷ್ಠೆಯಿಂದ ಜಗತ್ತಿನಲ್ಲಿಯೇ ವಿಶಿಷ್ಟ ಕ್ಷೇತ್ರವನ್ನಾಗಿ ಪರಿವರ್ತಿಸಿದ ಪ್ರವರ್ತಕ. ಭಾಲ್ಕಿಯ ನಡೆದಾಡುವ ದೇವರು, ಶತಮಾನದ ಪುರುಷ, ತ್ರಿವಿಧ ದಾಸೋಹಿ (ಅನ್ನ, ಅಕ್ಷರ, ದಾಸೋಹ) ಅಪೂರ್ವ ರತ್ನ ಹೀಗೆ ತಮ್ಮ ಅನೇಕ ಸಮಾಜ ಉದ್ಧಾರದ ಕೆಲಸ ಕಾರ್ಯಗಳಿಂದ ಹೆಸರುವಾಸಿಯಾಗಿದ್ದಾರೆ.

ಡಾ. ಚನ್ನಬಸವ ಪಟ್ಟದ್ದೇವರು ಹುಟ್ಟಿದ್ದು 22ನೇ ತಾರೀಖು ಲಿಂಗೈಕ್ಯರಾಗಿದ್ದು ಕೂಡ 22ನೇ ತಾರೀಖು. ಇವರು ಈ ನಾಡಿನ ದಿವ್ಯ ಶಕ್ತಿ. ತಮ್ಮ ವ್ಯಕ್ತಿತ್ವವನ್ನು ನಾಡಿಗೆ ಕೊಡುಗೆಯಾಗಿ ನೀಡಿದ ಆದರ್ಶ ವ್ಯಕ್ತಿಯಾಗಿದ್ದಾರೆ.



ಡಾ. ಚೆನ್ನಬಸವ ಪಟ್ಟದೇವರ ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ ಕಾರ್ಯ ಅವಿಸ್ಮರಣೀಯ. ಕರ್ನಾಟಕ ಏಕೀಕರಣದ ಸಂದರ್ಭದಲ್ಲಿ ರೈಲು ರೋಕು ಮಾಡುವ ಮೂಲಕ ಈ ಭಾಗವನ್ನು ಕರ್ನಾಟಕದಲ್ಲಿ ಉಳಿಯುವಂತೆ ಮಾಡಿದ ಅಪ್ರತಿಮ ಹೋರಾಟಗಾರರು.

-ಶಶಿಧರ ಕೋಸಂಬೆ, ಅಧ್ಯಕ್ಷರು ರಾಜ್ಯ ಮಕ್ಕಳ ಹಕ್ಕುಗಳ ಆಯೋಗ, ಬೆಂಗಳೂರು



ಲಿಂ. ಡಾ. ಚೆನ್ನಬಸವ ಪಟ್ಟದೇವರು ಗಡಿ ಭಾಗದಲ್ಲಿ ಹೋರಾಟವನ್ನು ಮಾಡಿ ಕನ್ನಡವನ್ನು ಕಟ್ಟಿ ಬೆಳೆಸಿದರು. ಬಸವಣ್ಣನೇ ಧರ್ಮ ಗುರು, ವಚನ ಸಾಹಿತ್ಯವೇ ಧರ್ಮಗ್ರಂಥ ಎಂದು ಅಪ್ಪಿಕೊಂಡು ಅದರಂತೆ ಬದುಕು ಸಾಗಿಸಿದ ಶ್ರೀಗಳ ಆದರ್ಶ ನಮ್ಮೆಲ್ಲರಿಗೂ ಪ್ರೇರಣೆಯಾಗಬೇಕು.

-ಸಾಗರ್ ಈಶ್ವರ ಖಂಡ್ರೆ ಸಂಸದರು ಬೀದರ್

## ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸಿ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಐದು ವರ್ಷ ಒಳಪಟ್ಟ ಮಕ್ಕಳಿಗೆ ಪ್ರತಿಯೊಬ್ಬರು ಪೋಲಿಯೋ ಲಸಿಕೆ ಹಾಕಿಸಬೇಂಕೆಂದು ತಹಶಿಲ್ದಾರ್ ಮಂಜುನಾಥ್ ಕರೆ ನೀಡಿದರು.

ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಅವರಣದಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿ ನಂತರ ಕಾರ್ಯಕ್ರಮದಲ್ಲಿ ಮಾತನಾಡಿ ಸರಕಾರದ ಆದೇಶದಂತೆ ಪ್ರತಿವರ್ಷ ಡಿಸೆಂಬರ್ 21ರಂದು ತಪ್ಪದೇ ಲಸಿಕೆ ಹಾಕಿಸಿ ಎಂದು ತಿಳಿಸಿದರು. ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳಿಗೂ ಜಿಲ್ಲಾಧಿಕಾರಿಗಳು ಸೂಚಿಸಿದ್ದು, ಪ್ರತಿ ಪೋಷಕರು ಐದು ವರ್ಷ ಒಳ ಪಟ್ಟ ಮಕ್ಕಳಿಗೆ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ಆರೋಗ್ಯವಂತ ಸಮಾಜಕ್ಕೆ ನಿರ್ಮಾಣಕ್ಕೆ ಕಾರಣರಾಗಬೇಕು ಎಂದು ತಿಳಿಸಿದರು.



ಪ್ರಭಾರ ತಾಲೂಕು ಆರೋಗ್ಯಾಧಿಕಾರಿ ದರ್ಶನ್ ಮಾತನಾಡಿ, ಮಕ್ಕಳ ಆರೋಗ್ಯಕ್ಕಾಗಿ ಸರಕಾರ ಸಾವಿರಾರು ಕೋಟಿ ರುಗಳನ್ನು ಸಾರ್ವಜನಿಕ ಆಸ್ಪತ್ರೆಗಳಿಗೆ ವ್ಯಮಾಡುತ್ತಿದ್ದು, ಸರಿಯಾದ ಸಮಯಕ್ಕೆ ಉಚಿತವಾಗಿ ಸಿಗುವ ಚಿಕಿತ್ಸೆಯನ್ನು ಪಡೆದು ಪರಿಪೂರ್ಣ ಆರೋಗ್ಯವಂತರಾಗಲಿ ಎಂದರು.

ನಗರಸಭೆ ಆಯುಕ್ತರಾದ ಮಾನಸ ಮಾತನಾಡಿದರು. ಕಾರ್ಯಕ್ರಮದಲ್ಲಿ ಡಾ ಶಿವಶಂಕರ್, ಡಾ ಸುಜಾತ ಡಾ ಸುರೇಶ್, ಡಾ. ದೀಪ್ತಿ, ಡಾ ಸತೀಶ ಕುಮಾರ್, ಡಾ. ಉಮೇಶ್, ಸಿಡಿಪಿಓ ಹರೀಶ್ ಇತರರಿದ್ದರು.

## ಹುಲ್ಲಿನ ಬಣವಿಗೆ ಆಕಸ್ಮಿಕ ಬೆಂಕಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆ ಕನಕಗಿರಿ ತಾಲೂಕಿನ ಕರಡೋಣಿ ಗ್ರಾಮದ ಯಂಕಪ್ಪ ಲಕ್ಷ್ಮಪ್ಪ ಎಂಬ ರೈತನ ಹೊಲದಲ್ಲಿ ನಾಲ್ಕು ಟ್ರ್ಯಾಕ್ಟರ್‌ಗಳಷ್ಟು ಹುಲ್ಲಿನ ಬಣವೆಯನ್ನು ಸಂಗ್ರಹಿಸಿ ಇಟ್ಟಿದ್ದ ಸ್ಥಳದಲ್ಲಿ ಶುಕ್ರವಾರ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡ ಘಟನೆ ನಡೆದಿದೆ.

ಮಧ್ಯಾಹ್ನ ಸುಮಾರು 12.30 ಗಂಟೆ ವೇಳೆಗೆ ಬಣವೆಯಿಂದ ಹೊಗೆ ಎದ್ದಿರುವುದನ್ನು ಗಮನಿಸಿದ ಸ್ಥಳೀಯರು ತಕ್ಷಣವೇ ಬಣವೆ ಮಾಲಕರಿಗೆ ಹಾಗೂ ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದ್ದಾರೆ. ಬೆಂಕಿ ಕ್ಷಣಾರ್ಧದಲ್ಲಿ ತೀವ್ರಗೊಂಡ ಪರಿಣಾಮ ನಾಲ್ಕು ಟ್ರ್ಯಾಕ್ಟರ್‌ಗಳಷ್ಟು ಹುಲ್ಲಿನ ಬಣವೆ ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿದೆ.

ಮಾಹಿತಿ ಪಡೆದ ತಕ್ಷಣವೇ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಸುಮಾರು ಎರಡು ಗಂಟೆಗಳ ಕಾಲ ಶ್ರಮಪಟ್ಟು ಬೆಂಕಿಯನ್ನು



ಸಂಪೂರ್ಣವಾಗಿ ನಂದಿಸಿದ್ದಾರೆ ಘಟನೆಯಲ್ಲಿ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂದು ತಿಳಿದು ಬಂದಿದೆ.

ಘಟನಾ ಸ್ಥಳಕ್ಕೆ ಅಧಿಕಾರಿಗಳಾದ ಕುಲಕರ್ಣಿ ಕುಮಾರ್ ಹಾಗೂ ಗ್ರಾಮ ಸಹಾಯಕ ರವಿಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು ಸರ್ಕಾರದಿಂದ ಪರಿಹಾರ ಒದಗಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

## ಕಾಂಗ್ರೆಸ್‌ನಿಂದ ಒಳ ಮೀಸಲಾತಿಗಾಗಿ ಮಹಾ ಮೋಸ: ಕಾರಜೋಳ

• ಮಲ್ಲಮ್ಮ ನುಡಿ ವಾರ್ತೆ ಬೀದರ್

2023ರ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷವು ದಲಿತರ ಮತ ಕಬಳಿಸಲು ಒಳ ಮೀಸಲಾತಿ ಜಾರಿ ಮಾಡುವುದಾಗಿ ಹೇಳಿ ತನ್ನ ಚುನಾವಣೆ ಪ್ರಣಾಳಿಕೆಯಲ್ಲಿ ಅದನ್ನು ಸೇರಿಸಿರುವ ಕಾಂಗ್ರೆಸ್ ಪಕ್ಷ ಅದನ್ನು ಇಲ್ಲಿಯ ವರೆಗೂ ಒಂದಾದರ ಮೇಲೊಂದು ಗೊಂದಲ ಸೃಷ್ಟಿಸಿಟ್ಟು ಜಾತಿ ಜಾತಿಗಳ ನಡುವ ಸಂಘರ್ಷ ಏರ್ಪಡಲು ವೇದಿಕೆ ಸಿದ್ದಪಡಿಸಿ ದಲಿತರಿಗೆ ಮಹಾ ಮೋಸ ಮಾಡಿದೆ ಎಂದು ಮಾಜಿ ಉಪ ಮುಖ್ಯಮಂತ್ರಿಗಳು ಹಾಗೂ ಹಾಲಿ ಸಂಸದ ಗೋವಿಂದ ಕಾರಜೋಳ ಆರೋಪಿಸಿದರು.



ರವಿವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿ, 1950ರಲ್ಲಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ 6, ಪರಿಶಿಷ್ಟಪಂಗಡಯಾದಿಯಲ್ಲಿ 3 ಜಾತಿಗಳನ್ನು ಮಾತ್ರ ಸೇರಿಸಲಾಗಿತ್ತು. ಆದರೆ ಈಗ ಎಸ್.ಸಿ ಜಾತಿಯಲ್ಲಿ 101 ಹಾಗೂ ಎಸ್.ಟಿ ಜಾತಿಯಲ್ಲಿ 56 ಜಾತಿಗಳನ್ನು ಸೇರಿಸಲಾಗಿದೆ. ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಹರಿಯಾಣ, ತೆಲಂಗಾಣಾ, ಪಂಜಾಬ, ತಮಿಳುನಾಡು ಹಾಗೂ ಆಂದ್ರ ಪ್ರದೇಶ ಸರ್ಕಾರಗಳು ಒಳ ಮೀಸಲಾತಿ ಜಾರಿ ಮಾಡಿವೆ. ಆದರೆ ಇಲ್ಲಿಯ ರಾಜ್ಯ ಸರ್ಕಾರ ಮೀನಾಮೇಷ ಏಣಿಸುತ್ತ 35 ಕ್ಯಾಬಿನೆಟ್‌ನಲ್ಲಿ ಜಾರಿ ಮಾಡಿದರೂ ಒಂದಲ್ಲೊಂದು ಗೊಂದಲ ಸೃಷ್ಟಿ ಮಾಡಿಟ್ಟಿದ್ದಾರೆ. ಎ.ಕೆ,ಎ.ಡಿ ಅವರ ಮೀಸಲಾತಿ ಪ್ರಮಾನ 1ಪ್ರತಿಶತ ಇದ್ದುದು ತೆಗೆದು ಹಾಕಿ ಅವರಿಗೆ ಅನ್ಯಾಯ ಎಸಗಲಾಗಿದೆ. 59 ಪಂಗಡಗಳು ತಮಗೆ ಮೋಸ ಆಗಿದೆ ಎಂದು ಕೋರ್ಟ್ ಮೆಟ್ಟಿಲೇರಿರುವರು. ಹೀಗೆ ದಿನಕ್ಕೊಬ್ಬರು ಕೋರ್ಟ್‌ಗೆ ಹೋಗಲಿ, ಪರಸ್ಪರ ಜಗಳಾಡಲಿ ಇದರಿಂದ ತಮಗೆ ಲಾಭ ಎಂದುಕೊಂಡು ಕಾಂಗ್ರೆಸ್ ಸರ್ಕಾರ ಹೊರಟಿದೆ. ಸಮಾಜ ಕಲ್ಯಾಣ ಸಚಿವ ಮಹಾದೇವಪ್ಪ ಅವರ ಅಣತಿಯಂತೆ ಸಿದ್ಧರಾಮಯ್ಯ ನಡೆದುಕೊಳ್ಳುತ್ತಿದ್ದಾರೆ. ಈ ತಿಂಗಳ 18ರಂದು ಬೆಳಗಾವಿ ಅಧಿವೇಶನದಲ್ಲಿ ಇದಕ್ಕೆ ಸಂಬಂಧಪಟ್ಟಂತೆ ಪ್ರತ್ಯೇಕ್ ಬಿಲ್ ಮಂಡಿಸಿ ಚರ್ಚೆ ಮಾಡದೇ ಪಾಸ್ ಮಾಡಿರುವುದು ಅತ್ಯಂತ ದುರಂತದ ಸಂಗತಿ. ಈ ಮಸುದೆಯಲ್ಲಿ ಒಳ ಮೀಸಲಾತಿಯಂತೆ ನೇರ ನೇಮಕಾತಿ ಮಾಡಿ ಪದೊನ್ನತೆ ಮಾಡದೇ ಇರುವ ಮೂಲಕ ಸಂವಿಧಾನದ ಆಶೆಯವನ್ನು ಗಾಳಿಗೆ ತೂರಿ ದಲಿತರನ್ನು ಸದಾ ಮೋಸ ಮಾಡುತ್ತ ಸಾಗಿದ್ದಾರೆ ಎಂದು ದೂರಿದರು.

ದಲಿತರ ಓಟ್ ಬ್ಯಾಂಕ್‌ನಿಂದ 60 ವರ್ಷಗಳ ಕಾಲ ಈ ದೇಶದಲ್ಲಿ ಅಧಿಕಾರ ಹಿಡಿದಿರುವ ಕಾಂಗ್ರೆಸ್ ಪಕ್ಷ ದಲಿತರನ್ನು ಸದಾ ಒಂದಲ್ಲ ಒಂದು ರೀತಿಯಲ್ಲಿ ಅವಮಾನ ಮಾಡುವುದೇ ಅವರ ಪರಮ ಧ್ಯೆಯವಾಗಿದೆ. 39 ಸಾವಿರ ಕೋಟಿ ರೂಪಿಯಿ ಎಸ್.ಪಿ,ಟಿ.ಎಸ್.ಪಿ ಹಣ ಗ್ಯಾರಂಟಿಗಳಿಗೆ ಬಳಿಸಿ ದಲಿತರ ಹಕ್ಕು ನಿರ್ನಾಮ ಮಾಡಲು ಹೊರಟಿದ್ದಾರೆ. ಹಿಂದೆ ನಮ್ಮ ಸರ್ಕಾರ ಅಧಿಕಾರದಲ್ಲಿದ್ದಾಗ ಜನರಿಗೆ ಭರವಸೆ ನೀಡದಿದ್ದರೂ ದಲಿತರ ಹಿತ ಗಮನದಲ್ಲಿರಿಸಿ 15 ಪ್ರತಿಶತ ಇದ್ದ ಮೀಸಲಾತಿ 17ಕ್ಕೆ ಹಾಗೂ ಪರಿಶಿಷ್ಟ ಪಂಗಡ ಒಳ ಮೀಸಲಾತಿ ಪ್ರಮಾಣ 5 ಇದ್ದುದು 8ಕ್ಕೆ ಏರಿಸಲಾಗಿತ್ತು. ಆದರೆ ಈ ಸರ್ಕಾರ ದಲಿತರಿಗೆ ದಾರಿ ತಪ್ಪಿಸಲು ಮೀಸಲಾತಿ ಪ್ರಮಾಣ ಮೀರಿ ಪ್ರತಿಯೊಬ್ಬರು ಕೋರ್ಟ್ ಮೆಟ್ಟಿಲೇರುವಂತೆ ಮಾಡುತ್ತಿದೆ. ನಾಗಮೋಹನದಾಸ ವರದಿ ಅಥವಾ ನಮ್ಮ ಸರ್ಕಾರವಿದ್ದಾಗ ರಚನೆಯಾಗಿದ್ದ ಮಾಧುಸ್ವಾಮಿ ವರದಿಯಾದರೂ ಜಾರಿ ಮಾಡಲಿ ಉಳಿದ ಯಾವುದೇ ವರದಿಗಳಿಗೆ ನಾವು ಒಪ್ಪುವುದಿಲ್ಲವೆಂದು ಕಾರಜೋಳ ಸ್ಪಷ್ಟಪಡಿಸಿದರು.

ಮಾದಿಗ ದಂಡೋರ ಮಾದಿಗ ಮೀಸಲಾತಿ ಹೋರಾಟ ಸಮಿತಿ ರಾಜ್ಯ ಕಾರ್ಯಾಧ್ಯಕ್ಷ ಫರ್ನಾಂಡಿಸ್ ಹಿಪ್ಪಳಗಾಂವ, ಜಿಲ್ಲಾಧ್ಯಕ್ಷ ವಿಜಯಕುಮಾರ ಹಿಪ್ಪಳಗಾಂವ, ಜಿಲ್ಲಾ ಉಪಾಧ್ಯಕ್ಷ ಕಮಲಾಕರ ಹೆಗಡೆ ಇನ್ನಿತರರಿದ್ದರು.

## ಯುವ ಸಬಲೀಕರಣಕ್ಕೆ ಕೇಳಚಂದ್ರ ಕೌಶಲ ಕೇಂದ್ರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕೇಳಚಂದ್ರ ಪ್ರತಿಷ್ಠಾನವು ಸರ್ವಜ್ಞನಗರದ ಶಾಸಕರೂ ಆದ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ಬೆಂಬಲದೊಂದಿಗೆ ಕೇಳಚಂದ್ರ ಕೌಶಲ್ಯ ಅಭಿವೃದ್ಧಿ ಕೇಂದ್ರದಲ್ಲಿ ಉಚಿತ ಕೌಶಲ್ಯ ತರಬೇತಿಗಾಗಿ 15 ನೇ ಬ್ಯಾಚ್‌ಗೆ ಅರ್ಜಿ ಆಹ್ವಾನಿಸಿದೆ.

ಸರ್ವಜ್ಞನಗರ ಕ್ಷೇತ್ರದ ಯುವಜನರಿಗೆ ಉದ್ಯೋಗಾವಕಾಶ ಕಲ್ಪಿಸುವ ಜತೆಗೆ ಸ್ವಾವಲಂಬನೆಯ ಜೀವನ ಕಟ್ಟಿಕೊಡುವ ಗುರಿಯೊಂದಿಗೆ 2026ರ ಜನವರಿ 6 ರಂದು ಜೀವನಹಳ್ಳಿ ಕೇಂದ್ರ ಶಾಖೆಯಲ್ಲಿ ಹೊಸ ಬ್ಯಾಚ್ ಪ್ರಾರಂಭವಾಗಲಿದೆ.

ಈ ಕಾರ್ಯಕ್ರಮದಲ್ಲಿ ಎಲೆಕ್ಟ್ರಿಕಲ್ ಮತ್ತು ಮೊಬೈಲ್ ರಿಪೇರಿ, ಸರ್ವಿಸಿಂಗ್ ಮತ್ತು ಡೇಟಾ ಎಂಟ್ರಿ ಆಪರೇಟಿಂಗ್ - ಈ 3 ಕ್ಷೇತ್ರಗಳಲ್ಲಿ ಔದ್ಯೋಗಿಕ ತರಬೇತಿಯನ್ನು ನೀಡಲಾಗುತ್ತದೆ. ಈಗಿನ ಮಾರುಕಟ್ಟೆ ಅಗತ್ಯಗಳಿಗೆ ಅನುಗುಣವಾಗಿ ಪ್ರಾಯೋಗಿಕ ಕೌಶಲ್ಯಗಳೊಂದಿಗೆ ಯುವಜನರನ್ನು ಸಜ್ಜುಗೊಳಿಸಲು ಈ ಕಾರ್ಯಕ್ರಮಗಳನ್ನು ವಿನ್ಯಾಸಗೊಳಿಸಲಾಗಿದೆ.

**ಅರ್ಹತಾ ಮಾನದಂಡ:** ಕನಿಷ್ಠ 9 ನೇ ತರಗತಿಯ ಅರ್ಹತೆ, ಅರ್ಜಿದಾರರು 17 ರಿಂದ 32 ವರ್ಷ ವಯಸ್ಸಿನೊಳಗಿರಬೇಕು.

**ಸ್ಥಳ:** ಬೆಂಗಳೂರಿನ ಕಾಕ್ಸ್‌ಟೌನ್‌ನಲ್ಲಿರುವ ಅಂಬೇಡ್ಕರ್ ಭವನದಲ್ಲಿ ತರಬೇತಿ ನಡೆಸಲಾಗುತ್ತದೆ.




ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ವಿವರಗಳನ್ನು ಪಡೆಯಲು ಮತ್ತು ಲತಾ ಗಣೇಶ್ (98451 48710) ಅವರನ್ನು ಸಂಪರ್ಕಿಸುವ ಮೂಲಕ ನೋಂದಾಯಿಸಿಕೊಳ್ಳಬಹುದು

ಕೇಳಚಂದ್ರ ಪ್ರತಿಷ್ಠಾನದಡಿ ಕೌಶಲ್ಯ ಅಭಿವೃದ್ಧಿ ಕೇಂದ್ರ ಅಲ್ಲದೇ, ಆರೋಗ್ಯ, ಶಿಕ್ಷಣ ಮತ್ತು ನಾಗರಿಕ ಮೂಲಸೌಕರ್ಯ ಸೇರಿದಂತೆ ಸುಮಾರು ಒಂದು ದಶಕದಿಂದ ಜನೋಪಯೋಗಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿಕೊಂಡು ಬರಲಾಗುತ್ತಿದೆ.

ಕೇಳಚಂದ್ರ ಫೌಂಡೇಶನ್ ಮೂಲಕ ಕೆ.ಜೆ. ಜಾರ್ಜ್ ಅವರು ಸರ್ವಜ್ಞನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳ ನಿವಾಸಿಗಳು ಅದರಲ್ಲೂ ವಿಶೇಷವಾಗಿ ಆರ್ಥಿಕವಾಗಿ ಹಿಂದುಳಿದವರಿಗೆ ಅಗತ್ಯ ಅನುಕೂಲಗಳನ್ನು ಕಲ್ಪಿಸುತ್ತಿದ್ದಾರೆ.

2014 ರಲ್ಲಿ ಸ್ಥಾಪನೆಯಾದ ಸರ್ವಜ್ಞ ಆರೋಗ್ಯ ರಕ್ಷಣಾ ಸಂಸ್ಥೆ (ಖಊಅಖ) ಪ್ರತಿಷ್ಠಾನದ ಪ್ರಮುಖ ಸಂಸ್ಥೆಯಾಗಿದೆ. 2014ರ ಏಪ್ರಿಲ್ ಮತ್ತು 2025 ರ ಮಾರ್ಚ್ ಅವಧಿಯಲ್ಲಿ ಖಊಅಖ 34,367 ಉಚಿತ ಡಯಾಲಿಸಿಸ್ ಗೆ ನೆರವಾಗಿದೆ.

ಬೆಂಗಳೂರಿನ ಬ್ಯಾಪ್ಟಿಸ್ಟ್ ಆಸ್ಪತ್ರೆಯ ಸಹಯೋಗದೊಂದಿಗೆ ಈ ಪ್ರಾಥಮಿಕ ಆರೋಗ್ಯ ಕೇಂದ್ರವು 1.07 ಲಕ್ಷಕ್ಕೂ ಹೆಚ್ಚು ಸಮಾಲೋಚನೆಗಳನ್ನು ನಡೆಸಿದೆ. ಮಧುಮೇಹ ಮತ್ತು ಅಧಿಕ ರಕ್ತದೊತ್ತಡದಂತಹ ಸಮಸ್ಯೆ ಇರುವವರಿಗೂ ಚಿಕಿತ್ಸೆ ನೀಡಲಾಗಿದೆ.

ಆರೋಗ್ಯ ರಕ್ಷಣೆಯ ಹೊರತಾಗಿ ಶಿಕ್ಷಣ ಮತ್ತು ಮಕ್ಕಳ ಅಭಿವೃದ್ಧಿ, ಸರ್ಕಾರಿ ಶಾಲೆಗಳು ಮತ್ತು ಅಂಗನವಾಡಿಗಳನ್ನು ಮೂಲಸೌಕರ್ಯ ಸುಧಾರಣೆ ಮತ್ತು ಉದ್ಯಾನವನಗಳು, ಆಟದ ಮೈದಾನಗಳು, ಸಾರ್ವಜನಿಕ ಸೌಲಭ್ಯಗಳು, ರಸ್ತೆಗಳು ಮತ್ತು ಒಳಚರಂಡಿ ವ್ಯವಸ್ಥೆಗಳು ಸೇರಿದಂತೆ ನಾಗರಿಕ ಮೂಲಸೌಕರ್ಯ ಕಲ್ಪಿಸುವಲ್ಲಿ ಪ್ರತಿಷ್ಠಾನದ ಪಾತ್ರ ಮಹತ್ವದ್ದು.

"ಕೌಶಲ್ಯ ಅಭಿವೃದ್ಧಿಯು ಸುಸ್ಥಿರ ಜೀವನೋಪಾಯಕ್ಕೆ ದಾರಿಯಾಗಿದೆ. ಕೇಳಚಂದ್ರ ಕೌಶಲ್ಯ ಅಭಿವೃದ್ಧಿ ಕೇಂದ್ರದ ಮೂಲಕ, ಸರ್ವಜ್ಞನಗರದ ಯುವಜನರಿಗೆ ಉದ್ಯೋಗ ಮತ್ತು ಸ್ವಾವಲಂಬನೆಯ ಬದುಕು ಕಟ್ಟಿಕೊಳ್ಳಲು ನೆರವು ಒದಗಿಸಲಾಗುವುದು. ಉದ್ಯೋಗಕ್ಕೆ ಪೂರಕವಾದ ಪ್ರಾಯೋಗಿಕ ಕೌಶಲ್ಯಗಳೊಂದಿಗೆ ಯುವಜನರನ್ನು ಸಜ್ಜುಗೊಳಿಸುವುದು ನಮ್ಮ ಗುರಿಯಾಗಿದೆ. ತರಬೇತಿ ಪಡೆದ ಪ್ರತಿಯೊಬ್ಬರು ಕೇವಲ ಒಂದು ಕುಟುಂಬ ಮಾತ್ರವಲ್ಲ, ಇಡೀ ಸಮುದಾಯಕ್ಕೆ ಬಲ ತುಂಬುತ್ತಾರೆ. ಕೇಳಚಂದ್ರ ಫೌಂಡೇಶನ್ ತಳಮಟ್ಟದಿಂದ ಸಮಗ್ರ ಅಭಿವೃದ್ಧಿಗೆ ಒತ್ತು ನೀಡುತ್ತದೆ. ಜನರ ಆರೋಗ್ಯ ರಕ್ಷಣೆ, ಜೀವನೋಪಾಯಕ್ಕೆ ಅಗತ್ಯ ನೆರವು ಒದಗಿಸಲು ಬದ್ಧ".

-ಕೆ.ಜೆ. ಜಾರ್ಜ್, ಇಂಧನ ಸಚಿವರು

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)